22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 278 | ನವದೆಹಲಿ | ಬೆಲೆ ₹ 10 | ಏಪ್ರಿಲ್ 14 2025, ಸೋಮವಾರ


ಸಮಾಜ ಕಲ್ಯಾಣ ಇಲಾಖೆ



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು



ವಿದ್ಯಾವಂತರಾಗಿ,
ಸಂಘಟಿತರಾಗಿ ಮತ್ತು
ಉತ್ತೇಜಿತರಾಗಿರಿ..!
-ಡಾ. ಬಿ.ಆರ್. ಅಂಬೇಡ್ಕರ್

134ನೇ ಜನ್ಮದಿನಾಚರಣೆ

ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ, ಭಾರತ ರತ್ನ
ಡಾ. ಬಿ.ಆರ್. ಅಂಬೇಡ್ಕರ್ ರವರ
ಪ್ರತಿಮೆಗೆ ಮಾಲಾರ್ಪಣೆ
ಏಪ್ರಿಲ್ 14, 2025 ಸೋಮವಾರ, ಬೆಳಿಗ್ಗೆ 10.30 ಗಂಟೆಗೆ
ವಿಧಾನಸೌಧದ ಪೂರ್ವ ದ್ವಾರ, ಬೆಂಗಳೂರು

ವೇದಿಕೆ ಕಾರ್ಯಕ್ರಮ
ವಿಧಾನಸೌಧದ ಮುಂಭಾಗ, ಪೂರ್ವದ್ವಾರ ಭವ್ಯ ಮೆಟ್ಟಿಲುಗಳು, ಬೆಂಗಳೂರು
ಸಮಯ - ಬೆಳಿಗ್ಗೆ 10.45 ಗಂಟೆಗೆ



ಡಾ. ಹೆಚ್.ಸಿ. ಮಹದೇವಪ್ಪ, ಮಾನ್ಯ ಸಮಾಜ ಕಲ್ಯಾಣ ಸಚಿವರು, ಇಲಾಖೆಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸುತ್ತಿರುವುದು.

``ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ

@SWDGok

## ನಿತ್ಯ ಪಂಚಾಂಗ 14.04.2025 ಸೋಮವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ

ಪಾಡ್ಯ, ಸ್ವಾತಿ ನಕ್ಷತ್ರ, ಡಾ. ಅಂಬೇಡ್ಕರ್‌ಜಯಂತಿ, ಸೌರಯುಗಾದಿ, ಚಿತ್ರವಿಶು, ವೈಶಾಖಿ, ಬೆಂಗಾಲಿ ಹೊಸವರ್ಷ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ವಿಧಾನಪರಿಷತ್ ನಾಲ್ಕು ಸ್ಥಾನಕ್ಕೆ ನೇಮಕಾತಿ

# ವಿವಿಧ ನಾಯಕರಿಂದ ಪ್ರತ್ಯೇಕ ಪಟ್ಟಿ ಸಲ್ಲಿಕೆ

**ಬೆಂಗಳೂರು, ಏ.13–** ವಿಧಾನಪರಿಷತ್‌ನಲ್ಲಿ ಖಾಲಿ ಇರುವ ನಾಲ್ಕು ಸ್ಥಾನದ ಸದಸ್ಯರ ನೇಮಕಾತಿಗೆ ಭಾರೀ ಪೈಪೋಟ ನಡೆಯುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿಗರ ನಡುವೆ ಪೈಪೋಟಿ ಏರ್ಪಟ್ಟಿದೆ. ಇತ್ತೀಚೆಗೆ ದೆಹಲಿ ಹಾಗೂ ಗುಜರಾತ್‌ನಲ್ಲಿ ನಡೆದ ಪ್ರತ್ಯೇಕ ಸಭೆಗಳಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯನವರು ಪ್ರತ್ಯೇಕ ಪಟ್ಟಿಯನ್ನು ಹೈಕಮಾಂಡ್ ನಾಯಕರಿಗೆ ಸಲ್ಲಿಸಿದ್ದಾರೆ. ಇಬ್ಬರೂ ತಲಾ 10 ಮಂದಿ ಸದಸ್ಯರ ಪಟ್ಟಿಯನ್ನು ಸಲ್ಲಿಸಿದ್ದು, ತಮ್ಮ ಬೆಂಬಲಿಗರಿಗೆ ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ. ಒಕ್ಕಲಿಗ ಸಮುದಾಯ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ಪರಿಶಿಷ್ಟ ಜಾತಿಗೆ ತಲಾ ಒಂದು ಸ್ಥಾನಗಳನ್ನು ನೀಡಲು ಈ ಬಾರಿ ನಿರ್ಧರಿಸಲಾಗಿದೆ. ಒಕ್ಕಲಿಗ ಸಮುದಾಯದಿಂದ ಬಿ.ಎಲ್.ಶಂಕರ್ ಅವರ ಹೆಸರು ಬಹುತೇಕ ಖಚಿತವಾಗಿತ್ತು. ಆದರೆ ಅದಕ್ಕೆ ಅಲ್ಪಸಂಖ್ಯಾತ ಸಮುದಾಯದ ಕೆಲ ನಾಯಕರು ವಿರೋಧ ವ್ಯಕ್ತಪಡಿಸಿದ್ದಾರೆ. ಬಿ.ಎಲ್.ಶಂಕರ್ ಆರ್‌ಎಸ್‌ಎಸ್ ಜೊತೆ ಗುರುತಿಸಿಕೊಂಡಿದ್ದು, ಅವರ ನೇಮಕಾತಿ ಮಾಡಿದರೆ ಅಲ್ಪಸಂಖ್ಯಾತರಿಗೆ ಕಾಂಗ್ರೆಸ್ ಮೇಲೆ ವಿಶ್ವಾಸ ತಗ್ಗುವಂತಾಗಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ದೂರು ನೀಡಲಾಗಿದೆ. ಹೀಗಾಗಿ ರಘುನಂದನ್ ರಾಮಣ್ಣ ಅವರ ಹೆಸರು ಪರ್ಯಾಯವಾಗಿ ಚರ್ಚೆಗೆ ಬಂದಿದೆ. ರಮೇಶ್‌ಬಾಬು, ಮಾಲತಿ ಕೃಷ್ಣಮೂರ್ತಿ ಮತ್ತಿತರರ ಹೆಸರುಗಳು ಚರ್ಚೆಯಲ್ಲಿವೆ. ಈ ಹಿಂದೆ ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರರಾಗಿ ಕೆಲಸ ಮಾಡಿದ ಹಿರಿಯ ಪತ್ರಕರ್ತ ದಿನೇಶ್ ಅಮೀನ್ ಮಟ್ಟು, ಮೈಸೂರಿನ ಪತ್ರಕರ್ತ ಶಿವಕುಮಾರ್, ಮಾಜಿ ಸಂಸದ ವಿ.ಎಸ್. ಉಗ್ರಪ್ಪ, ದಲಿತ ಸಂಘರ್ಷ ಸಮಿತಿಯ ಡಿ.ಜಿ.ಸಾಗರ್ ಸೇರಿದಂತೆ ಹಲವರ ಹೆಸರುಗಳು ಚರ್ಚೆಯಲ್ಲಿದೆ. ಅಲ್ಪಸಂಖ್ಯಾತರ ಸಮುದಾಯದಿಂದ ಆಘಾ ಸುಲ್ತಾನ್ ಸೇರಿದಂತೆ ಇನ್ನೂ ಹಲವರ ಹೆಸರು ಚರ್ಚೆಯಲ್ಲಿವೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಯವರು ಸಲ್ಲಿಸಿರುವ ಪಟ್ಟಿಯನ್ನು ಪರಿಶೀಲಿಸಿ ಹೈಕಮಾಂಡ್ ಶೀಘ್ರವೇ ಅಂತಿಮ ಅಭ್ಯರ್ಥಿಗಳ ಪಟ್ಟಿಯನ್ನು ರಾಜ್ಯಕ್ಕೆ ರವಾನೆ ಮಾಡುವ ಸಾಧ್ಯತೆಯಿದೆ. ಮತ್ತಷ್ಟು ಮಂದಿ ಕೂಡ ವಿಧಾನಪರಿಷತ್ ನೇಮಕಗೊಳ್ಳಲು ತರಹೇವಾರಿ ಲಾಬಿ ಮಾಡುತ್ತಿದ್ದಾರೆ.

# ಘಾಟಿ ಕ್ಷೇತ್ರಕ್ಕೆ ಡಿ.ಕೆ.ಶಿವಕುಮಾರ್ ದಂಪತಿ ಭೇಟಿ



**ಬೆಂಗಳೂರು, ಏ.13:** ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ದಂಪತಿ ಘಾಟಿ ಸುಬ್ರಹ್ಮಣ್ಯ ಸ್ವಾಮಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದ್ದಾರೆ. ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ, ಮಾಜಿ ಶಾಸಕ ಟಿ.ವೆಂಕಟರಮಣಯ್ಯ ಕೂಡ ಇದ್ದರು.ಇಂದು ಬೆಳ್ಳಂಬೆಳಗ್ಗೆ ಕುಟುಂಬ ಸಮೇತರಾಗಿ ನರಸಿಂಹ ಸಮೇತ ಘಾಟಿ ಸುಬ್ರಮಣ್ಯನ ದರ್ಶನವನ್ನು ಡಿಕೆಶಿ ಮಾಡಿದ್ದಾರೆ. ಘಾಟಿ ಸುಬ್ರಹ್ಮಣ್ಯ ದೇವಸ್ಥಾನ ನಾಗದೋಷ, ಕುಜದೋಷ ಸೇರಿದಂತೆ ಸರ್ಪ ಸಂಸ್ಕಾರಕ್ಕೆ ಪ್ರಸಿದ್ದಿಯಾದ ದೇವಾಲಯವಾಗಿದೆ. ಈ ವೇಳೆ ಪೂರ್ಣಕುಂಭ ಮತ್ತು ವಾದ್ಯದೊಂದಿಗೆ ಡಿಕೆಶಿಗೆ ಸ್ವಾಗತ ಕೋರಲಾಯಿತು.ಅಧಿಕಾರಿಗಳು ದೇವಾಲಯದ ಆಡಳಿತ ಮಂಡಳಿ ಮತ್ತು ಕಾಂಗ್ರೆಸ್ ಮುಖಂಡರು ಭಾಗಿಯಾಗಿದ್ದರು. ಡಿಕೆಶಿ ಅರ್ಧಗಂಟೆ ಪೂಜೆಯಲ್ಲಿ ಭಾಗಿಯಾಗಿದ್ದರು. ಈ ವೇಳೆ ವಿಶೇಷ ಪೂಜೆ ನೆರವೇರಿಸಲಾಯಿತು.

## ಮುರ್ಷಿದಾಬಾದ್ ಹಿಂಸಾತ್ಮಕ ಪ್ರತಿಭಟನೆ

# ಕಾಂಗ್ರೆಸ್ ತುಷ್ಟೀಕರಣದ ಸಂಕೇತ ಸಂಸದ ಪಿ.ಸಿ.ಮೋಹನ್ ಆರೋಪ



**ಬೆಂಗಳೂರು, ಏ.13:** ಸರ್ಕಾರದ ಓಲೈಕೆ ರಾಜಕಾರಣದಿಂದಾಗಿ ಪಶ್ಚಿಮ ಬಂಗಾಳದ ಹಿಂಸಾಚಾರ ಪೀಡಿತ ಮುರ್ಷಿದಾಬಾದ್ ಜಿಲ್ಲೆಯಿಂದ ಹಿಂದೂಗಳು ಪಲಾಯನ ಮಾಡುತ್ತಿದ್ದಾರೆ ಎಂದು ಆರೋಪಿಸಿರುವ ಬಿಜೆಪಿ ನಾಯಕ ಪಿ.ಸಿ. ಮೋಹನ್, ಕರ್ನಾಟಕ ಕಾಂಗ್ರೆಸ್‌ನ ತುಷ್ಟೀಕರಣ ತಂತ್ರಗಳಿಂದ ಇಲ್ಲಿಯೂ ಇದೇ ರೀತಿಯ ಪರಿಸ್ಥಿತಿಗೆ ಕಾರಣವಾಗಬಹುದು ಎಂದು ಹೇಳಿದ್ದಾರೆ. ಸರ್ಕಾರದ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡುವ ರಾಜ್ಯ ಸರ್ಕಾರದ ಕ್ರಮವನ್ನು ತುಷ್ಟೀಕರಣ ತಂತ್ರ ಎಂದು ಕರೆದ ಬೆಂಗಳೂರು ಕೇಂದ್ರ ಸಂಸದರು, ಹಿಂದೂಗಳು ಎಚ್ಚರಗೊಳ್ಳುವಂತೆ ಕರೆ ನೀಡಿದ್ದಾರೆ. ಮುರ್ಷಿದಾಬಾದ್‌ನಲ್ಲಿ ನಡೆಯುತ್ತಿರುವ ಘಟನೆಗಳು ಪಶ್ಚಿಮ ಬಂಗಾಳ ರಾಜ್ಯ ಸರ್ಕಾರದ ಅಪಾಯಕಾರಿ ಓಲೈಕೆ ರಾಜಕಾರಣದ ನೇರ ಪರಿಣಾಮವಾಗಿದೆ. ಇದು ಹಿಂದೂಗಳನ್ನು ಪಲಾಯನ ಮಾಡುವಂತೆ ಮಾಡಿದೆ. ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿಯಂತಹ ಕರ್ನಾಟಕ ಕಾಂಗ್ರೆಸ್‌ನ ಓಲೈಕೆಯ ತಂತ್ರಗಳು ಸಹ ಇದೇ ರೀತಿಯ ಪರಿಸ್ಥಿತಿಗೆ ಕಾರಣವಾಗಬಹುದು. ಹಿಂದೂಗಳೇ, ಎದ್ದೇಳಿ!' ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಜನರು ತಮ್ಮ ಕುಟುಂಬಗಳು ಮತ್ತು ವಸ್ತುಗಳೊಂದಿಗೆ ಮುರ್ಷಿದಾಬಾದ್‌ನಿಂದ ಪಲಾಯನ ಮಾಡುತ್ತಿರುವುದನ್ನು ತೋರಿಸುವ ವಿಡಿಯೋವನ್ನು ಮೋಹನ್ ಹಂಚಿಕೊಂಡಿದ್ದಾರೆ. ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ವಿರೋಧಿಸಿ ನಡೆದ ಹಿಂಸಾತ್ಮಕ ಪ್ರತಿಭಟನೆಯಲ್ಲಿ ಮೂವರು ಸಾವಿಗೀಡಾಗಿದ್ದಾರೆ.

# ಮೀಸಲಾತಿ ಪರಿಷ್ಕರಣೆಗೆ ಶಿಫಾರಸು ನೀಡಿದರೆ ಅಧ್ಯಯನ: ಎಚ್.ಸಿ.ಮಹದೇವಪ್ಪ



**ಬೆಂಗಳೂರು, ಏ.13–** ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ವರದಿ ಆಧರಿಸಿ ಯಾರ ಹಕ್ಕುಗಳನ್ನೂ ಕಸಿಯುವ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಮೀಸಲಾತಿ ಪರಿಷ್ಕರಣೆ ಮಾಡಬೇಕು ಎಂದು ವರದಿಯಲ್ಲಿ ಶಿಫಾರಸು ನೀಡಿದರೆ ಅದನ್ನು ಅಧ್ಯಯನ ನಡೆಸಲಾಗುವುದು, ಸದ್ಯದ ಪರಿಸ್ಥಿತಿಯಲ್ಲಿ ಜನಸಂಖ್ಯೆ ಸ್ಫೋಟವಾಗುತ್ತಿದೆ. ಹೀಗಾಗಿ ಎಲ್ಲರಿಗೂ ಅವಕಾಶಗಳು ಸಿಗಬೇಕು. ಆ ನಿಟ್ಟಿನಲ್ಲಿ ವೈಜ್ಞಾನಿಕ ಕ್ರಮದಲ್ಲಿ ಪ್ರಯತ್ನ ನಡೆಸಲಾಗುತ್ತಿದೆ ಎಂದರು. 2015 ರಲ್ಲಿ ಸುಮಾರು 200 ಕೋಟಿ ರೂ. ಖರ್ಚು ಮಾಡಿ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ಸಾಮಾಜಿಕ, ಆರ್ಥಿಕ ಸಮೀಕ್ಷೆ ನಡೆಸಲಾಗಿದೆ. ಅದರಲ್ಲಿ ಜಾತಿಯ ಮಾಹಿತಿಯನ್ನು ಸಂಗ್ರಹಿಸಲಾಗಿದೆ. ಸಮಾಜದ ಬದಲಾವಣೆ ಕುರಿತು ಈ ಸಮೀಕ್ಷೆ ನಡೆಸಿದ್ದು, ಅದನ್ನು ಅನುಷ್ಠಾನಕ್ಕೆ ತರಲು ಸರ್ಕಾರ ಬದ್ಧವಾಗಿದೆ ಎಂದರು. ಕಾಂಗ್ರೆಸ್‌ನ ಚುನಾವಣಾ ಪ್ರಣಾಳಿಕೆಯಲ್ಲಿ ದೇಶದಲ್ಲಿ ಜಾತಿ ಜನಗಣತಿ ಆಗಬೇಕೆಂದು ಹೇಳಿತ್ತು. ಭಾರತದ ಜನಗಣತಿಯಲ್ಲಿ ಜಾತಿ ಮಾಹಿತಿ ಸಂಗ್ರಹಿಸಲು ಪ್ರಯತ್ನಗಳಾಗಿತ್ತು. ಅದನ್ನು ಪಟ್ಟಭದ್ರ ಹಿತಾಸಕ್ತಿಗಳು ಎಂದು ಆರೋಪಿಸಿದ್ದರು.

ಪರಿಶಿಷ್ಟರಿಗೆ ರಾಜ್ಯಾಂಗ ಬದ್ಧವಾಗಿ ಮೀಸಲಾತಿ ಇದೆ. ಪ್ರವರ್ಗಗಳಿಗೆ ಮೀಸಲಾತಿ ನೀಡುವ ಬಗ್ಗೆ ಚರ್ಚೆಯಾಗಬೇಕು ಎಂದು ಹೇಳಿದರು.ಸ್ವಾತಂತ್ರ್ಯ ಪೂರ್ವದಲ್ಲಿ ಜಾತಿ ಜನಗಣತಿಯಾಗಿತ್ತು. ಸ್ವಾತಂತ್ರ್ಯ ಬಂದ ನಂತರ ದೇಶದ ಜನಸಂಖ್ಯೆ 35 ಕೋಟಿ ಇತ್ತು. ಈಗ 140 ಕೋಟಿಯಾಗಿದೆ. ಅದಕ್ಕೆ ಅನುಗುಣವಾಗಿ ಅಸಮಾನತೆಯನ್ನು ತೊಡೆದುಹಾಕಿ ಸಮಸಮಾಜ ನಿರ್ಮಾಣ ಮಾಡಲು ಈ ರೀತಿಯ ಅಧ್ಯಯನ ಅಗತ್ಯವಿತ್ತು ಎಂದರು.ಕೇಂದ್ರ ಮತ್ತು ರಾಜ್ಯಸರ್ಕಾರಗಳು ಹಿಂದುಳಿದ ಸಮುದಾಯಗಳ ಸುಧಾರಣೆಗಾಗಿ ಅಗತ್ಯ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ರೂಪಿಸಬೇಕಿದೆ. ಹಿಂದುಳಿದ ವರ್ಗಗಳ ವರದಿ ಯಾರ ಪರ ಅಥವಾ ವಿರುದ್ಧವೂ ಇಲ್ಲ. ವೈಜ್ಞಾನಿಕವಾಗಿ ದತ್ತಾಂಶ ಸಂಗ್ರಹಿಸಲಾಗಿದೆ. ಇದು ಅತ್ಯಂತ ಪ್ರಗತಿಪರವಾದ ವರದಿ ಆಯೋಗದ ವರದಿಯಲ್ಲಿ ಹಲವಾರು ಶಿಫಾರಸುಗಳನ್ನು ನೀಡಲಾಗಿದೆ. ಜನಸಂಖ್ಯೆ ಹೆಚ್ಚಳ, ಸ್ಥಿತಿಗತಿಗಳ ಕುರಿತು ಅಧ್ಯಯನ ನಡೆಯಲಿದೆ ಎಂದು ಹೇಳಿದರು.ಇದೇ 11 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಈ ವರದಿಯ ಕುರಿತು ಸಮಗ್ರ ಚರ್ಚೆ ನಡೆಸಿ ನಿರ್ಧಾರ ತೆಗೆದುಕೊಳ್ಳಲಾಗುವ ದು. ಕೆಲ ಸಮುದಾಯಗಳು ವಿರೋಧ ವ್ಯಕ್ತಪಡಿಸುತ್ತಿವೆ. ಮರು ಸಮೀಕ್ಷೆಯ ಆಗ್ರಹ ಮಾಡುತ್ತಿವೆ. ಇದೆಲ್ಲವನ್ನೂ ಸರ್ಕಾರ ಪರಿಶೀಲಿಸಲಿದೆ.

ಬಿಜೆಪಿ ಟೀಕೆ ಮಾಡುವುದು ಸಹಜ. ಆ ಪಕ್ಷ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿಲ್ಲ, ಈ ಹಿಂದೆ ಮಂಡಲ ವರದಿ ಜಾರಿಯಾದಾಗ ಕಮಂಡಲ ಹಿಡಿದು ಯಾತ್ರೆ ನಡೆಸಿದರು. ಹೀಗಾಗಿ ಬಿಜೆಪಿ ವರದಿ ಟೀಕೆ ರಾಜಕೀಯ ಪ್ರೇರಿತ ಎಂದು ತಿಳಿಸಿದರು.ದೇಶದಲ್ಲಿ ಸಾವಿರಾರು ಜಾತಿಗಳಿವೆ. ಎಲ್ಲರಿಗೂ ಸಂಪತ್ತಿನ ಸಮಾನ ಹಂಚಿಕೆಯಾಗಿದೆಯೇ?, ಸಾರ್ವಜನಿಕ ಜೀವನದಲ್ಲಿರುವವರು ಸಮಸಮಾಜದ ಬಗ್ಗೆ ಯೋಚಿಸಬೇಕೇ ಹೊರತು ಟೀಕೆ ಮಾಡುವುದನ್ನೇ ವೃತ್ತಿ ಮಾಡಿಕೊಳ್ಳಬಾರದು ಎಂದರು.ಈ ವರದಿಗೂ, ರಾಜಕೀಯಕ್ಕೂ ಸಂಬಂಧ ಇಲ್ಲ. ವಿಜ್ಞಾನವನ್ನೇ ತಿಳಿಯದೆ ಕೆಲವರು ಅವೈಜ್ಞಾನಿಕ ಎಂದು ಟೀಕೆ ಮಾಡುತ್ತಿದ್ದಾರೆ. ಅವರು ಇನ್ನೂ ವರದಿ ನೋಡಿಲ್ಲ. ಹಾಗಿದ್ದರೂ ಹೇಗೆ ಟೀಕೆ ಮಾಡಲು ಸಾಧ್ಯ?, ಈ ವರದಿ ಆಧರಿಸಿ ಯಾರ ಹಕ್ಕುಗಳನ್ನೂ ಕಸಿಯುವುದಿಲ್ಲ, ಮತ್ತ್ಯಾರಿಗೋ ಹಕ್ಕು ನೀಡುವ ಉದ್ದೇಶವೂ ಇಲ್ಲ. ಒಬ್ಬರನ್ನು ಹಿಂದಿಡುವುದು, ಮತ್ತೊಬ್ಬರನ್ನು ಮುಂದೆ ತರುವ ಆಲೋಚನೆಗಳೂ ಇಲ್ಲ, ತುಂಬಿ ತುಳುಕುತ್ತಿದ್ದರೆ ಮಾತ್ರ ಅವರಿಂದ ಕಿತ್ತು ಇಲ್ಲದವರಿಗೆ ಸೌಲಭ್ಯ ಕೊಡಬಹುದು. ಸದ್ಯಕ್ಕೆ ಆ ಪ್ರಶ್ನೆ ಉದ್ಭವಿಸುವುದಿಲ್ಲ ಎಂದರು.ತಮ್ಮ ನೇತೃತ್ವದಲ್ಲಿ ಸಚಿವ ಸಂಪುಟ ಉಪಸಮಿತಿ ರಚನೆಯಾಗುವ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳಿದರು.

# ಕೆಲವರಿಂದ ಜಾತಿಗಣತಿ ಹೆಸರಲ್ಲಿ ಸಮಾಜ ಒಡೆಯುವ ಕೆಲಸ: ಸಿ.ಟಿ.ರವಿ ಟೀಕೆ



**ಚಿಕ್ಕಮಗಳೂರು, ಏ.13:** ಜಾತಿ ಜನಗಣತಿ, ಜನಗಣತಿ ಮಾಡುವ ಅಧಿಕಾರ ಸಂವಿಧಾನ ಬದ್ಧವಾಗಿ ಕೇಂದ್ರಕ್ಕೆ ಮಾತ್ರ ಇರುವುದು. ಇವರು ಸಾಮಾಜಿಕ–ಆರ್ಥಿಕ ಸಮೀಕ್ಷೆ ಎಂದು ಹೇಳಿದ್ದಾರೆ. ಅಧಿಕೃತವಾಗಿ ಬಿಡುಗಡೆಯಾಗಿಲ್ಲ. ಅನಧಿಕೃತವಾಗಿ ಸೋರಿಕೆ ಯಾಗಿರುವುದನ್ನು ಸತ್ಯ ಎಂದು ಭಾವಿಸಿದರೆ ಅಲ್ಪ ಸಂಖ್ಯಾತರು ಯಾರು ಎಂಬ ಚರ್ಚೆ ಹುಟ್ಟು ಹಾಕುತ್ತದೆ. ರಾಜ್ಯದ ಜನಸಂಖ್ಯೆಯಲ್ಲಿ 2ನೇ ದೊಡ್ಡ ಸಂಖ್ಯೆಯಲ್ಲಿ ಇರುವವರು ಅಲ್ಪ ಸಂಖ್ಯಾತರಾಗುತ್ತಾರಾ ಎಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀಸಲಾತಿ ಸಂಬಂಧ ಕೋರ್ಟಿನಲ್ಲಿ ಮೊಕದ್ದಮೆ ಇದ್ದಾಗ ಕೇಂದ್ರ ಮೀಸಲಾತಿ ಪರ ಪ್ರಮಾಣ ಪತ್ರ ಸಲ್ಲಿಸಿತ್ತು. ಬಡ್ತಿ ಮೀಸಲಾತಿ ಪರ ಪ್ರಮಾಣ ಪತ್ರ ಸಲ್ಲಿಸಿತ್ತು, ಇದು ಮೀಸಲಾತಿ ಬಗ್ಗೆ ಬಿಜೆಪಿಗೆ ಇರುವ ಬದ್ಧತೆ. ಸಮಾಜ ಒಡೆಯುವ ದುರುದ್ದೇಶವನ್ನು ನಾವು ಬೆಂಬಲಿಸುವುದಿಲ್ಲ. ಕೆಲ ವ್ಯಕ್ತಿ–ಸಂಘಟನೆ–ರಾಜಕೀಯ ಪಕ್ಷಗಳು ಹಿಂದೂ ಸಮಾಜವನ್ನು ಜಾತಿವಾರು ಒಡೆಯುತ್ತಿವೆ ಎಂದರು. ಮುಸ್ಲಿಂನಲ್ಲೂ 56 ಜಾತಿಗಳಿವೆ, ಮುಟ್ಟಿಸಿಕೊಳ್ಳದ ಅಸ್ಪೃಶ್ಯರು ಕೂಡ ಇದ್ದಾರೆ. ಅವರ ಬಗ್ಗೆ ಚರ್ಚೆ ಇಲ್ಲ. ಪಸ್ಮಾಂಡ ಮುಸ್ಲಿಂ ಇದ್ದಾರೆ, ಯಾರು ಪ್ರವಾದಿ ವಂಶಸ್ಥರು ಅಂತ ಭಾವಿಸುತ್ತಾರೆ ಅವರು ಹೆಣ್ಣು ಕೊಡಲ್ಲ–ಹೆಣ್ಣು ತರಲ್ಲ. ಮುಸ್ಲಿಂರನ್ನು ಇಡಿಯಾಗಿ, ಹಿಂದೂಗಳನ್ನು ಒಡೆದು ಆಳುವ ನೀತಿಗೆ ನಮ್ಮ ಬೆಂಬಲವಿಲ್ಲ. ಸಾಮಾಜಿಕ ನ್ಯಾಯ ಬಿಜೆಪಿ ಬದ್ಧತೆ, ಅದಕ್ಕೆ ನಾವು ಬದ್ಧ ಎಂದು ಸಿ.ಟಿ.ರವಿ ಹೇಳಿದರು.

# ಬಿಜೆಪಿ ಅವಧಿಯಲ್ಲಿ ಮನೆ ಕೊಟ್ಟಿದ್ದರೆ ರಾಜೀನಾಮೆ ಸಚಿವ ಜಮೀರ್ ಸವಾಲ್



**ಹುಬ್ಬಳ್ಳಿ, ಏ.13:** ಬಿಜೆಪಿಯವರು ನಾಲ್ಕು ವರ್ಷದ ಅವಧಿಯಲ್ಲಿ ಒಂದೇ ಒಂದು ಮನೆ ಕೊಟ್ಟಿದ್ದರೆ ನಾನು ರಾಜಕೀಯ ನಿವೃತ್ತಿ ನೀಡುತ್ತೇನೆ. ಈ ಕುರಿತು ಚರ್ಚಿಸಲು ಸಿದ್ದ ಎಂದು ವಸತಿ ಸಚಿವ ಜಮೀರ್ ಅಹ್ಮದ್ ಸವಾಲು ಹಾಕಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ನಮ್ಮ ಸರಕಾರವಿದ್ದಾಗ 1,80,253 ಮನೆಗಳನ್ನು ಮಂಜೂರು ಮಾಡಿತ್ತು.ಇದನ್ನು ಬಿಟ್ಟರೆ ನಾಲ್ಕು ವರ್ಷದ ಅವಧಿಯಲ್ಲಿ ಬಿಜೆಪಿ ಸರಕಾರ ಒಂದೇ ಒಂದು ಮನೆಗಳನ್ನು ಮಂಜೂರು ಹಾಗೂ ಹಂಚಿಕೆ ಮಾಡಲಿಲ್ಲ. ನಮ್ಮ ಅವಧಿಯಲ್ಲಿ ಮಂಜೂರು ಮಾಡಿದ್ದ ಮನೆಗಳಿಗೆ ಅನುದಾನ ಕೊಡಲಿಲ್ಲ. ಇವರಿಗೆ ಬಡವರ ಬಗ್ಗೆ ಕಾಳಜಿಯಿಲ್ಲ. ಇವರ ಅವಧಿಯಲ್ಲಿ ಒಂದೇ ಒಂದು ಮನೆಗಳನ್ನು ನೀಡಲಿಲ್ಲ. ಪಿಎಂಎವೈ ಯೋಜನೆಯಡಿ ಕೇಂದ್ರ ಸರಕಾರ ನೀಡುವ 1.50 ಲಕ್ಷ ರೂ.ನಲ್ಲಿ ದಲ್ಲಿ 12 ಸಾವಿರ ರೂ. ಜಿ.ಎಸ್.ಟಿ ಕಡಿತಗೊಳಿಸುತ್ತಿದ್ದಾರೆ. ಇದರ ಬಗ್ಗೆ ಬಿಜೆಪಿಯವರು ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು.


ಏ.17 ರಂದು ರಾಜ್ಯಾದ್ಯಂತ 42,345 ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ಹಂಚಿಕೆ ಮಾಡಲು ನಿರ್ಧರಿಸಲಾಗಿತ್ತು. ಇದನ್ನು ತಾತ್ಕಾಲಿಕವಾಗಿ ಮುಂದೂಡಿದ್ದು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿ ಅವರ ಸಮಯ ಕೇಳಿ ದಿನಾಂಕ ನಿಗದಿ ಮಾಡಲಿದ್ದೇವೆ. ಇನ್ನೂ ಎರಡ್ಮೂರು ಹಂತಗಳಲ್ಲಿ ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲಾಗುವುದು. ಆಶ್ರಯ ಮನೆಗಳಿಗೆ ಬೇಕಾದ ಸುಮಾರು 9500 ಕೋಟಿ. ರೂಗಳನ್ನು ಸರಕಾರವೇ ಭರಿಸಲು ಮುಖ್ಯಮಂತ್ರಿಗಳು ನಿರ್ಧರಿಸಿದ್ದಾರೆ ಎಂದು ತಿಳಿಸಿದರು.

# ಜನಾಕ್ರೋಶ ಯಾತ್ರೆಯ ಬೃಹತ್ ಸಾರ್ವಜನಿಕ ಸಭೆ: ಮುಸಲ್ಮಾನರನ್ನು ಬಿಟ್ಟರೆ ಹಿಂದೂಗಳು ನಿಮ್ಮ ಕಣ್ಣಿಗೆ ಕಾಣುವುದಿಲ್ಲವೆ: ಸಿಎಂಗೆ ವಿಜಯೇಂದ್ರ ಪ್ರಶ್ನೆ



**ಶಿವಮೊಗ್ಗ, ಏ.13:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮುಸಲ್ಮಾನರನ್ನು ಓಲೈಕೆ ಮಾಡುವ ನಿಟ್ಟಿನಲ್ಲಿ ಸರಕಾರಿ ಕಾಮಗಾರಿಗಳಲ್ಲಿ ಶೇ 4 ರಷ್ಟು ಮೀಸಲಾತಿ ನೀಡಿದ್ದಾರೆ. ಇದು ಹಿಂದೂಗಳಿಗೆ ಅವಮಾನ ಮಾಡುವ ಕ್ರಮ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಆರೋಪಿಸಿದರು. ಮುಸ್ಲಿಂ ಯುವಜನರು ವಿದ್ಯಾಭ್ಯಾಸಕ್ಕೆ ವಿದೇಶಕ್ಕೆ ತೆರಳುವುದಾದರೆ 20 ಲಕ್ಷದ ಬದಲು 30 ಲಕ್ಷ ಕೊಡುತ್ತಿದ್ದಾರೆ. ನಿಮಗೆ ಹಿಂದೂಗಳು ಕಾಣುವುದಿಲ್ಲವೇ? ನಮ್ಮ ಹಿಂದೂಗಳು ನಿಮಗೆ ಮಾಡಿದ ಅನ್ಯಾಯವಾದರೂ ಏನು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದರು.

ಜನಾಕ್ರೋಶ ಯಾತ್ರೆಯ ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸುಮಾರು 50ರಷ್ಟು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ ರಾಜ್ಯದ ಕಾಂಗ್ರೆಸ್ ಸರಕಾರವು ಸರಕಾರಿ ನೌಕರರಿಗೆ ಸಂಬಳ ಕೊಡಲು ದುಡ್ಡಿಲ್ಲದ ಪರಿಸ್ಥಿತಿಗೆ ಬಂದು ತಲುಪಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದ್ದಾರೆ. ಮುಸಲ್ಮಾನರನ್ನು ಓಲೈಸುವ ಮತ್ತು ಹಿಂದೂಗಳಿಗೆ ಅವಮಾನ ಮಾಡುವ ರಾಜಕೀಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾಡುತ್ತಿದ್ದಾರೆ. ಇದಕ್ಕಾಗಿ ಬಿಜೆಪಿ ಜನಾಕ್ರೋಶ ಯಾತ್ರೆ ಪ್ರಾರಂಭಿಸಿದೆ ಎಂದು ಹೇಳಿದರು. ಹಾಲಿನ ದರ 9 ರೂ. ಹೆಚ್ಚಿಸಿದ್ದು, ಬಡಜನರು ಮಕ್ಕಳಿಗೆ ಪೌಷ್ಟಿಕ ಆಹಾರ ಕೊಡಲು ಸಾಧ್ಯ ಆಗುತ್ತಿಲ್ಲ. ಕಾಂಗ್ರೆಸ್ ಸರಕಾರವು ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಲ್ಲಿ ಕಿತ್ತುಕೊಳ್ಳುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.ರೈತರು ಟ್ರಾನ್ಸ್‌ಫಾರ್ಮರ್ ಹಾಕಿಸಿಕೊಳ್ಳಲು ಹಿಂದೆ ಬಿಜೆಪಿ ಸರಕಾರ ಇದ್ದಾಗ 25 ಸಾವಿರ ಖರ್ಚು ಮಾಡಬೇಕಿದ್ದರೆ, ಈಗ ಸಿದ್ದರಾಮಯ್ಯನವರ ರೈತಪರ ಎನ್ನುವ ಸರಕಾರ ಬಂದ ಬಳಿಕ 2.5 ರಿಂದ 3 ಲಕ್ಷ ಹಣವನ್ನು ರೈತರು ಕಟ್ಟಬೇಕಾಗಿದೆ ಎಂದು ಆಕ್ಷೇಪಿಸಿದರು. ದಲಿತರ ಅಭ್ಯುದಯಕ್ಕೆ ಬಳಕೆ ಆಗಬೇಕಿದ್ದ 38 ಸಾವಿರ ಕೋಟಿ ಎಸ್‌ಇಟಿ, ಟಿಎಸ್ಪಿ ಹಣವನ್ನು ಸಿದ್ದರಾಮಯ್ಯನವರು ದುರುಪಯೋಗ ಮಾಡುತ್ತಿದ್ದಾರೆ ಎಂದು ದೂರಿದರು. ನರೇಂದ್ರ ಮೋದಿಯವರ ಕಳೆದ 10 ವರ್ಷಗಳ ದೇಶದ ಸಮರ್ಥ ಆಡಳಿತದ ಪರಿಣಾಮವಾಗಿ ಜಗತ್ತಿನ 5ನೇ ಪ್ರಮುಖ ಆರ್ಥಿಕ ಶಕ್ತಿಯಾಗಿ ಭಾರತ ಹೊರಹೊಮ್ಮಿದೆ ಎಂದು ಹೇಳಿದ ಅವರು, ಇದು ಚುನಾವಣೆಗಾಗಿ ಈ ಹೋರಾಟವಲ್ಲ. ಅಧಿಕಾರ ಹಿಡಿದ ರಾಜ್ಯದ ಕಾಂಗ್ರೆಸ್ ಸರಕಾರ ಜನವಿರೋಧಿಯಾಗಿದೆ. ರೈತ ವಿರೋಧಿ ಧೋರಣೆ ಅನುಸರಿಸುತ್ತಿದೆ. ಈ ಹಿಂದೂ ವಿರೋಧಿ ಸರಕಾರವನ್ನು ಕಿತ್ತು ಹಾಕುವ ಶಕ್ತಿ ಬಿಜೆಪಿ ಕಾರ್ಯಕರ್ತರಿಗೆ ಇದೆ ಎಂದು ಎಚ್ಚರಿಸಿದರು.20 ತಿಂಗಳಲ್ಲಿ ಸಿದ್ದರಾಮಯ್ಯನವರು ಗರಿಷ್ಠ ಬೆಲೆ ಏರಿಕೆ ಮಾಡಿದ್ದಾರೆ. ಇವರು ಒಂದು ತಜ್ಞರ ಸಮಿತಿ ನೇಮಿಸಿಕೊಂಡಿದ್ದು, ಅದು ಅಭಿವೃದ್ಧಿ ಕಡೆ ಗಮನ ಕೊಡುವಂಥದ್ದಲ್ಲ. ಯಾವ ಅಗತ್ಯ ವಸ್ತುಗಳ ಮೇಲೆ ಬೆಲೆ ಹೆಚ್ಚಿಸಬಹುದೆಂದು ಅದು ಸಲಹೆ ನೀಡುತ್ತಿದೆ ಎಂದು ಬಿ. ವೈ.ವಿಜಯೇಂದ್ರ ಅವರು ದೂರಿದರು. ಗ್ಯಾರಂಟಿ ಹೆಸರು ಹೇಳಿಕೊಂಡು ಕಾಂಗ್ರೆಸ್ಸಿಗರು ಜನರ ಕಣ್ಣಿಗೆ ಬೂದಿ ಎರಚುವ ಕೆಲಸ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರು ಕಳೆದ 20 ತಿಂಗಳಲ್ಲಿ 50ಕ್ಕೂ ಹೆಚ್ಚು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದಾರೆ ಎಂದು ಟೀಕಿಸಿದರು.



ಶಾಶ್ವತ ವಿದ್ಯುತ್ ಅಲಂಕಾರದಿಂದ ಕಂಗೊಳಿಸುತ್ತಿರುವ ವಿಧಾನಸೌಧ

## ಸರ್ಕಾರದ ಮೂಗಿನ ನೇರಕ್ಕೆ ಜಾತಿಗಣತಿ ವರದಿ ತಯಾರಾಗಿದೆ

# ಕಾಂಗ್ರೆಸ್ ತುಷ್ಟೀಕರಣ ನೀತಿ ನಾವು ವಿರೋಧಿಸುತ್ತೇವೆ: ರಂಭಾಪುರಿಶ್ರೀ



**ಬೆಂಗಳೂರು ಏ.13:** ಸರ್ಕಾರ ಯಾವುದೋ ಒಂದು ಜಾತಿಯನ್ನು ತುಷ್ಟೀಕರಣ ಮಾಡಲು ಜಾತಿ ಗಣತಿ ವರದಿ ತಯಾರಿಸಿದೆ. ಹತ್ತಾರು ವರ್ಷಗಳಿಂದ ಜಾತಿ ಗಣತಿ ವರದಿ ನೆನೆಗುದಿಗೆ ಬಿದ್ದಿತ್ತು. ಜಾತಿ ಗಣತಿಗೆ ಅಖಿಲ ಭಾರತ ವೀರಶೈವ ಮಹಾಸಭಾ ಸಂಘ ವಿರೋಧಿಸಿದೆ. ಜಾತಿಗಣತಿ ವರದಿಯನ್ನು ಪಾರದರ್ಶಕವಾಗಿ ಮಾಡಿಲ್ಲ ಎಂದು ಬಾಳೆಹೊನ್ನೂರಿನ ರಂಭಾಪುರಿ ಪೀಠದ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ಚಿಕ್ಕಮಗಳೂರಿನ ರಂಭಾಪುರಿ ಪೀಠದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು,

ಸರ್ಕಾರದ ಮೂಗಿನ ನೇರಕ್ಕೆ ಜಾತಿ ಗಣತಿ ವರದಿ ತಯಾರಾಗಿದೆ. ಜಾತಿಗಣತಿ ವರದಿ ಪುನರ್ವಿಮರ್ಶೆ ಆಗಬೇಕು. ಅಧಿಕಾರಿಗಳು ಮನೆ ಮನೆಗೆ ಭೇಟಿ ಕೊಡಬೇಕು. ಜಾತಿಗಣತಿ ವರದಿ ಬಗ್ಗೆ ಈಗಾಗಲೇ ಹಲವರು ಆತಂಕ ಹೊರಹಾಕಿದ್ದಾರೆ. ಜನರ ಭಾವನೆಯನ್ನು ಅರಿತು ಪಾರದರ್ಶಕತೆಯಿಂದ, ಮನೆ ಮನೆಗೆ ಭೇಟಿ ಕೊಟ್ಟು ಅಧಿಕಾರಿಗಳು ವರದಿ ತಯಾರಿಸಬೇಕು" ಎಂದು ಆಗ್ರಹಿಸಿದರು.

ಆಡಳಿತ ಪಕ್ಷದ ಅನೇಕ ಶಾಸಕರು ಈ ಜಾತಿ ಗಣತಿ ವರದಿಗೆ ವಿರೋಧ ವ್ಯಕ್ತಪಡಿಸಿದ್ದಾರೆ. ವಿರೋಧ ಪಕ್ಷದವರು ಜಾತಿಗಣತಿ ವರದಿಯನ್ನು ಬಹಿಷ್ಕಾರ ಮಾಡಿದ್ದಾರೆ. ಮುಖ್ಯಮಂತ್ರಿಗಳು ಪುನರ್ ಪರಿಶೀಲನೆ ನಡೆಸಿ, ಜಾತಿ ಗಣತಿ ವರದಿಗೆ ಮುಂದಾದರೆ ಜನರಿಗೆ ಒಳಿತಾಗಲಿದೆ. ಇಲ್ಲವಾದರೆ ಜಾತಿ ಸಂಕಷ್ಟಕ್ಕೆ ಕಾರಣವಾಗಲಿದೆ" ಎಂದು ಹೇಳಿದರು.

"ಈ ಜಾತಿ ಗಣತಿ ವರದಿಯನ್ನು ಸಾರಾಸಗಟಾಗಿ ಬಹಿಷ್ಕರಿಸಿ, ತಿರಸ್ಕಾರ ಮಾಡುತ್ತಿದ್ದೇವೆ. ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಕೆಲವೊಂದು ಜಾತಿಗೆ ಮೀಸಲು ನೀಡಬೇಕೆನ್ನುವುದು ಸರ್ಕಾರಕ್ಕೆ ಇದೆ. ಆದರೆ ಸಂವಿಧಾನದ ಆಶಯದಂತೆ ಜಾತಿಗಣತಿ ವರದಿ ವಿಚಾರದಲ್ಲಿ ಹೆಜ್ಜೆ ಇಡಬೇಕು. ಸಂವಿಧಾನದಲ್ಲಿ ಯಾವ ಜಾತಿಗೆ ಎಷ್ಟು ಮೀಸಲಾತಿ ನೀಡಬೇಕೆನ್ನುವುದನ್ನು ಉಲ್ಲೇಖವಿದೆ" ಎಂದರು. ಜಾತಿಗಣತಿ ವರದಿಯನ್ನು ತಯಾರು ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ. ಕೇಂದ್ರ ಸರ್ಕಾರಕ್ಕೆ ಮಾತ್ರ ಈ ಅಧಿಕಾರ ಇದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಗಳಿಗೆ ಸರಿಯಾದ ಮಾಹಿತಿ, ಕೆಲ ಸೂಚನೆಗಳನ್ನು ನೀಡಬೇಕು ಎಂದು ತಿಳಿಸಿದರು.

# ಜಾತಿಗಣತಿ ವರದಿಯ ನಿಖರತೆ ತಿಳಿಯದೆ ಮಾತನಾಡುವುದು ತಪ್ಪು: ಎಂ.ಬಿ.ಪಾಟೀಲ್



**ವಿಜಯಪುರ, ಏ.13:** ಜಾತಿ ಗಣತಿ ವರದಿಯ ಅಧ್ಯಯನ ಮಾಡಿ ನಾವು ಅರ್ಥ ಮಾಡಿಕೊಳ್ಳಬೇಕು. ಈ ವಿಚಾರವಾಗಿಯೇ ಏ.17ರಂದು ಸಚಿವ ಸಂಪುಟದ ವಿಶೇಷ ಸಭೆ ನಡೆಯಲಿದೆ. ಅಲ್ಲಿ ನಮ್ಮ ಅಭಿಪ್ರಾಯಗಳನ್ನು ತಿಳಿಸುತ್ತೇವೆ. ನನ್ನ ಪ್ರಕಾರ, ಲಿಂಗಾಯತರ ಜನಸಂಖ್ಯೆ ಒಂದು ಕೋಟಿಗಿಂತಲೂ ಜಾಸ್ತಿ ಇದೆ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು. ನಗರದಲ್ಲಿ ರವಿವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಜಾತಿ ಗಣತಿ ವರದಿಯ ಒಳಗಡೆ ಏನಿದೆ ಎಂಬುದು ನನಗೆ ಗೊತ್ತಿಲ್ಲ. ನೋಡಲಾರದೆ ನಾವು ಮಾತನಾಡುವುದು ತಪ್ಪು. ಮಾಧ್ಯಮಗಳಲ್ಲಿ ಬಂದಿದ್ದನ್ನು ನೋಡಿದ್ದೇನೆ. ಅದು ಎಷ್ಟರಮಟ್ಟಿಗೆ ಸತ್ಯ ಎಂಬುದು ಗೊತ್ತಿಲ್ಲ ಎಂದರು.

ಮತ್ತೊಮ್ಮೆ ಜಾತಿ ಗಣತಿಗೆ ವಿವಿಧ ಸ್ವಾಮೀಜಿಗಳ ಬೇಡಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಅದು ಅವರವರ ಅಭಿಪ್ರಾಯಕ್ಕೆ ಬಿಟ್ಟಿದ್ದು. ನಾನು ಜಾತಿಗಣತಿ ವರದಿಯ ಪ್ರತಿ ತರಿಸಿಕೊಂಡಿದ್ದೇನೆ. ವರದಿ ನೋಡಿ, ಓದಿ ಮಾತನಾಡುವೆ. ಈ ಕುರಿತು ಸಂಪುಟದಲ್ಲಿ ಚರ್ಚೆ ಮಾಡಿ ಮುಂದಿನ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂದರು.

ಲಿಂಗಾಯತರಲ್ಲಿ 2ಎ ಮೀಸಲಾತಿಗಾಗಿ ಹಿಂದೂ ಸಾದರ, ಹಿಂದೂ ಗಾಣಿಗ, ಹಿಂದೂ ಬಣಜಿಗ ಎಂದು ನಮೂದು ಮಾಡಲಾಗುತ್ತದೆ. ಇವೆಲ್ಲ ಸಮುದಾಯಗಳು ಒಳಗೊಂಡರೆ ಲಿಂಗಾಯತ ಸಮಾಜದ ಸಂಖ್ಯೆ ಒಂದು ಕೋಟಿಗೂ ಅಧಿಕವಾಗುತ್ತದೆ. 2ಎ ನಲ್ಲಿರುವ ಕೆಲ ಸಮುದಾಯಗಳು ಲಿಂಗಾಯತ, ವೀರಶೈವ ಲಿಂಗಾಯತ ಎಂದು ಬರೆಸಿಲ್ಲ. ಈ ಜನಸಂಖ್ಯೆಯು 25 ಲಕ್ಷವಾಗಲಿದೆ. ಹೀಗಾಗಿ ಲಿಂಗಾಯತರ ಜನಸಂಖ್ಯೆ ಒಂದು ಕೋಟಿಗಿಂತ ಜಾಸ್ತಿ ಇದೆ. ಜಾತಿ ಗಣತಿಯಲ್ಲಿ ಲಿಂಗಾಯತರ ಸಂಖ್ಯೆ ಕಡಿಮೆಯಾಗಲು ಕಾಂತರಾಜ್ ಸೇರಿ ಯಾರದ್ದೂ ತಪ್ಪಲ್ಲ ಎಂದರು ತಿಳಿಸಿದರು. ಸದ್ಯ ಜಾತಿ ಗಣತಿ ವರದಿಯ ಅಧ್ಯಯನ ಮಾಡಿ ತಿಳಿದುಕೊಳ್ಳುತ್ತೇವೆ. 2ಎನಲ್ಲಿ ಇದ್ದವರನ್ನು ಲಿಂಗಾಯತರೆಂದು ಪರಿಗಣಿಸಬೇಕಾ?, 3 ಬಿಗೆ ತರಬೇಕಾ ಅಥವಾ ಅದಕ್ಕೆ ಅವರು ಒಪ್ಪುತ್ತಾರಾ ಎಂಬುದನ್ನು ನೋಡಬೇಕು. ಆದರೆ, ಲಿಂಗಾಯತ ಸಾದರ, ಬಣಜಿಗ, ಗಾಣಿಗ ಎಂದು ಬರೆಸಿದರೆ ಮೀಸಲಾತಿ ಸಿಗಲ್ಲ. ಅದಕ್ಕೆ ಏನಾದರೂ ಪರ್ಯಾಯ ಮಾರ್ಗವಿದೆಯಾ ಎಂಬುದನ್ನು ನೋಡುತ್ತೇವೆ. ಈ ವಿಚಾರದಲ್ಲಿ ನಾವು ಯಾವುದೇ ಸಂಘರ್ಷಕ್ಕೆ ಇಳಿಯಲ್ಲ. ಎಲ್ಲರೂ ಸೇರಿ ಸಮಸ್ಯೆ ಪರಿಹಾರ ಮಾಡುತ್ತೇವೆ ಎಂದು ಹೇಳಿದರು.

## ನಿಧನ ವಾರ್ತೆ

# ಗಣೇಶ್ ನಾರಾಯಣ ಪೂಜಾರಿ ಮೂಲ್ಕಿ (ವಕೋಲಾ) ನಿಧನ



ಮುಂಬಯಿ (ಆರ್‌ಬಿಐ), ಏ.13: ಸಾಂತಕ್ರೂಜ್ ಪೂರ್ವದ ವಕೋಲಾ ಧೋಬಿ ಘಾಟ್ ಲೇನ್ ಇಲ್ಲಿನ ಪಂಚಶೀಲ್ ಸೊಸೈಟಿ ನಿವಾಸಿ ಗಣೇಶ್ ನಾರಾಯಣ ಪೂಜಾರಿ (50.) ಅಲ್ಪಕಾಲದ ಅಸೌಖ್ಯದಿಂದ ಪೊವಾಯಿ ಅಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಕಳೆದ ಶನಿವಾರ ರಾತ್ರಿ ನಿಧನರಾದರು.

ಮೂಲತಃ ಮೂಲ್ಕಿಯ ಅತಿಕಾರಿಬೆಟ್ಟು ಕೊಲಕಾಡಿ ಮೂಲತಃ ಮೃತರು ಮಹಾನಗರದ ಖಾಸಗಿ ಕಂಪೆನಿಯೊಂದರಲ್ಲಿ ಉದ್ಯೋಗದಲ್ಲಿದ್ದರು.

ಮೃತರು ತಾಯಿ, ಪತ್ನಿ, ಓರ್ವ ಸಹೋದರ (ನರೇಶ್ ಪೂಜಾರಿ), ಬಾವ (ಸಾಯಿಕೇರ್ ಲಾಜಿಸ್ಟಿಕ್‌ನ ಸುರೇಂದ್ರ ಎ.ಪೂಜಾರಿ), ಇಬ್ಬರು ಸಹೋದರಿಯರು ಮತ್ತು ಬಂಧು ಬಳಗದವರನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ಇಂದು ಭಾನುವಾರ (ಏ.13) ಬಾಂದ್ರಾ ಪೂರ್ವದ ಟೀಚರ್ ಕಾಲೋನಿ ಇಲ್ಲಿನ ಹಿಂದೂ ಸ್ಮಶಾನಭೂಮಿ ಇಲ್ಲಿ ಅಂತ್ಯಕ್ರಿಯೆ ಜರುಗಿದ್ದು ಬಿಲ್ಲವರ ಅಸೋಸಿಯೇಶನ್ ಮುಂಬಯಿ ಅಧ್ಯಕ್ಷ ಹರೀಶ್ ಜಿ.ಅಮೀನ್, ಗೌರವಾಧ್ಯಕ್ಷ ಎಲ್.ವಿ ಅಮೀನ್, ಬಿಸಿಸಿಐ ಕಾರ್ಯಾಧ್ಯಕ್ಷ ಎನ್.ಟಿ ಪೂಜಾರಿ, ನಿರ್ದೇಶಕ ಕರ್ನಿರೆ ಗಂಗಾಧರ್ ಅಮೀನ್, ಭಾರತ್ ಬ್ಯಾಂಕ್‌ನ ಕಾರ್ಯಾಧ್ಯಕ್ಷ ಸೂರ್ಯಕಾಂತ ಜಯ ಸುವರ್ಣ, ನಿರ್ದೇಶಕ ಭಾಸ್ಕರ್ ಎಂ.ಸಾಲ್ಯಾನ್, ಡಾ। ಸಂತೋಷ್ ರೈ, ಅನಿಲ್ ಸಾಲ್ಯಾನ್ (ಆಹಾರ್), ಡಾ। ವಿಕ್ರಮ್ ಶೆಟ್ಟಿ, ಜಿತೇಶ್ ಗೌಡ, ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡು ಅಂತಿಮ ದರ್ಶನ ಪಡೆದರು. ಎನ್‌ಸಿಪಿ ಧುರೀಣ ಲಕ್ಷ್ಮಣ್ ಸಿ.ಪೂಜಾರಿ ಸೇರಿದಂತೆ ಆನೇಕ ಗಣ್ಯರು ಸಂತಾಪ ವ್ಯಕ್ತ ಪಡಿಸಿ ಶ್ರದ್ಧಾಂಜಲಿ ಅರ್ಪಿಸಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 14 2025, ಸೋಮವಾರ

## ಒಳಪುಟಗಳಲ್ಲಿ




**ಪಕ್ಷದಲ್ಲಿ ಎಲ್ಲರಿಗಿಂತ ಕೊನೆ ಎಂಬ ಭಾವನೆ ಬೇಡ: ಸೇವಾದಳದವರಿಗೆ ಅಧಿಕಾರ ನೀಡಲು ಚಿಂತನೆ- ಡಿ.ಕೆ.ಶಿವಕುಮಾರ್ - ಪು.5**

## ಸರ್ಕಾರಿ ನೌಕರರ ಆಸ್ತಿ ವಿವರ ಸಲ್ಲಿಕೆ ಕಡ್ಡಾಯ

**ಬೆಂಗಳೂರ, ಏ,13:** ಸರ್ಕಾರಿ ನೌಕರರು ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯ ಎಂದು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಲೋಕಾಯಕ್ತ ಅಧಿಕಾರಿಗಳು ಯಾವ ಅಧಿಕಾರಿಗಳ ಆಸ್ತಿಯ ಕುರಿತು ವಿವರ ಕೇಳುತ್ತದೆಯೋ ಆ ಅಧಿಕಾರಿಗಳು ವಿಳಂಬ ಮಾಡದೆ ಲೋಕಾಯುಕ್ತಕ್ಕೆ ಆಸ್ತಿಯ ವಿವರವನ್ನು ಕಡ್ಡಾಯವಾಗಿ ಸಲ್ಲಿಸಬೇಕು ಎಂದು ರಾಜ್ಯ ಸರ್ಕಾರ ಆದೇಶ ಹೊರಚಿಸಿದೆ. ಒಂದು ವೇಳೆ ಸರ್ಕಾರದ ಸೂಚನೆ ಪಾಲಿಸದಿದ್ದರೆ, ಇಲಾಖಾ ಮುಖ್ಯಸ್ಥರು ಹಾಗೂ ಪ್ರಾಧಿಕಾರದ ಅಧಿಕಾರಿಗಳನ್ನು ನೇರ ಹೊಣೆಗಾರರನ್ನು ಮಾಡಲಾಗುತ್ತದೆ ಎಂದು ಸರ್ಕಾರ ಹೇಳಿದೆ. ಇತ್ತೀಚೆಗಷ್ಟೇ ಲೋಕಾಯುಕ್ತ, ಸರ್ಕಾರಿ ಅಧಿಕಾರಿಗಳು ಚರಾಸ್ತಿ, ಸ್ತಿರಾಸ್ತಿಗಳನ್ನು ವೆಬ್‌ಸೈಟ್‌ನಲ್ಲಿ ಘೋಷಣೆ ಮಾಡಬೇಕೆಂದು ಹೇಳಿತ್ತು. ಇದಕ್ಕೆ ನೌಕರರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಆದರೆ, ಈಗ ಸರ್ಕಾರ ಜಾಣ ನಡೆಯ ಆದೇಶ ಹೊರಡಿಸಿದೆ.

# ಜಾತಿಗಣತಿ: ಸರ್ಕಾರ ಆತುರದ ನಿರ್ಧಾರ ಕೈಗೊಳ್ಳದು: ಡಿ.ಕೆ.ಶಿವಕುಮಾರ್ ಸ್ಪಷ್ಟನೆ

**ಬೆಂಗಳೂರು, ಏ.13: ಜಾತಿ ಗಣತಿ ವರದಿ ಕುರಿತು ಸರ್ಕಾರ ಯಾವುದೇ ಆತುರದ ನಿರ್ಧಾರ ತೆಗೆದುಕೊಳ್ಳುವುದಿಲ್ಲ. ಸಚಿವ ಸಂಪುಟ ಈ ವರದಿಯನ್ನು ಪರಿಶೀಲಿಸುತ್ತದೆ ಮತ್ತು ಚರ್ಚಿಸುತ್ತದೆ. ಸತ್ಯಗಳ ಆಧಾರದ ಮೇಲೆ ಎಲ್ಲರಿಗೂ ನ್ಯಾಯ ಒದಗಿಸುತ್ತದೆ. ವರದಿ ವಿರುದ್ಧ ನೀಡಲಾಗುತ್ತಿರುವ ಹೇಳಿಕೆಗಳು ರಾಜಕೀಯ ಪ್ರೇರಿತ ಎಂದು ಉಪ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಭಾನುವಾರ ಹೇಳಿದ್ದಾರೆ.**






ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವರದಿಯನ್ನು ಶುಕ್ರವಾರ ಸಚಿವ ಸಂಪುಟದ ಮುಂದೆ ಮಂಡಿಸಲಾಗಿದ್ದು, ಏಪ್ರಿಲ್ 17ರಂದು ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುತ್ತದೆ. ವರದಿಯ ಮುಚ್ಚಿದ ಲಕೋಟೆಯನ್ನು ಸಚಿವ ಸಂಪುಟ ಸಭೆಯಲ್ಲಿ ತೆರೆಯಲಾಯಿತು. ವರದಿಯನ್ನು ಅಂಗೀಕರಿಸುವ ನಿರ್ಣಯವನ್ನು ಸಂಪುಟ ಸಭೆಯಲ್ಲಿ ಕೈಗೊಂಡ ಬಳಿಕ ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸುವ ತೀರ್ಮಾನ ಕೈಗೊಳ್ಳಲಾಯಿತು.

ಆಯೋಗವು ಕಳೆದ ವರ್ಷ ಫೆಬ್ರುವರಿ 29ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿಯನ್ನು ಸಲ್ಲಿಸಿತ್ತು. ಸಮಾಜದ ಕೆಲವು ವರ್ಗಗಳಿಂದ ಮತ್ತು ಕಾಂಗ್ರೆಸ್‌ನೊಳಗಿನಿಂದಲೇ ವಿರೋಧ ವ್ಯಕ್ತವಾಗಿದ್ದವು. ಮುಖ್ಯಮಂತ್ರಿಗಳು ಇದರ ಬಗ್ಗೆ ಮಾತನಾಡಿದ್ದಾರೆ. ನಾನು ನಿನ್ನೆ ಬೆಳಗಾವಿ ಮತ್ತು ಮಂಗಳೂರಿಗೆ ಭೇಟಿ ನೀಡಿದ್ದ ಕಾರಣ, ನಾನಿನ್ನೂ ವರದಿಯನ್ನು ನೋಡಿಲ್ಲ. ಇದನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಬೇಕಾಗಿದೆ. ವಿಧಾನಸಭೆಯಲ್ಲಿಯೂ ಈ ಕುರಿತು ಚರ್ಚಿಸಲಾಗುವುದು ಎಂದು ಸಿಎಂ ಹೇಳಿದ್ದಾರೆ. ಯಾರೂ ಯಾವುದೇ ಆತುರದ ನಿರ್ಧಾರ ತೆಗೆದುಕೊಳ್ಳುವುದಿಲ್ಲ ಎಂದು ಶಿವಕುಮಾರ್ ಹೇಳಿದರು.ದೊಡ್ಡಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವರು ಜಾತಿಗಣತಿ ವರದಿ ಬಗ್ಗೆ ರಾಜಕೀಯ ಪ್ರೇರಿತ ಹೇಳಿಕೆಗಳನ್ನು ನೀಡುತ್ತಿರಬಹುದು. ಆದರೆ, ನಾವು ಸತ್ಯಗಳನ್ನು ಅರ್ಥಮಾಡಿಕೊಂಡು ಎಲ್ಲರಿಗೂ ನ್ಯಾಯ ಒದಗಿಸುತ್ತೇವೆ ಎಂದರು.ಈ ಮಧ್ಯೆ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ವರದಿಯಲ್ಲಿ ಏನಿದೆ ಎಂಬುದರ ಬಗ್ಗೆ ತಮಗೆ ತಿಳಿದಿಲ್ಲ ಮತ್ತು ಆದ್ದರಿಂದ ಈ ಬಗ್ಗೆ ಪ್ರತಿಕ್ರಿಯಿಸಲು ಇಷ್ಟಪಡುವುದಿಲ್ಲ ಎಂದಿದ್ದಾರೆ.ನನಗೆ ಗೊತ್ತಿಲ್ಲ, ಏಕೆಂದರೆ ಸಂಪುಟದಲ್ಲಿ ಏನು ಚರ್ಚಿಸಲಾಗುವುದು ಅಥವಾ ವರದಿಯಲ್ಲಿ ಏನಿದೆ ಎಂಬುದರ ಕುರಿತು ನನಗೆ ಮಾಹಿತಿ ಇಲ್ಲ. ವರದಿ ಸಿಕ್ಕರೆ ನಾನು ಏನನ್ನಾದರೂ ಹೇಳಬಲ್ಲೆ. ಏಪ್ರಿಲ್ 17ರ ಸಂಪುಟ ಸಭೆಯಿಂದ ಯಾವುದೇ ನಿರ್ಧಾರ ಕೈಗೊಂಡರೆ, ನಾನು ಆ ಬಗ್ಗೆ ಪ್ರತಿಕ್ರಿಯಿಸಬಲ್ಲೆ ಎಂದು ಅವರು ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಅಧಿಕೃತ ಮೂಲಗಳ ಪ್ರಕಾರ, 2015ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಒಟ್ಟು 5.98 ಕೋಟಿ ನಾಗರಿಕರನ್ನು ಒಳಗೊಂಡಿದ್ದು, ಅವರಲ್ಲಿ ಸುಮಾರು ಶೇ.70 ರಷ್ಟು ಅಥವಾ 4.16 ಕೋಟಿ ಜನರು ವಿವಿಧ ಒಬಿಸಿ ವರ್ಗಗಳ ಅಡಿಯಲ್ಲಿ ಬರುತ್ತಾರೆ. ಆಯೋಗವು ಒಬಿಸಿ ಕೋಟಾವನ್ನು ಸದ್ಯ ಇರುವ ಶೇ 32ರಿಂದ ಶೇ 51ಕ್ಕೆ ಹೆಚ್ಚಿಸಲು ಶಿಫಾರಸು ಮಾಡಿದೆ ಎಂದು ವರದಿ ತಿಳಿಸಿದೆ.

## ವರದಿಯ ಬಗ್ಗೆ ನಿಖರ ಮಾಹಿತಿ ಲಭ್ಯವಿಲ್ಲ: ಖರ್ಗೆ



ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ವರದಿಯಲ್ಲಿ ಏನಿದೆ ಎಂಬುದರ ಬಗ್ಗೆ ತಮಗೆ ತಿಳಿದಿಲ್ಲ ಮತ್ತು ಆದ್ದರಿಂದ ಈ ಬಗ್ಗೆ ಪ್ರತಿಕ್ರಿಯಿಸಲು ಇಷ್ಟಪಡುವುದಿಲ್ಲ ಎಂದಿದ್ದಾರೆ. ನನಗೆ ಗೊತ್ತಿಲ್ಲ, ಏಕೆಂದರೆ ಸಂಪುಟದಲ್ಲಿ ಏನು ಚರ್ಚಿಸಲಾಗುವುದು ಅಥವಾ ವರದಿಯಲ್ಲಿ ಏನಿದೆ ಎಂಬುದರ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ. ವರದಿ ಸಿಕ್ಕರೆ ನಾನು ಏನನ್ನಾದರೂ ಹೇಳಬಲ್ಲೆ. ಏ.17ರ ಸಂಪುಟ ಸಭೆಯಿಂದ ಯಾವುದೇ ನಿರ್ಧಾರ ಕೈಗೊಂಡರೆ, ನಾನು ಆ ಬಗ್ಗೆ ಪ್ರತಿಕ್ರಿಯಿಸಬಲ್ಲೆ ಎಂದು ಅವರು ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.ಅಧಿಕೃತ ಮೂಲಗಳ ಪ್ರಕಾರ, 2015ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಒಟ್ಟು 5.98 ಕೋಟಿ ನಾಗರಿಕರನ್ನು ಒಳಗೊಂಡಿದ್ದು, ಅವರಲ್ಲಿ ಸುಮಾರು ಶೇ.70 ರಷ್ಟು ಅಥವಾ 4.16 ಕೋಟಿ ಜನರು ವಿವಿಧ ಒಬಿಸಿ ವರ್ಗಗಳ ಅಡಿಯಲ್ಲಿ ಬರುತ್ತಾರೆ. ಆಯೋಗವು ಒಬಿಸಿ ಕೋಟಾವನ್ನು ಸದ್ಯ ಇರುವ ಶೇ.32ರಿಂದ ಶೇ.51ಕ್ಕೆ ಹೆಚ್ಚಿಸಲು ಶಿಫಾರಸು ಮಾಡಿದೆ ಎಂದು ವರದಿ ತಿಳಿಸಿದೆ.

# ಜಾತಿಗಣತಿ ವರದಿ ಹಿಂಪಡೆದು, ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಿ ವೈಜ್ಞಾನಿಕವಾಗಿ ವರದಿ ರೂಪಿಸಿ: ಪ್ರತಿಪಕ್ಷ ನಾಯಕ ಅಶೋಕ್ ಆಗ್ರಹ

**ಒಕ್ಕಲಿಗರು, ಲಿಂಗಾಯತರನ್ನು ಒಡೆದಿದ್ದಾರೆ, ಮುಸ್ಲಿಂ ವೋಟ್ ಬ್ಯಾಂಕ್‌ಗಾಗಿ ಮಾಡಿದ ವರದಿ**



**ಬೆಂಗಳೂರು, ಏ.13:** ಕೇವಲ ಮುಸ್ಲಿಮರನ್ನು ವೋಟ್ ಬ್ಯಾಂಕ್ ಮಾಡಿಕೊಳ್ಳಲು ಸಿಎಂ ಸಿದ್ದರಾಮಯ್ಯ ಜಾತಿ ಗಣತಿ ವರದಿ ಮಾಡಿಸಿದ್ದಾರೆ. ಈ ವರದಿಯನ್ನು ಹಿಂಪಡೆದು, ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಿ ವೈಜ್ಞಾನಿಕವಾಗಿ ವರದಿ ರೂಪಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿ ಹಾಗೂ ಧರ್ಮಗಳನ್ನು ಒಡೆಯುವ ಕೆಲಸ ಮಾಡಿದ್ದಾರೆ. ಮೊದಲು ರಾಜ್ಯದಲ್ಲಿ ಅತಿ ದೊಡ್ಡ ಜಾತಿ ಲಿಂಗಾಯತರು, ಎರಡನೇ ಅತಿ ದೊಡ್ಡ ಜಾತಿ ಒಕ್ಕಲಿಗರು ಹಾಗೂ ಮೂರನೆಯವರು ದಲಿತರು ಎಂದಿತ್ತು. ಆದರೆ ಈಗ ಮುಸ್ಲಿಮರು ಅತಿ ದೊಡ್ಡ ಜಾತಿ ಎನ್ನಲಾಗಿದೆ. ಮುಸ್ಲಿಮರಲ್ಲೇ ವಿವಿಧ ಜಾತಿಗಳಿದ್ದು, ಅದನ್ನು ಬೇರೆ ಮಾಡಿಲ್ಲ. ಒಕ್ಕಲಿಗರಲ್ಲೇ ಕೆಲವು ಜಾತಿಗಳನ್ನು ವಿಂಗಡಣೆ ಮಾಡಿದ್ದಾರೆ. ಕಾಂಗ್ರೆಸ್‌ಗೆ ಹೆಚ್ಚು ಮತ ನೀಡುವವರ ಸಂಖ್ಯೆಯನ್ನು ಹೆಚ್ಚಾಗಿ ತೋರಿಸಲಾಗಿದೆ. ಒಕ್ಕಲಿಗರಿಗೆ, ಲಿಂಗಾಯತರಿಗೆ, ದಲಿತರಿಗೆ ನಾಮ ಹಾಕಿದ್ದಾರೆ ಎಂದು ದೂರಿದರು.

ಸಿಎಂ ಸಿದ್ದರಾಮಯ್ಯ ಪಕ್ಷ, ಜಾತಿ, ಧರ್ಮ ಒಡೆಯುವುದರಲ್ಲಿ ನಂ.1 ಆಗಿದ್ದಾರೆ. ಸಿದ್ದರಾಮಯ್ಯ ಪ್ರಾಯೋಜಿತವಾದ ಈ ವರದಿ ಅವೈಜ್ಞಾನಿಕ. ಲಕ್ಷಾಂತರ ಜನರ ಮನೆಗೆ ಹೋಗದೆ ವರದಿ ಬರೆಯಲಾಗಿದೆ. ಕರ್ನಾಟಕ ತಂತ್ರಜ್ಞಾನದಲ್ಲೇ ನಂ.1 ಆಗಿದೆ. ಇದನ್ನು ಬಳಸಿಕೊಂಡು ವರದಿ ಮಾಡಬಹುದಿತ್ತು. ಆದರೂ ತಮಗೆ ಬೇಕಾದಂತೆ ವರದಿ ಬರೆಸಿದ್ದಾರೆ ಎಂದರು.

ಬ್ರಿಟಿಷರ ವಿರುದ್ದ ಹೋರಾಟ ಮಾಡಿದ್ದು ಹಳೆ ಕಾಂಗ್ರೆಸ್. ಈಗಿನ ಕಾಂಗ್ರೆಸ್ ನಲ್ಲಿ ಹಳಬರು ಇಲ್ಲ. ಈ ಕಾಂಗ್ರೆಸ್ ಒಕ್ಕಲಿಗರು, ಲಿಂಗಾಯತರ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದೆ. ಈಗಲೂ ಸಮಯವಿದೆ. ಆರು ತಿಂಗಳು ತಡವಾದರೂ ಪರವಾಗಿಲ್ಲ. ಪ್ರತಿ ಮನೆಗೆ ಹೋಗಿ ಸಮೀಕ್ಷೆ ಮಾಡಿ ವರದಿಯನ್ನು ಮತ್ತೆ ರೂಪಿಸಲಿ ಎಂದು ಆಗ್ರಹಿಸಿದರು.

ಈ ವರದಿಗೆ 150 ಕೋಟಿ ರೂ. ಖರ್ಚಾಗಿದೆ ಎನ್ನಲಾಗಿದೆ. ಅಧಿಕಾರಿ ಕಾಂತರಾಜು ಅವರನ್ನು ಮನೆಗೆ ಕರೆಸಿಕೊಂಡ ಸಿಎಂ ಸಿದ್ದರಾಮಯ್ಯ ಡಿಕ್ಟೇಶನ್ ಮಾಡಿಸಿ ವರದಿ ಬರೆಸಿದ್ದಾರೆ. ಬಳಿಕ ಕಾಂತರಾಜು ಸಹಿ ಹಾಕದೆ ಓಡಿದ್ದಾರೆ. ಈ ಹಣವನ್ನು ಯಾರು ತಿಂದಿದ್ದಾರೆ ಎಂದು ತನಿಖೆ ಮಾಡಬೇಕಿದೆ. ಕೇವಲ ಮುಸ್ಲಿಮರನ್ನು ವೋಟ್ ಬ್ಯಾಂಕ್ ಮಾಡಿಕೊಳ್ಳಲು ವರದಿ ಮಾಡಲಾಗಿದೆ ಎಂದರು.

ಹಳ್ಳಿಕಾರ್, ಕುಂಚಿಟಿಗರನ್ನು ಬೇರೆ ಮಾಡಲಾಗಿದೆ. ರೆಡ್ಡಿ ಲಿಂಗಾಯತರನ್ನು ಪ್ರತ್ಯೇಕ ಮಾಡಲಾಗಿದೆ. ಇಂತಹ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿ ಅದನ್ನು ಸಚಿವರು ಒಪ್ಪಿದರೆ ಆಯಾ ಸಮುದಾಯದ ಜನರು ಅವರನ್ನು ಒಪ್ಪುವುದಿಲ್ಲ. ಈ ವರದಿಯಿಂದಾಗಿ ಕಾಂಗ್ರೆಸ್ ನಲ್ಲೇ ದಂಗೆ ಆರಂಭವಾಗಲಿದೆ. ಸಮುದಾಯಗಳ ಜನರು ಮುಂದಿನ ಚುನಾವಣೆಯಲ್ಲಿ ಇವರನ್ನು ಹತ್ತಿರ ಸೇರಿಸುವುದಿಲ್ಲ. ಒಕ್ಕಲಿಗ ಸ್ವಾಮೀಜಿಯವರು ಸಭೆ ಕರೆದು ಈ ಬಗ್ಗೆ ಚರ್ಚೆ ಮಾಡಲಿದ್ದಾರೆ. ಇದೇ ರೀತಿ ಬೇರೆ ಸಮುದಾಯದವರೂ ಸಭೆ ಮಾಡಿ ತೀರ್ಮಾನ ಕೈಗೊಳ್ಳಲಿದ್ದಾರೆ ಎಂದರು.

ನ್ಯಾಷನಲ್ ಹೆರಾಲ್ಡ್ ಪತ್ರಿಕೆಯನ್ನು ಸ್ವಾತಂತ್ರ್ಯ ಹೋರಾಟಗಾರರು ಸ್ಥಾಪಿಸಿದ್ದರು. ಆದರೆ ಬಳಿಕ ಇಟಲಿ ಮೂಲದ ಸೋನಿಯಾ ಗಾಂಧಿ ಹಾಗೂ ಮಕ್ಕಳು 5 ಸಾವಿರ ಕೋಟಿ ಆಸ್ತಿ ಲೂಟಿ ಮಾಡಿದ್ದಾರೆ. ಅದು ದೇಶದ ಆಸ್ತಿಯೇ ಹೊರತು, ಇಟಲಿಯ ಆಸ್ತಿಯಲ್ಲ. ಈ ನಿಟ್ಟಿನಲ್ಲಿ ಇಡಿ ಉತ್ತಮ ಕೆಲಸ ಮಾಡಿದೆ ಎಂದರು.

ಬಾಬಾ ಸಾಹೇಬ್ ಅಂಬೇಡ್ಕರ್ ಸಂವಿಧಾನದಲ್ಲಿ ದಲಿತರಿಗೆ ಮೀಸಲಾತಿ ನೀಡಿದ್ದಾರೆ. ಆದರೆ ಮುಸ್ಲಿಮರಿಗೆ ಮೀಸಲಾತಿ ನೀಡಲು ರಾಜ್ಯಕ್ಕೆ ಅಧಿಕಾರವಿಲ್ಲ. ಜೊತೆಗೆ ಒಟ್ಟು ಮೀಸಲಾತಿ 50% ಗಿಂತ ಹೆಚ್ಚು ಮಾಡಲು ಸಾಧ್ಯವಿಲ್ಲ. ಮೂಗಿಗೆ ತುಪ್ಪ ಸವರುವ ಕೆಲಸವನ್ನು ಸರ್ಕಾರ ಮಾಡಿದೆ. ಹೆಚ್ಚಿನ ಮೀಸಲಾತಿಯನ್ನು ಯಾವ ಕಾನೂನಿನಡಿ ನೀಡಲಾಗುತ್ತದೆ ಎಂದು ಸರ್ಕಾರ ತಿಳಿಸಲಿ. ಬಿಜೆಪಿ ಇದ್ದಾಗ ಮುಸ್ಲಿಮರಿಗಿದ್ದ ಮೀಸಲಾತಿಯನ್ನು ತೆಗೆದು ಬೇರೆಯವರಿಗೆ ನೀಡಲಾಗಿತ್ತು ಎಂದರು.

ಬಿಜೆಪಿ–ಜೆಡಿಎಸ್ ಪ್ರತಿಭಟನೆಗೆ ವಿರುದ್ಧವಾಗಿ ಕಾಂಗ್ರೆಸ್ ಪ್ರತಿಭಟನೆ ಮಾಡುತ್ತಿರುವುದರಲ್ಲಿ ಅರ್ಥವಿಲ್ಲ. ಹಾಲಿನ ದರ, ಡೀಸೆಲ್, ವಿದ್ಯುತ್ ಮೊದಲಾದ ದರಗಳನ್ನು ಕಾಂಗ್ರೆಸ್ ಏರಿಸಿದೆ. ಕಾಂಗ್ರೆಸ್ ಎಲ್ಲೂ ದರ ಇಳಿಕೆ ಮಾಡಿಲ್ಲ. ಬೆಂಗಳೂರಿನಲ್ಲಿ ಪಾರ್ಕಿಂಗ್, ಕಸ ಶುಲ್ಕ ಮಾಡಲಾಗಿದೆ. ಬೆಂಗಳೂರಿನ ಜನರನ್ನು ತೆರಿಗೆಯಿಂದಲೇ ಹಿಂಡುತ್ತಿದ್ದಾರೆ ಎಂದರು.

# ಕರ್ನಾಟಕದಲ್ಲಿ ವಕ್ಫ್ ಕಾಯ್ದೆ ಜಾರಿಗೆ ಬರುವುದಿಲ್ಲ: ಸಚಿವ ಜಮೀರ್ ಖಾನ್

**ಹುಬ್ಬಳ್ಳಿ–ಧಾರವಾಡ, ಏ.13:** ವಕ್ಫ್ ತಿದ್ದುಪಡಿ ಕಾಯ್ದೆಯ ಕುರಿತಾದ ರಾಜಕೀಯ ವಾಗ್ವಾದ ಭಾನುವಾರ ಹೊಸ ತಿರುವು ಪಡೆದುಕೊಂಡಿದ್ದು, ಕರ್ನಾಟಕ ವಸತಿ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ವಿವಾದಾತ್ಮಕ ಶಾಸನವನ್ನು ಸಂಸತ್ತಿನಲ್ಲಿ ಅಂಗೀಕರಿಸಲಾಗಿದ್ದರೂ ರಾಜ್ಯದಲ್ಲಿ "ಅನುಷ್ಠಾನಗೊಳಿಸಲಾಗುವುದಿಲ್ಲ" ಎಂದು ಸ್ಪಷ್ಟವಾಗಿ ಘೋಷಣೆ ಮಾಡಿದ್ದಾರೆ.



ವಿರೋಧ ಪಕ್ಷದ ನೇತೃತ್ವದ ಇತರ ರಾಜ್ಯಗಳ ನಿಲುವನ್ನು ಪ್ರತಿಧ್ವನಿಸುತ್ತಾ, ಜಮೀರ್ ದೃಢವಾಗಿ ಹೇಳಿದರು, "ಮಮತಾ ಬ್ಯಾನರ್ಜಿ, ತಮಿಳುನಾಡು ಸಿಎಂ, ಕೇರಳ ಸರ್ಕಾರ ಮತ್ತು ಕರ್ನಾಟಕ ಸರ್ಕಾರವು ವಕ್ಫ್ ತಿದ್ದುಪಡಿ ಕಾಯ್ದೆಯ ಬಗ್ಗೆ ನಮಗೆ ಸ್ವೀಕಾರಾರ್ಹವಲ್ಲ ಎಂದು ನಿರ್ಧಾರ ತೆಗೆದುಕೊಂಡಿವೆ."

ಪಶ್ಚಿಮ ಬಂಗಾಳದಲ್ಲಿ ಕಾಯ್ದೆ ವಿರೋಧಿ ಪ್ರತಿಭಟನೆಗಳ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದ ಬಗ್ಗೆ ದುಃಖ ವ್ಯಕ್ತಪಡಿಸಿದ ಜಮೀರ್, "ಪಶ್ಚಿಮ ಬಂಗಾಳದಲ್ಲಿ ನಡೆದ ಪ್ರತಿಭಟನೆಗಳ ಸಮಯದಲ್ಲಿ ಮೂವರು ಜನರು ಸಾವನ್ನಪ್ಪಿದ್ದಾರೆ ಎಂದು ನನಗೆ ದುಃಖವಾಗಿದೆ. ಈ ಮಸೂದೆ ಅಂಗೀಕರಿಸಬಾರದಿತ್ತು, ಆದರೆ ಅದು ಅಂಗೀಕರಿಸ ಲ್ಪಟ್ಟಿದೆ. ನಾವು ನ್ಯಾಯಾಲಯದ ಮೂಲಕ ಸಮಸ್ಯೆಯನ್ನು ಪರಿಹರಿಸುತ್ತೇವೆ. ನ್ಯಾಯಾಲಯದಲ್ಲಿ ನಮಗೆ ನ್ಯಾಯ ಸಿಗುತ್ತದೆ ಎಂದು ನನಗೆ ಖಚಿತವಾಗಿದೆ... ನಾವು ಕರ್ನಾಟಕದಲ್ಲಿ ಅದನ್ನು ಜಾರಿಗೆ ತರುವುದಿಲ್ಲ. ಈ ತಿಂಗಳ ಆರಂಭದಲ್ಲಿ ಭಾರತದ ಸಂಸತ್ತು ಅಂಗೀಕರಿಸಿದ ವಕ್ಫ್ (ತಿದ್ದುಪಡಿ) ಕಾಯ್ದೆ, 2025, ವಕ್ಫ್‌ಗಳು ಎಂದು ಕರೆಯಲ್ಪಡುವ ಮುಸ್ಲಿಂ ದತ್ತಿ ಭೂಮಿ ದತ್ತಿಗಳ ನಿರ್ವಹಣೆಯಲ್ಲಿ ಗಮನಾರ್ಹ ಬದಲಾವಣೆಗಳನ್ನು ಪರಿಚಯಿಸುತ್ತದೆ. ಈ ಕಾಯ್ದೆಯು ಕೇಂದ್ರ ವಕ್ಫ್ ಮಂಡಳಿಯಲ್ಲಿ ಮುಸ್ಲಿಮೇತರ ಸದಸ್ಯರನ್ನು ಸೇರಿಸಲು ಮತ್ತು ಸರ್ಕಾರಿ ಮೇಲ್ವಿಚಾರಣೆಯನ್ನು ಹೆಚ್ಚಿಸಲು ಪ್ರಸ್ತಾಪಿಸುತ್ತದೆ, ಇದು ಪಾರದರ್ಶಕತೆಯನ್ನು ಹೆಚ್ಚಿಸಲು ಮತ್ತು ಭ್ರಷ್ಟಾಚಾರವನ್ನು ನಿಗ್ರಹಿಸುವ ಗುರಿಯನ್ನು ಹೊಂದಿದೆ.

ಕಾಯ್ದೆ ಅಂಗೀಕಾರದ ನಂತರ, ಕೆಲವು ರಾಜ್ಯಗಳಲ್ಲಿ ಪ್ರತಿಭಟನೆಗಳು ಭುಗಿಲೆದ್ದವು. ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ, ಪ್ರದರ್ಶನಗಳು ಹಿಂಸಾತ್ಮಕ ಘರ್ಷಣೆಗಳಾಗಿ ಉಲ್ಬಣಗೊಂಡವು, ಇದರ ಪರಿಣಾಮವಾಗಿ ಅನೇಕ ಸಾವುನೋವುಗಳು ಮತ್ತು ಗಾಯಗಳು ಸಂಭವಿಸಿದವು. ಈ ಕಾಯ್ದೆಯು ವಕ್ಫ್ ಆಸ್ತಿಗಳನ್ನು ನಿರ್ವಹಿಸುವಲ್ಲಿ ಸರ್ಕಾರದ "ಅತಿಕ್ರಮಣ"ಕ್ಕೆ ಕಾರಣವಾಗಬಹುದು ಮತ್ತು ಈ ದತ್ತಿಗಳ ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವಕ್ಕೆ "ಸಂಭಾವ್ಯ ಬೆದರಿಕೆ" ಒಡ್ಡಬಹುದು ಎಂದು ಪ್ರತಿಭಟನಾಕಾರರು ಕಳವಳ ವ್ಯಕ್ತಪಡಿಸಿದರು.

ಅಶಾಂತಿಗೆ ಪ್ರತಿಕ್ರಿಯಿಸಿದ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶಾಂತವಾಗಿರಲು ಮನವಿ ಮಾಡಿದರು, ರಾಜ್ಯದಲ್ಲಿ ಕಾಯ್ದೆಯನ್ನು ಜಾರಿಗೊಳಿಸಲಾಗುವುದಿಲ್ಲ ಎಂದು ಹೇಳಿದರು. ನಾಗರಿಕರು ಶಾಂತಿಯನ್ನು ಕಾಪಾಡಿಕೊಳ್ಳಲು ಮತ್ತು ಮತ್ತಷ್ಟು ಹಿಂಸಾಚಾರಕ್ಕೆ ಕಾರಣವಾಗುವ ಕ್ರಮಗಳಿಂದ ದೂರವಿರಲು ಅವರು ಒತ್ತಾಯಿಸಿದರು.

## ಆಯೋಗದಿಂದ ಸಲ್ಲಿಕೆಯಾಗಿರುವ ಲಿಂಗಾಯತ ಜಾತಿಗಣತಿ-ಜನಗಣತಿ ವರದಿ ಸ್ವೀಕರಾರ್ಹವಲ್ಲ



**ಬೆಂಗಳೂರು, ಏ.13:** ಹಿಂದುಳಿದ ವರ್ಗಗಳ ಆಯೋಗವು ಕಾಂಗ್ರೆಸ್ ನೇತೃತ್ವದ ಸರ್ಕಾರಕ್ಕೆ ಸಲ್ಲಿಸಿರುವ ವಿವಾದಾತ್ಮಕ ಜಾತಿ ಗಣತಿ ವರದಿಯನ್ನು ಒಪ್ಪಲು ಸಾಧ್ಯವಿಲ್ಲ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾ ಸಭಾದ ರಾಜ್ಯಾಧ್ಯಕ್ಷ ಶಂಕರ್‌ಬಿದರಿ ಭಾನುವಾರ ಹೇಳಿದ್ದಾರೆ.

ವೀರಶೈವ–ಲಿಂಗಾಯತ ಸಮುದಾಯದ ಜನಸಂಖ್ಯೆಯ ಬಗ್ಗೆ ವರದಿಯು ನಿಖರವಾದ ಮಾಹಿತಿಯನ್ನು ಒದಗಿಸುವುದಿಲ್ಲ. ವರದಿಯ ಪ್ರಕಾರ, ಸಮುದಾಯದ ಜನಸಂಖ್ಯೆಯನ್ನು 66 ಲಕ್ಷ ಎಂದು ತೋರಿಸಲಾಗಿದೆ ಎಂದರು. ಆದಾಗ್ಯೂ, ಎಲ್ಲ ಉಪಜಾತಿಗಳನ್ನು ಪರಿಗಣಿಸಿದಾಗ, ರಾಜ್ಯದಲ್ಲಿ ನಿಜವಾದ ಜನಸಂಖ್ಯೆ ಸುಮಾರು ಮೂರು ಕೋಟಿಯಷ್ಟಿದೆ. ನಾವು ಯಾವುದೇ ಸಂದರ್ಭದಲ್ಲೂ ಈ ವರದಿಯನ್ನು ಸ್ವೀಕರಿಸುವುದಿಲ್ಲ. ರಾಜ್ಯದಲ್ಲಿ ಹೊಸದಾಗಿ ಜಾತಿ ಜನಗಣತಿ ನಡೆಸುವಂತೆ ನಾವು ಸರ್ಕಾರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡುತ್ತೇವೆ ಎಂದು ಹೇಳಿದರು.

ಒಟ್ಟು 224 ವಿಧಾನಸಭಾ ಕ್ಷೇತ್ರಗಳ ಪೈಕಿ ಸುಮಾರು 150 ವಿಧಾನಸಭಾ ಕ್ಷೇತ್ರಗಳ ಚುನಾವಣೆಯ ಫಲಿತಾಂಶವನ್ನು ನಿರ್ಧರಿಸುವಲ್ಲಿ ವೀರಶೈವ–ಲಿಂಗಾಯತ ಸಮುದಾಯವು ನಿರ್ಣಾಯಕ ಪಾತ್ರ ವಹಿಸುವುದ ರಿಂದ, ಇದು ಕರ್ನಾಟಕದ ಅತ್ಯಂತ ಪ್ರಭಾವಶಾಲಿ ಸಮುದಾಯಗಳಲ್ಲಿ ಒಂದಾಗಿದೆ.

ಭಾನುವಾರ ಈ ವಿಷಯದ ಬಗ್ಗೆ ಪ್ರತಿಕ್ರಿಯಿಸಿದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂಬಿ ಪಾಟೀಲ್, ವರದಿಯಲ್ಲಿ ಹೇಳಿರುವಂತೆ ವೀರಶೈವ–ಲಿಂಗಾಯತ ಸಮುದಾಯದ ಜನಸಂಖ್ಯೆ ಸುಮಾರು 70 ಲಕ್ಷ ಅಲ್ಲ. ವಾಸ್ತವದಲ್ಲಿ ಒಂದು ಕೋಟಿಗಿಂತ ಹೆಚ್ಚಿದೆ ಎಂದು ಹೇಳಿದರು. ನಾನು ಜಾತಿಗಣತಿ ವರದಿಯ ಪ್ರತಿಯನ್ನು ಪಡೆದುಕೊಂಡಿದ್ದೇನೆ. ಯಾವುದೇ ಹೇಳಿಕೆಗಳನ್ನು ನೀಡುವ ಮುನ್ನ ಅದನ್ನು ಸಂಪೂರ್ಣವಾಗಿ ಪರಿಶೀಲಿಸಬೇಕಾಗಿದೆ.

ವರದಿಯನ್ನು ಅಧ್ಯಯನ ಮಾಡಿದ ನಂತರ, ಏ.17 ರಂದು ನಿಗದಿಯಾಗಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ನನ್ನ ಅಭಿಪ್ರಾಯಗಳನ್ನು ಹಂಚಿಕೊಳ್ಳುತ್ತೇನೆ ಎಂದರು. ಸಂದೇಹಗಳನ್ನು ಪರಿಹರಿಸಿಕೊಳ್ಳಬೇಕು ಮತ್ತು ಈ ವಿಷಯವನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಬೇಕು. ಮೀಸಲಾತಿ ಸೌಲಭ್ಯಗಳನ್ನು ಪಡೆಯಲು, ಅನೇಕ ಉಪಜಾತಿಗಳು ತಮ್ಮನ್ನು ಲಿಂಗಾಯತ ಸಮುದಾಯಕ್ಕೆ ಸೇರಿದವರು ಎಂದು ಅಧಿಕೃತವಾಗಿ ದಾಖಲಿಸಿಕೊಳ್ಳುವುದಿಲ್ಲ. ಅಂತಹ ಸಂಗತಿಗಳನ್ನು ಗಣನೆಗೆ ತೆಗೆದುಕೊಳ್ಳಬೇಕು. ಈ ವಿಷಯವನ್ನು ಚರ್ಚಿಸಲಾಗುವುದು ಮತ್ತು ಯಾವುದೇ ಸಂಘರ್ಷ ಇರುವುದಿಲ್ಲ ಎಂದರು.

## ಅಂಬೇಡ್ಕರ್ ಜಯಂತಿ: ಇಂದು-ನಾಳೆ ವಿಶೇಷ ಕಾರ್ಯಕ್ರಮ

**ಬೆಂಗಳೂರು, ಏ.13:** ಸಂವಿಧಾನ ಶಿಲ್ಪಿ ಡಾಕ್ಟರ್ ಬಿ. ಆರ್ ಅಂಬೇಡ್ಕರ್ ಅವರ ಜಯಂತಿ ಹಿನ್ನೆಲೆ ರಾಜ್ಯಾದ್ಯಂತ ಇಂದು ಮತ್ತು ನಾಳೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. 1925 ರ ಏಪ್ರಿಲ್ 10 ಹಾಗೂ 11 ರಂದು ಬೆಳಗಾವಿಯ ನಿಪ್ಪಾಣಿಗೆ ತಲುಪಿದ್ದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಆಗಮನಕ್ಕೆ 100 ವರ್ಷ ತುಂಬಿದ ಹಿನ್ನೆಲೆಯಲ್ಲಿ, ಹುಬ್ಬಳ್ಳಿಯಲ್ಲಿ ಇಂದು ಬಿಜೆಪಿ ಭೀಮಹೆಜ್ಜೆ ಎಂಬ ವಿಶೇಷ ಕಾರ್ಯಕ್ರಮ ಆಯೋಜಿಸಿದೆ. ಹುಬ್ಬಳ್ಳಿಗೆ ಆಗಮಿಸಿದ ಯಾತ್ರೆಯನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ವಾಗತಿಸಿದರು. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಲ್ಹಾದ್ ಜೋಶಿ, ಭೀಮ ಹೆಜ್ಜೆಗೆ ಶತಮಾನದ ಸಂಭ್ರಮವಾಗಿದ್ದು, ರಾಜ್ಯದ ವಿವಿಧೆಡೆಗಳಲ್ಲಿ ಐದು ದಿನಗಳ ಕಾಲ ಜನ ಜಾಗೃತಿ ಕಾರ್ಯಕ್ರಮಗಳು ನಡೆಯಲಿದೆ ಎಂದು ತಿಳಿಸಿದ್ದಾರೆ. ಬಿಜೆಪಿ ನಡೆಸುತ್ತಿರುವ ಭೀಮ ಹೆಜ್ಜೆ ಯಾತ್ರೆ ವಿರುದ್ಧ ವ್ಯಂಗ್ಯವಾಡಿರುವ ಸಚಿವ ಎಚ್.ಸಿ.ಮಹದೇವಪ್ಪ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಅಂಬೇಡ್ಕರ್ ಸೋಲಿಗೆ ಕಾಂಗ್ರೆಸ್ ಕಾರಣ ಎಂದು ದೂರಿದ್ದಾರೆ.

# ಅದ್ದೂರಿಯಾಗಿ ನೆರವೇರಿದ ಬೆಂಗಳೂರು ಕರಗ ಮಹೋತ್ಸವ



**ಬೆಂಗಳೂರು, ಏ.13:** ವಿಶ್ವವಿಖ್ಯಾತ ಬೆಂಗಳೂರಿನ ಪ್ರಸಿದ್ಧ ದ್ರೌಪದಿ ದೇವಿ ಕರಗ ಶಕ್ತ್ಯೋತ್ಸವವು ಶನಿವಾರ ಮಧ್ಯರಾತ್ರಿ ಚೈತ್ರ ಪೌರ್ಣಿಮೆಯ ಬೆಳದಿಂಗಳ ಬೆಳಕಿನಲ್ಲಿ ನಡೆದಿದ್ದು, ಸಿಎಂ ಸಿದ್ದರಾಮಯ್ಯ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದ್ದಾರೆ. ಮಧ್ಯರಾತ್ರಿ ಬೆಂಗಳೂರು ನಗರದ ಐತಿಹಾಸಿಕ ಕರಗ ಮಹೋತ್ಸವದ ಅಂಗವಾಗಿ ತಿಗಳರಪೇಟೆಯ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ, ನಾಡಜನರ ಕಲ್ಯಾಣಕ್ಕಾಗಿ ಪ್ರಾರ್ಥಿಸಿದ್ದಾರೆ. ಮಧ್ಯರಾತ್ರಿ ಸುಮಾರು 12.30 ರಿಂದ 1ರ ಸುಮಾರಿಗೆ ಹೊರಟ ಕರಗ ಮೆರವಣಿಗೆಯ ದರ್ಶನ ಪಡೆದು ಲಕ್ಷಾಂತರ ಭಕ್ತರು ಪುನೀತರಾದರು.

ಅರ್ಚಕ ಎ.ಜ್ಞಾನೇಂದ್ರ ಅವರು 15ನೇ ಬಾರಿಗೆ ಕರಗವನ್ನು ಹೊತ್ತು ಹೆಜ್ಜೆ ಹಾಕಿದರು.

ಉತ್ಸವದ ಹಿನ್ನೆಲೆಯಲ್ಲಿ ಮುಂಜಾನೆಯಿಂದಲೇ ಧರ್ಮರಾಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ, ಅಭಿಷೇಕ, ಮಹಾಮಂಗಳಾರತಿ ನಡೆಯಿತು. ಅರ್ಚಕ ಜ್ಞಾನೇಂದ್ರ ಅವರು ಅರಿಶಿನ ಬಣ್ಣದ ಸೀರೆ, ಬಳೆ ತೊಟ್ಟು ಕಬ್ಬನ್‌ಪಾರ್ಕ್‌ನ ಕರಗದ ಕುಂಟೆಯಲ್ಲಿ ದ್ರೌಪದಿ ದೇವಿಗೆ ಗಂಗೆಪೂಜೆ ಸಲ್ಲಿಸಿದರು. ಅಲ್ಲಿಂದ ಹಸಿಕರಗವನ್ನು ಮಂಟಪಕ್ಕೆ ಹೊತ್ತು ತಂದು ಧಾರ್ಮಿಕ ಕಾರ್ಯಗಳನ್ನು ನೆರವೇರಿಸಿದರು. ಧರ್ಮರಾಯಸ್ವಾಮಿ ದೇವಸ್ಥಾನದಿಂದ ಹೊರಬಂದ ಕರಗ, ಗಣಪತಿ ಮತ್ತು ಮುತ್ಯಾಲಮ್ಮ ದೇವಾಲಯ, ಹಲಸೂರು ಪೇಟೆಯ ಆಂಜನೇಯಸ್ವಾಮಿ, ರಾಮ ದೇವಾಲಯದಲ್ಲಿ ಪೂಜೆ ಸ್ವೀಕರಿಸಿ, ನಗರ್ತಪೇಟೆ, ಸಿದ್ದಣ್ಣ ಗಲ್ಲಿ, ಕಬನ್‌ಪೇಟೆ, ಗಾಣಿಗರ ಪೇಟೆ, ದೊಡ್ಡ ಪೇಟೆಯಿಂದ ಕೆ.ಆರ್.ಮಾರುಕಟ್ಟೆ ತಲುಪಿತು. ಅಕ್ಕಿಪೇಟೆ ರಸ್ತೆಯ ತವಕ್ಕಲ್ ಮಸ್ತಾನ್ ಸಾಬ್ ದರ್ಗಾಕ್ಕೆ ಭೇಟಿ ನೀಡಿ, ಬಳೇಪೇಟೆ, ಅಣ್ಣಮ್ಮ ದೇವಾಲಯ, ಕಿಲಾರಿ ರಸ್ತೆ, ಅವೆನ್ಯೂ ರಸ್ತೆ, ಕುಂಬಾರಪೇಟೆ, ತಿಗಳರ ಪೇಟೆಯಲ್ಲಿ ಸಾಗಿತು.

## ಏ.17: ಬೀದರ್-ಬೆಂಗಳೂರು ವಿಮಾನಯಾನ ಆರಂಭ

**ಬೆಂಗಳೂರು ಏ.13:** ಕೇಂದ್ರ ಸರ್ಕಾರ ಉಡಾನ್ ಸಬ್ಸಿಡಿ ನಿಲ್ಲಿಸಿದ ಹಿನ್ನೆಲೆಯಲ್ಲಿ ಸ್ಥಗಿತಗೊಂಡಿದ್ದ ಬೀದರ್–ಬೆಂಗಳೂರು ನಾಗರಿಕ ವಿಮಾನಯಾನ ಪುನಾರಂಭಿಸಲು ಕೆಕೆಆರ್‌ಡಿಬಿಯಿಂದ ಈ ವರ್ಷ 14 ಕೋಟಿ ಮೀಸಲಿಡಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಜಿಲ್ಲಾ ಪಂಚಾಯ್ತಿ ಕಾರ್ಯಾಲಯದಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಏ.16ರಂದು ಸಂಜೆ 4 ಗಂಟೆಗೆ ಬೀದರ್ ವಿಮಾನ ನಿಲ್ದಾಣಕ್ಕೆ ಆಗಮಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ವಿಮಾನ ನಿಲ್ದಾಣದ ಹೊರಗೆ ನಡೆಯುವ ಕಾರ್ಯಕ್ರಮದಲ್ಲಿ 17ರಂದು ಬೆಳಗ್ಗೆ ಬೀದರ್ ನಿಂದ ಬೆಂಗಳೂರಿಗೆ ತೆರಳಲಿರುವ ಆಯ್ದ 5 ಪ್ರಯಾಣಿಕರಿಗೆ ಬೋರ್ಡಿಂಗ್ ಪಾಸ್ ವಿತರಿಸುವ ಮೂಲಕ ನಾಗರಿಕ ವಿಮಾನಯಾನ ಸೇವೆಯ ಪುನಾರಂಭಕ್ಕೆ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ ಎಂದರು. ಕರುನಾಡಿಗೆ ಕಿರೀಟಪ್ರಾಯವಾಗಿರುವ ಬೀದರ್ ಜಿಲ್ಲೆ, ಸರ್ವಧರ್ಮಸಮನ್ವಯದ ನಾಡು. ಜಿಲ್ಲೆಯಲ್ಲಿ ಇತಿಹಾಸ ಪ್ರಸಿದ್ಧ ಬಸವಕಲ್ಯಾಣದ ಅನುಭವಮಂಟಪ, ಝರಣಿ ನರಸಿಂಹಸ್ವಾಮಿ ಕ್ಷೇತ್ರ, ಪಾಪನಾಶ, ನಾನಕ್ ಝೀರಾ ಗುರುದ್ವಾರ, ಮಹಮದ್ ಗವಾನ್ ಮದರಸಾ ಹಾಗೂ ಮೆಥೋಡಿಸ್ಟ್ ಚರ್ಚ್ ಇದೆ. ಈಗ ಹೊನ್ನಿಕೇರಿ ಅರಣ್ಯ ಪ್ರದೇಶವನ್ನು ಪರಿಸರ ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿ ಪಡಿಸುತ್ತಿದ್ದು, ಬೀದರ್‌ನಲ್ಲಿ ಪ್ರವಾಸೋದ್ಯಮಕ್ಕೆ ವಿಪುಲ ಅವಕಾಶವಿದೆ. ಹೀಗಾಗಿ ಈ ವಿಮಾನಯಾನ ಸೇವೆ ಮುಂದಿನ ದಿನಗಳಲ್ಲಿ ದೇಶ ವಿದೇಶಗಳ ಪ್ರವಾಸಿಗರಿಗೆ ನೆರವಾಗಲಿದೆ. ನಾಗರಿಕ ವಿಮಾನಯಾನ ಸೇವೆ ಪುನಾರಂಭಕ್ಕೆ ಸಹಕರಿಸಿದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಮೂಲಸೌಕರ್ಯಾಭಿವೃದ್ಧಿ ಸಚಿವರು ಹಾಗೂ ಸಚಿವ ಸಂಪುಟದ ಎಲ್ಲ ಸಹೋದ್ಯೋಗಿಗಳಿಗೆ ಧನ್ಯವಾದ ಅರ್ಪಿಸುವುದಾಗಿ ಖಂಡ್ರೆ ತಿಳಿಸಿದರು.

## ವಕ್ಫ್ ಕಾಯ್ದೆ ವಿರುದ್ಧ ಪ್ರತಿಭಟನೆ: ಹಿಂಸಾಚಾರದಲ್ಲಿ ಮೂವರ ಸಾವು

# ಮುರ್ಶಿದಾಬಾದ್‌ನಲ್ಲಿ ಕೇಂದ್ರೀಯ ಪಡೆಗಳ ನಿಯೋಜನೆ



**ಕೊಲ್ಕತ್ತಾ,ಏ.13:** ಪಶ್ಚಿಮ ಬಂಗಾಳದ ಮುರ್ಶಿದಾಬಾದ್ ಜಿಲ್ಲೆಯಲ್ಲಿ ವಕ್ಫ್ (ತಿದ್ದುಪಡಿ) ಕಾಯ್ದೆ 2025 ವಿರುದ್ಧ ನಡೆದ ಪ್ರತಿಭಟನೆಗಳು ಹಿಂಸಾತ್ಮಕವಾಗಿ ಪರಿವರ್ತನೆಗೊಂಡಿದ್ದು, ಶನಿವಾರದ ವರೆಗೆ ಕನಿಷ್ಠ ಮೂವರು ಸಾವನ್ನಪ್ಪಿದ್ದಾರೆ. ಈ ಘಟನೆಯಲ್ಲಿ 150ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದ್ದು, ಕಲ್ಕತ್ತಾ ಹೈಕೋರ್ಟ್ ಆದೇಶದಂತೆ ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗಿದೆ.

ಏಪ್ರಿಲ್ 8 ರಿಂದ ಮುರ್ಶಿದಾಬಾದ್‌ನ ಸುಟಿ, ಸಮ್ಸೆರ್ಗಂಜ್, ಧುಲಿಯಾನ್ ಮತ್ತು ಜಂಗಿಪುರ್ ಪ್ರದೇಶಗಳಲ್ಲಿ ಪ್ರತಿಭಟನೆಗಳು ಆರಂಭಗೊಂಡವು. ಶುಕ್ರವಾರದ ನಮಾಜ್ ಬಳಿಕ ಈ ಪ್ರತಿಭಟನೆಗಳು ಉಗ್ರಗೊಂಡವು. ಶನಿವಾರ, ಧುಲಿಯಾನ್ನ ಜಾಫ್ರಾಬಾದ್‌ನಲ್ಲಿ ತಂದೆ–ಮಗನಾದ ಹರಗೋಬಿಂದ ದಾಸ್ (65) ಮತ್ತು ಚಂದನ್ ದಾಸ್ (40) ರನ್ನು ಗುಂಪೊಂದು ದಾಳಿ ನಡೆಸಿ ಕೊಂದಿತು. ಇದೇ ವೇಳೆ, ಸುಟಿಯಲ್ಲಿ ಪೊಲೀಸರ ಗುಂಡಿನ ದಾಳಿಯಲ್ಲಿ 17 ವರ್ಷದ ಇಜಾಜ್ ಅಹ್ಮದ್ ಶೇಖ್ ಗಾಯಗೊಂಡು ಶನಿವಾರ ಮೃತಪಟ್ಟ. 18 ಪೊಲೀಸ್ ಸಿಬ್ಬಂದಿಗಳೂ ಗಾಯಗೊಂಡಿದ್ದಾರೆ.

ಪ್ರತಿಭಟನಾಕಾರರು ವಾಹನಗಳನ್ನು ಸುಟ್ಟು, ರಾಷ್ಟ್ರೀಯ ಹೆದ್ದಾರಿಗಳನ್ನು ತಡೆದರು ಮತ್ತು ಪೊಲೀಸರ ಮೇಲೆ ಕಲ್ಲು ತೂರಾಟ ನಡೆಸಿದರು. ಇಂಟರ್ನೆಟ್ ಸೇವೆಯನ್ನು ಸ್ಥಗಿತಗೊಳಿಸಲಾಗಿದ್ದು, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸೆಕ್ಷನ್ 163 ರಡಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿದೆ. ರಾಜ್ಯದ ಗೃಹ ಸಚಿವಾಲಯದ ವಿನಂತಿಯಂತೆ 300 ಸ್ಥಳೀಯ BSF ಸಿಬ್ಬಂದಿಗೆ ಹೆಚ್ಚುವರಿಯಾಗಿ ಐದು ಕಂಪನಿಗಳನ್ನು ನಿಯೋಜಿಸಲಾಗಿದೆ.

ಕಲ್ಕತ್ತಾ ಹೈಕೋರ್ಟ್, ಬಿಜೆಪಿ ನಾಯಕ ಸುವೇಂದು ಅಧಿಕಾರಿ ಅವರ ಅರ್ಜಿಯನ್ನು ಪುರಸ್ಕರಿಸಿ, "ರಾಜ್ಯದಲ್ಲಿ ಜನರ ಸುರಕ್ಷತೆಗೆ ಧಕ್ಕೆಯಾಗಿರುವಾಗ ಮೌನವಾಗಿರಲು ಸಾಧ್ಯವಿಲ್ಲ" ಎಂದು ಹೇಳಿ ಕೇಂದ್ರೀಯ ಪಡೆಗಳ ನಿಯೋಜನೆಗೆ ಆದೇಶಿಸಿತು. ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, "ವಕ್ಫ್ ಕಾಯ್ದೆಯನ್ನು ರಾಜ್ಯದಲ್ಲಿ ಜಾರಿಗೊಳಿಸುವುದಿಲ್ಲ" ಎಂದು ಘೋಷಿಸಿ, ಶಾಂತಿ ಕಾಪಾಡುವಂತೆ ಮನವಿ ಮಾಡಿದ್ದಾರೆ. ಅವರು ಈ ಕಾಯ್ದೆಯನ್ನು ಕೇಂದ್ರ ಸರ್ಕಾರ ಜಾರಿಗೊಳಿಸಿದ್ದು, ಪ್ರಶ್ನೆಗಳನ್ನು ಕೇಂದ್ರಕ್ಕೆ ಮುಟ್ಟಿಸಬೇಕೆಂದು ಸೂಚಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಸುಕಾಂತ ಮಜುಂದಾರ್, ಮಮತಾ ಸರ್ಕಾರದ "ತುಷ್ಟೀಕರಣ ರಾಜಕಾರಣ"ವನ್ನು ಟೀಕಿಸಿದ್ದಾರೆ. ಟಿಎಂಸಿಯ ರಾಜ್ಯಸಭಾ ಸಂಸದ ಡೆರೆಕ್ ಒ'ಬ್ರಿಯಾನ್, ಬಿಜೆಪಿಯನ್ನು "ಸಾಮುದಾಯಿಕ ಭಾವನೆಗಳನ್ನು ಕೆರಳಿಸುವ" ಆರೋಪ ಮಾಡಿದ್ದಾರೆ. ಪೊಲೀಸ್ ಮಹಾನಿರ್ದೇಶಕ ರಾಜೀವ್ ಕುಮಾರ್, ಗಾಸಿಪ್ಗಳಿಂದ ಹಿಂಸಾಚಾರ ಉಲ್ಬಣಗೊಂಡಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಪ್ರಸ್ತುತ, ಸ್ಥಿತಿಗತಿ ಶಾಂತವಾಗಿದ್ದು, ಪೊಲೀಸರು ಮತ್ತಷ್ಟು ಬಂಧನಕ್ಕಾಗಿ ದಾಳಿಗಳನ್ನು ಮುಂದುವರಿಸಿದ್ದಾರೆ.

# ದೆಹಲಿಯಲ್ಲಿ ಸಿಎಂ ಪತಿಯಿಂದ ಸರ್ಕಾರ ನಿರ್ವಹಣೆ ಪ್ರತಿಪಕ್ಷ ನಾಯಕಿ ಆತಿಶಿ ಆರೋಪ; ಬಿಜೆಪಿ ತಿರುಗೇಟು

**ನವದೆಹಲಿ,ಏ.13:** ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಪತಿ ಮನೀಶ್ ಗುಪ್ತಾ ಅವರು ಸರ್ಕಾರದ ಕಾರ್ಯನಿರ್ವಹಣೆಯನ್ನು ಅನಧಿಕೃತವಾಗಿ ನಿಯಂತ್ರಿಸುತ್ತಿದ್ದಾರೆ ಎಂದು ಆಮ್ ಆದ್ಮಿ ಪಕ್ಷದ ನಾಯಕಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕಿ ಆತಿಶಿ ಗಂಭೀರ ಆರೋಪ ಮಾಡಿದ್ದಾರೆ.



ಆತಿಶಿ ಅವರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಒಂದು ಚಿತ್ರದ ಜೊತೆಗೆ ಈ ಆರೋಪವನ್ನು ಮಾಡಿದ್ದಾರೆ. ಚಿತ್ರದಲ್ಲಿ ಮನೀಶ್ ಗುಪ್ತಾ ಅವರು ದೆಹಲಿ ಪಾಲಿಕೆ (ಎಂಸಿಡಿ), ದೆಹಲಿ ಜಲ ಮಂಡಳಿ (ಡಿಜೆಬಿ), ಸಾರ್ವಜನಿಕ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯೂಡಿ) ಮತ್ತು ದೆಹಲಿ ನಗರ ಆಶ್ರಯ ಸುಧಾರಣಾ ಮಂಡಳಿ (ಡಿಯುಎಸ್‌ಐಬಿ) ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿರುವುದು ಕಂಡುಬಂದಿದೆ.

"ಈ ಚಿತ್ರವನ್ನು ಗಮನವಿಟ್ಟು ಗಮನಿಸಿ. ಎಂಸಿಡಿ, ಡಿಜೆಬಿ, ಪಿಡಬ್ಲ್ಯೂಡಿ ಮತ್ತು ಡಿಯುಎಸ್‌ಐಬಿ ಅಧಿಕಾರಿಗಳ ಸಭೆಯನ್ನು ನಡೆಸುತ್ತಿರುವ ವ್ಯಕ್ತಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಪತಿಯಾಗಿದ್ದಾರೆ" ಎಂದು ಆತಿಶಿ ಬರೆದಿದ್ದಾರೆ. ಈ ಪರಿಸ್ಥಿತಿಯನ್ನು ಗ್ರಾಮೀಣ ಆಡಳಿತಕ್ಕೆ ಹೋಲಿಸಿದ ಅವರು, "ಗ್ರಾಮದಲ್ಲಿ ಮಹಿಳಾ ಸರಪಂಚ ಆಯ್ಕೆಯಾದರೆ, ಆಡಳಿತವನ್ನು ಅವರ ಪತಿ ನಿರ್ವಹಿಸುತ್ತಾರೆ ಎಂಬ ಮಾತು ಕೇಳಿದ್ದೆವು. ಆದರೆ ರಾಜ್ಯದ ಮುಖ್ಯಮಂತ್ರಿಯಾಗಿರುವ ಮಹಿಳೆಯ ಸರ್ಕಾರವನ್ನು ಅವರ ಪತಿ ನಡೆಸುವುದು ಇದೇ ಮೊದಲ ಬಾರಿಯಾಗಿದೆ" ಎಂದು ಕಿಡಿಕಾರಿದ್ದಾರೆ.

ಆತಿಶಿ ಮತ್ತಷ್ಟು ಆರೋಪಗಳನ್ನು ಮಾಡಿದ್ದು, ದೆಹಲಿಯಲ್ಲಿ ಆಗಾಗ್ಗೆ ವಿದ್ಯುತ್ ಕಡಿತಗೊಳ್ಳುವುದು ಮತ್ತು ಖಾಸಗಿ ಶಾಲೆಗಳ ಶುಲ್ಕ ಏರಿಕೆಯಂತಹ ಸಮಸ್ಯೆಗಳಿಗೆ ರೇಖಾ ಗುಪ್ತಾ ಅವರ ಆಡಳಿತದ ಕೊರತೆ ಕಾರಣವಿರಬಹುದೇ ಎಂದು ಪ್ರಶ್ನಿಸಿದ್ದಾರೆ. "ರೇಖಾ ಗುಪ್ತಾ ಅವರಿಗೆ ಆಡಳಿತದ ಕೆಲಸ ನಿರ್ವಹಿಸಲು ತಿಳಿದಿಲ್ಲವೇ ಇದು ದೆಹಲಿಯ ಜನರಿಗೆ ಅಪಾಯಕಾರಿಯಾಗಿದೆ" ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಆರೋಪಕ್ಕೆ ಪ್ರತಿಕ್ರಿಯಿಸಿರುವ ದೆಹಲಿ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚದೇವ, ಆತಿಶಿ ಅವರ ಹೇಳಿಕೆಯನ್ನು "ಅವಮಾನಕರ" ಎಂದು ಕರೆದಿದ್ದಾರೆ. "ಆತಿಶಿ, ನೀವೇ ಮಹಿಳೆಯಾಗಿದ್ದರೂ, ಇನ್ನೊಬ್ಬ ಮಹಿಳಾ ನಾಯಕಿಯನ್ನು ಅವಮಾನಿಸುತ್ತಿರುವುದು ಆಶ್ಚರ್ಯಕರ. ರೇಖಾ ಗುಪ್ತಾ ಅವರು ದೆಹಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿ ಸಂಘದ ಕಾರ್ಯದರ್ಶಿಯಿಂದ ಮುಖ್ಯಮಂತ್ರಿಯವರೆಗೆ ತಮ್ಮ ಕಠಿಣ ಪರಿಶ್ರಮದಿಂದ ಬೆಳೆದಿದ್ದಾರೆ" ಎಂದು ಸಚದೇವ ತಿರುಗೇಟು ನೀಡಿದ್ದಾರೆ. ರೇಖಾ ಗುಪ್ತಾ ಅವರ ಪತಿಯ ಬೆಂಬಲವು ಕಾನೂನುಬಾಹಿರವಾಗಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.

# ಆರ್‌ಟಿಐ ಕಾಯ್ದೆ ತಿದ್ದುಪಡಿ ಬಗ್ಗೆ ವಿರಾಮ ಹಾಕಿ ಪರಿಶೀಲಿಸಿ, ರದ್ದುಗೊಳಿಸಿ: ಜೈರಾಮ್ ರಮೇಶ್

**ನವದೆಹಲಿ, ಏ.13:** ಹಿರಿಯ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಭಾನುವಾರ ಆರ್‌ಟಿಐ ಕಾಯ್ದೆ, 2005 ರ ತಿದ್ದುಪಡಿಯನ್ನು "ಆರ್ಟಿಐ–ವಿನಾಶಕಾರಿ" ಎಂದು ಬಣ್ಣಿಸಿದ್ದು, ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಇತ್ತೀಚಿನ ಬದಲಾವಣೆಯನ್ನು "ವಿರಾಮ ಹಾಕಿ, ಪರಿಶೀಲಿಸಿ ಮತ್ತು ರದ್ದುಗೊಳಿಸಿ" ಎಂದು ಒತ್ತಾಯಿಸಿದರು.



ರಾಜ್ಯಸಭಾ ಸಂಸದರು ಮಾರ್ಚ್ 23 ರಂದು ಕೇಂದ್ರ ಸಚಿವರಿಗೆ ಪತ್ರ ಬರೆದು, "ಡಿಪಿಡಿಪಿ ಕಾಯ್ದೆಯ ಸೆಕ್ಷನ್ 44(3) ಆರ್‌ಟಿಐ ಕಾಯ್ದೆ, 2005 ಅನ್ನು ವಾಸ್ತವಿಕವಾಗಿ ನಾಶಪಡಿಸುತ್ತದೆ" ಎಂದು ಆರೋಪಿಸಿ ಅದನ್ನು ರದ್ದುಗೊಳಿಸುವಂತೆ ಒತ್ತಾಯಿಸಿದರು.

ವೈಷ್ಣವ್‌ಗೆ ಬರೆದ ಪತ್ರದಲ್ಲಿ ರಮೇಶ್, "ಆರ್‌ಟಿಐ ಕಾಯ್ದೆ, 2005 ರ ಅಡಿಯಲ್ಲಿ ಬಹಿರಂಗಪಡಿಸುವಿಕೆಗಳನ್ನು ರಕ್ಷಿಸುತ್ತದೆ ಎಂದು ನಿಮ್ಮ ಪತ್ರದಲ್ಲಿ ಉಲ್ಲೇಖಿಸಲಾದ ಡಿಪಿಡಿಪಿ ಕಾಯ್ದೆ, 2023 ರ ಸೆಕ್ಷನ್ 3 ಸಂಪೂರ್ಣವಾಗಿ ಅಪ್ರಸ್ತುತವಾಗಿದೆ ಏಕೆಂದರೆ ಆರ್ಟಿಐ ಕಾಯ್ದೆ, 2005 ರ ಸೆಕ್ಷನ್ 8(1) ಅನ್ನು ತೀವ್ರವಾಗಿ ತಿದ್ದುಪಡಿ ಮಾಡಲಾಗಿದೆ" ಎಂದು ಹೇಳಿದ್ದಾರೆ.

"ಡಿಪಿಡಿಪಿ ಕಾಯ್ದೆಯ ಸೆಕ್ಷನ್ 3 ಈಗ ತಿದ್ದುಪಡಿ ಮಾಡಿದ ಆರ್‌ಟಿಐ ಕಾಯ್ದೆಯ ಪ್ರಕಾರ ಬಹಿರಂಗಪಡಿಸುವಿಕೆಗಳನ್ನು ಮಾತ್ರ ರಕ್ಷಿಸುತ್ತದೆ, ಇದು ಎಲ್ಲಾ ವೈಯಕ್ತಿಕ ಮಾಹಿತಿಯನ್ನು ಪ್ರವೇಶಿಸುವುದನ್ನು ವಿನಾಯಿತಿ ನೀಡುತ್ತದೆ" ಎಂದು ಅವರು ಹೇಳಿದರು.

ಹಿರಿಯ ಕಾಂಗ್ರೆಸ್ ನಾಯಕರು, "2015 ರ ಆರ್ಟಿಐ ಕಾಯ್ದೆಯ ಸೆಕ್ಷನ್ 8(1) ರಲ್ಲಿನ ನಿಬಂಧನೆಯನ್ನು ಅಳಿಸುವುದು ಸಂಪೂರ್ಣವಾಗಿ ಅನಗತ್ಯವಾಗಿದೆ, ಇದು ನಾಗರಿಕರ ಮಾಹಿತಿ ಹಕ್ಕನ್ನು ಶಾಸಕರ ಹಕ್ಕುಗಳಿಗೆ ಸಮಾನವಾಗಿದೆ ಎಂದು ಗುರುತಿಸುತ್ತದೆ. ವಾಸ್ತವವಾಗಿ, ಆ ನಿಬಂಧನೆಯು ವೈಯಕ್ತಿಕ ಮಾಹಿತಿ ವಿನಾಯಿತಿಗೆ ಮಾತ್ರವಲ್ಲ, ಆರ್‌ಟಿಐ ಕಾಯ್ದೆ, 2005 ರ ಸೆಕ್ಷನ್ 8(1) ರಲ್ಲಿನ ಎಲ್ಲಾ ವಿನಾಯಿತಿಗಳಿಗೂ ಅನ್ವಯಿಸುತ್ತದೆ" ಎಂದು ಹೇಳಿದರು.

"ಆದ್ದರಿಂದ ನಾನು ಮತ್ತೊಮ್ಮೆ ನಿಮ್ಮನ್ನು ಆರ್‌ಟಿಐ ಕಾಯ್ದೆ, 2005 ಕ್ಕೆ ಮಾಡಿದ ತಿದ್ದುಪಡಿಯನ್ನು ವಿರಾಮಗೊಳಿಸಿ, ಪರಿಶೀಲಿಸಿ ಮತ್ತು ರದ್ದುಗೊಳಿಸುವಂತೆ ಬಲವಾಗಿ ಒತ್ತಾಯಿಸುತ್ತೇನೆ. ನೀವು ನೋಡಿದಂತೆ ಈ ವಿಷಯವು ನಾಗರಿಕ ಸಮಾಜ, ಶಿಕ್ಷಣ ತಜ್ಞರು ಮತ್ತು ರಾಜಕೀಯ ಪಕ್ಷಗಳ ವ್ಯಾಪಕ ಶ್ರೇಣಿಯ ಜನರನ್ನು ಸಹ ಬಳಸಿಕೊಳ್ಳುತ್ತಿದೆ" ಎಂದು ರಮೇಶ್ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

ಏಪ್ರಿಲ್ 10 ರಂದು ಜೈರಾಮ್ ರಮೇಶ್ ಅವರಿಗೆ ನೀಡಿದ ಉತ್ತರದಲ್ಲಿ ಅಶ್ವಿನಿ ವೈಷ್ಣವ್ ಅವರು, ಡಿಪಿಡಿಪಿ ಕಾಯ್ದೆ, 2023 "ಪುಟ್ಟಸ್ವಾಮಿ ಅವರ ತೀರ್ಪಿನಲ್ಲಿ ಪ್ರತಿಪಾದಿಸಲಾದ ಗೌಪ್ಯತೆ ತತ್ವಗಳು ಮತ್ತು ಆರ್‌ಟಿಐ ಕಾಯ್ದೆಯಲ್ಲಿ ಜಾರಿಗೆ ತರಲಾದ ಸಾರ್ವಜನಿಕ ಜೀವನದಲ್ಲಿ ಪಾರದರ್ಶಕತೆಯ ತತ್ವಗಳಿಗೆ ಹೊಂದಿಕೆಯಾಗುತ್ತದೆ" ಎಂದು ಹೇಳಿದ್ದರು ಎಂದು ಉಲ್ಲೇಖಿಸಬಹುದು.

# ನ.1ರೊಳಗೆ ಕೇರಳವನ್ನು ತೀವ್ರ ಬಡತನ ಮುಕ್ತ ರಾಜ್ಯವೆಂದು ಘೋಷಣೆ: ಪಿಣರಾಯಿ ವಿಜಯನ್

**ಕಣ್ಣೂರು, ಏ.13** : ನವೆಂಬರ್ 1 ರೊಳಗೆ ರಾಜ್ಯವನ್ನು ತೀವ್ರ ಬಡತನ ದಿಂದ ಮುಕ್ತಗೊಳಿಸಲಾಗುವುದು ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಭಾನುವಾರ ಘೋಷಿಸಿದರು. ಪಿಣರಾಯಿ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು, ತಮ್ಮ "ಧರ್ಮದಂ ವಿಧಾನಸಭಾ ಕ್ಷೇತ್ರ"ವನ್ನು ಕೇರಳದ 140 ವಿಧಾನಸಭಾ ಕ್ಷೇತ್ರಗಳಲ್ಲಿ ತೀವ್ರ ಬಡತನ ನಿರ್ಮೂಲನೆ ಮಾಡಿದ ಮೊದಲನೆಯ ಕ್ಷೇತ್ರವೆಂದು ಘೋಷಿಸಲಾಗಿದೆ ಎಂದು ಹೇಳಿದರು. ರಾಜ್ಯಾದ್ಯಂತ ತೀವ್ರ ಬಡತನ ನಿರ್ಮೂಲನೆ ಮಾಡುವ ಗುರಿಯನ್ನು ಹೊಂದಿರುವ ಸಮಗ್ರ ಸರ್ಕಾರಿ ಯೋಜನೆಯೊಂದಿಗೆ ಈ ಉಪಕ್ರಮವು ಮೂರು ವರ್ಷಗಳ ಹಿಂದೆ ಪ್ರಾರಂಭವಾಯಿತು ಎಂದು ವಿಜಯನ್ ಹೇಳಿದರು. ವಿವಿಧ ಇಲಾಖೆಗಳು, ವಿಶೇಷವಾಗಿ ಸ್ಥಳೀಯ ಸ್ವ–ಸರ್ಕಾರಿ ಸಂಸ್ಥೆಗಳು ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಈ ಪ್ರಯತ್ನವನ್ನು ಗುರುತಿಸಲಾಗಿದೆ. "ರಾಜ್ಯದಲ್ಲಿ ತೀವ್ರ ಬಡತನದ ಪ್ರಮಾಣ ಶೇಕಡಾ ಒಂದಕ್ಕಿಂತ ಕಡಿಮೆ ಇದ್ದರೂ, ನಾವು ಈ ಸವಾಲನ್ನು ಗಂಭೀರವಾಗಿ ಪರಿಗಣಿಸಿದ್ದೇವೆ ಮತ್ತು ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಬದ್ಧರಾಗಿದ್ದೇವೆ. ಒಟ್ಟು 64002 ವ್ಯಕ್ತಿಗಳನ್ನು ಗುರುತಿಸಲಾಯಿತು, ಮತ್ತು ಅವರಲ್ಲಿ ಪ್ರತಿಯೊಬ್ಬರನ್ನು ಮತ್ತು ಅವರ ಕುಟುಂಬ ಸದಸ್ಯರನ್ನು ಉನ್ನತೀಕರಿಸಲು ಸೂಕ್ಷ್ಮ ಯೋಜನೆಗಳನ್ನು ಅಭಿವೃದ್ಧಿಪಡಿಸಲಾಯಿತು ಎಂದು ಮುಖ್ಯಮಂತ್ರಿ ಹೇಳಿದರು. ಜನರಲ್ಲಿ ಕರುಣೆ ಮತ್ತು ಒಗ್ಗಟ್ಟಿನ ನಿಜವಾದ ಉದಾಹರಣೆ



ಎಂದು ಅವರು ಈ ಯೋಜನೆಯನ್ನು ಬಣ್ಣಿಸಿದರು. 2025 ರ ವೇಳೆಗೆ ತೀವ್ರ ಬಡತನವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಗುರಿಯೊಂದಿಗೆ ಈ ಅಭಿಯಾನವು ಆಗಸ್ಟ್ 2021 ರಲ್ಲಿ ಪ್ರಾರಂಭವಾಯಿತು ಎಂದು ವಿಜಯನ್ ಹೇಳಿದರು. ತೀವ್ರ ಬಡತನದಲ್ಲಿ ವಾಸಿಸುವ ಕುಟುಂಬಗಳಿಗೆ ಆಹಾರ, ಆರೋಗ್ಯ ರಕ್ಷಣೆ, ವಸತಿ ಮತ್ತು ಸ್ಥಿರ ಮಾಸಿಕ ಆದಾಯದ ಪ್ರವೇಶವನ್ನು ಖಚಿತಪಡಿಸಿಕೊಳ್ಳುವತ್ತ ಇದು ಗಮನಹರಿಸಿತು.

ಧರ್ಮಡಂ ಕ್ಷೇತ್ರದಲ್ಲಿ, ಎಲ್ಲಾ ಎಂಟು ಪಂಚಾಯತ್ಗಳನ್ನು ಇಂದು ಅಧಿಕೃತವಾಗಿ ತೀವ್ರ ಬಡತನದಿಂದ ಮುಕ್ತಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. "ತ್ವರಿತ ಸಹಾಯದ ಹಕ್ಕು" ಮತ್ತು ಸೂಕ್ಷ್ಮ ಯೋಜನಾ ಉಪಕ್ರಮಗಳ ಅನುಷ್ಠಾನದ ಮೂಲಕ ಈ ಯಶಸ್ಸನ್ನು ಸಾಧಿಸಲಾಗಿದೆ.


ಸೂಕ್ಷ್ಮ ಯೋಜನೆಯಡಿಯಲ್ಲಿ ಸೇವೆಗಳನ್ನು ತಕ್ಷಣ ಕಾರ್ಯಗತಗೊಳಿಸಬಹುದಾದ, ಅಲ್ಪಾವಧಿ ಮತ್ತು ದೀರ್ಘಾವಧಿಯ ಯೋಜನೆಗಳಾಗಿ ಮೂರು ವಿಧಗಳಾಗಿ ವರ್ಗೀಕರಿಸಲಾಗಿದೆ. ಎಂಟು ಗ್ರಾ.ಪಂ.ಗಳಿಂದ ಒಟ್ಟು 196 ಕುಟುಂಬಗಳನ್ನು ಆಯ್ಕೆ ಮಾಡಲಾಗಿದೆ. ಬಡತನದ ಗಡಿಯಲ್ಲಿರುವವರಿಗೆ ಪಡಿತರ ಚೀಟಿಗಳು, ಅಂಗವೈಕಲ್ಯ ಪ್ರಮಾಣಪತ್ರಗಳು, ಆಧಾರ್ ಕಾರ್ಡ್‌ಗಳು, ಬ್ಯಾಂಕ್ ಖಾತೆಗಳು, ಎಲ್ಪಿಜಿ ಸಂಪರ್ಕಗಳು, ಕಲ್ಯಾಣ ಪಿಂಚಣಿಗಳು, ಉದ್ಯೋಗ ಕಾರ್ಡ್‌ಗಳು, ಮತದಾರರ ಗುರುತಿನ ಚೀಟಿ ಮತ್ತು ಎಲ್ಲಾ ಕುಟುಂಬ ಸದಸ್ಯರಿಗೆ ಉಚಿತ ವೈದ್ಯಕೀಯ ಆರೈಕೆಯ ಪ್ರವೇಶ ಸೇರಿದಂತೆ ಅಗತ್ಯ ದಾಖಲೆಗಳು ಮತ್ತು ಬೆಂಬಲವನ್ನು ಒದಗಿಸಲಾಯಿತು. ಕುಡುಂಬಶ್ರೀ ಘಟಕಗಳು ಮತ್ತು ಎನ್ಜಿಒಗಳ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿಗಳ ಮೂಲಕ 19 ಕುಟುಂಬಗಳ 79 ವ್ಯಕ್ತಿಗಳಿಗೆ ಉಚಿತ ಆಹಾರವನ್ನು ವಿತರಿಸಲಾಯಿತು. ಸಾರ್ವಜನಿಕ ಆರೋಗ್ಯ ಕೇಂದ್ರಗಳು ಮತ್ತು ಉಪಶಾಮಕ ಆರೈಕೆ ಕೇಂದ್ರಗಳ ಮೂಲಕ 139 ವ್ಯಕ್ತಿಗಳಿಗೆ ಆರೋಗ್ಯ ಸೇವೆಗಳನ್ನು ವಿಸ್ತರಿಸಲಾಯಿತು. ವಿವಿಧ ಇಲಾಖಾ ಮತ್ತು ಪಂಚಾಯತ್ ಮಟ್ಟದ ಯೋಜನೆಗಳ ಮೂಲಕ ಮಾಸಿಕ ಆದಾಯ ಬೆಂಬಲವನ್ನು ವ್ಯವಸ್ಥೆ ಮಾಡಲಾಯಿತು. ಲೈಫ್ ವಸತಿ ಯೋಜನೆಯಡಿಯಲ್ಲಿ, 27 ಹೊಸ ಮನೆಗಳನ್ನು ನಿರ್ಮಿಸಲಾಯಿತು ಮತ್ತು 40 ಕುಟುಂಬಗಳಿಗೆ ಮನೆ ನವೀಕರಣ ಕಾರ್ಯಗಳಿಗಾಗಿ ಆರ್ಥಿಕ ನೆರವು ನೀಡಲಾಯಿತು. ಹೆಚ್ಚುವರಿಯಾಗಿ ಆರು ಕುಟುಂಬಗಳಿಗೆ ಭೂಮಿ ಮತ್ತು ವಸತಿ ಎರಡನ್ನೂ ಒದಗಿಸಲಾಯಿತು. ನೋಂದಣಿ ಮತ್ತು ಪುರಾತತ್ವ ಸಚಿವ ರಾಮಚಂದ್ರನ್ ಕಡನ್ನಪಲ್ಲಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

# ವಕ್ಫ್ ಕಾಯಿದೆ ವಿರುದ್ಧ ಪ್ರತಿಭಟನೆಗೆ ಓವೈಸಿ ಕರೆ

**ನವದೆಹಲಿ,ಏ.13:** ವಕ್ಫ್ ಕಾಯಿದೆ 2025 ರ ವಿರುದ್ಧ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯು ಏಪ್ರಿಲ್ 19 ರಂದು ಸಂಜೆ 7 ರಿಂದ ರಾತ್ರಿ 10 ರವರೆಗೆ ಹೈದರಾಬಾದ್ ದಾರುಸ್ಸಲಾಂನಲ್ಲಿ ಪ್ರತಿಭಟನಾ ಸಾರ್ವಜನಿಕ ಸಭೆಗೆ ಓವೈಸಿ ಕರೆ ನೀಡಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯ ಅಧ್ಯಕ್ಷ ಖಾಲಿದ್ ಸೈಫುಲ್ಲಾ ರಹಮಾನಿ ಅಧ್ಯಕ್ಷತೆಯಲ್ಲಿ ಈ ಸಾರ್ವಜನಿಕ ಪ್ರತಿಭಟನಾ ಸಭೆ ನಡೆಯುತ್ತಿದ್ದು, ತೆಲಂಗಾಣ ಮತ್ತು ಆಂಧ್ರಪ್ರದೇಶದಿಂದ ದೊಡ್ಡ ಮುಸ್ಲಿಂ ಸಂಘಟನೆಗಳ ಸದಸ್ಯರು ಭಾಗವಹಿಸಲಿದ್ದಾರೆ ಎನ್ನಲಾಗಿದೆ. ವಕ್ಫ್ ತಿದ್ದುಪಡಿಗೆ ಸಂಬಂಧಪಟ್ಟಂತೆ ಈಗಾಗಲೇ ಮುಸ್ಲಿಂ ಸಂಘಟನೆಗಳು ಆಕ್ರೋಶ ಹೊರಹಾಕಿದ್ದು, ಈ ಕೂಡಲೇ ಈ ನಿರ್ಧಾರವನ್ನು ಕೈ ಬಿಡುವಂತೆ ಆಗ್ರಹಿಸಿದ್ದರು. ಇದೀಗ ಪ್ರತಿಭಟನಾ ಸಾರ್ವಜನಿಕ ಸಭೆಗೆ ಕರೆ ನೀಡಿದ್ದು, ಈ ಸಭೆಯಲ್ಲಿ ವಕ್ಸ್ ತಿದ್ದುಪಡಿಯ ಬಗ್ಗೆ ಜನರ ಬಳಿ ಮಾತನಾಡಲಿದ್ದಾರೆ.

# ಇಟಲಿ ಉಪಪ್ರಧಾನಮಂತ್ರಿ ಆಂಟೋನಿಯೊ ತಜಾನಿಯನ್ನು ಅಭಿನಂದಿಸಿದ ಡಾ|ಆರತಿ ಕೃಷ್ಣ

**ಮುಂಬಯಿ,ಏ.13:** ಭಾರತದ ಇಟಲಿಯ ರಾಯಭಾರಿ ಗೌರವಾನ್ವಿತ ಆಂಟೋನಿಯೊ ಬಾರ್ತೋಲಿ ಅವರು ದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ಔತಣಕೂಟ ಕಳೆದ ಶುಕ್ರವಾರ ಆಯೋಜಿಸಿದ್ದರು. ಔತಣಕೂಟದಲ್ಲಿ ಇಟಲಿಯ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಆಂಟೋನಿಯೊ ತಜಾನಿ ಪಾಲ್ಗೊಂಡಿದ್ದು ಅವರನ್ನು ಅನಿವಾಸಿ ಭಾರತೀಯ ಸಮಿತಿ (ಎನ್‌ಆರ್‌ಐ ಫೋರಂ ಕರ್ನಾಟಕ) ಇದರ ಉಪಾಧ್ಯಕ್ಷೆ ಡಾ| ಆರತಿ ಕೃಷ್ಣ ಭೇಟಿಯಾಗಿ ಅರ್ಥಪೂರ್ಣ ಸಂಭಾಷಣೆ ಹಾಗೂ ಕುಶಲೋಪರಿ ನಡೆಸಿ ಅಭಿನಂದಿಸಿದರು.



# ಅಡ್ಯಾರು ಶ್ರೀವೀರಾಂಜನೇಯ ದೇಗುಲದಲ್ಲಿ ಪ್ರತಿಷ್ಠಾ ಅಷ್ಟಬಂಧ ಬ್ರಹ್ಮಕಲಶೋತ್ಸವ

**ಮುಂಬಯಿ,ಏ.13:** ಮಂಗಳೂರು ಹೊರವಲಯದ ಅಡ್ಯಾರು ಶ್ರೀ ವೀರಾಂಜನೇಯ ದೇವಸ್ಥಾನದಲ್ಲಿ ಕಳೆದ ಶನಿವಾರ ಶ್ರೀ ದೇವರಿಗೆ ಬ್ರಹ್ಮಕಲಶಾಭಿಷೇಕ ನೆರವೇರಿತು. ಬೆಳಗ್ಗೆ ಹನುಮದ್ ಜಯಂತಿ, ಕಲಶಪ್ರಧಾನ ಹೋಮ, ಕಲಶಪೂಜೆ, ಕಲಶಾಭಿಷೇಕ ಪ್ರಾರಂಭ ಪೂರ್ವಾಹ್ನ ವೃಷಭ ಲಗ್ನ ಸುಮುಹೂರ್ತದಲ್ಲಿ ಶ್ರೀ ದೇವರಿಗೆ ಬ್ರಹ್ಮಕಲಶಾಭಿಷೇಕ, ಪ್ರಸನ್ನ ಪೂಜೆ, ಸಾಮೂಹಿಕ ಪ್ರಾರ್ಥನೆ, ಅಲಂಕಾರ ಪೂಜೆ, ಮಹಾಪೂಜೆ, ಪಲ್ಲಪೂಜೆ, ಪ್ರಸಾದ ವಿತರಣೆ, ಮಹಾ ಅನ್ನಸಂತರ್ಪಣೆ, ಸಂಜೆ ಮಹಾಚಕ್ರಾಬ್ ಮಂಡಲಪೂಜೆ, ವಿಷ್ಣು ಸಹಸ್ರನಾಮಾರ್ಚನೆ, ಶ್ರೀ ದೇವರಿಗೆ ರಂಗಪೂಜೆ, ಸಾಮೂಹಿಕ ಪ್ರಾರ್ಥನೆ, ಪ್ರಸಾದ ವಿತರಣೆ ನಡೆಯಿತು. ಸಂಜೆ ಸಭಾ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮ ಜರಗಿತು.




ಸಂಜೆ ಕ್ಷೇತ್ರದ ತಂತ್ರಿ ವೇ| ಮೂ| ಶ್ರೀ ಸೀತಾರಾಮ ಅಚಾರ್ಯ ಇವರ ಘನ ಉಪಸ್ಥಿತಿ ಹಾಗೂ ಬ್ರಹ್ಮಕಲಶೋ ತ್ಸವ ಸಮಿತಿ ಅಧ್ಯಕ್ಷ ಶಶಿಧರ ಬಿ.ಶೆಟ್ಟಿ ಬರೋಡ ಸಾರಥ್ಯದಲ್ಲಿ ಧಾರ್ಮಿಕ ಸಭಾ ಕಾರ್ಯಕ್ರಮ ಜರಗಿದ್ದು ಗುರುಪುರ ವಜ್ರದೇಹಿ ಮಠದ ಶ್ರೀ ಶ್ರೀ ರಾಜಶೇಖರಾನಂದ ಸ್ವಾಮೀಜಿ ಆಶೀರ್ವಚನಗೈದರು.

ಕರ್ನಾಟಕ ಉಚ್ಚ ನ್ಯಾಯಲಯದ ನ್ಯಾಯಮೂರ್ತಿ ವಿ.ಶ್ರೀಶಾನಂದ ಇವರ ಗೌರವ ಉಪಸ್ಥಿತಿಯಲ್ಲಿ ನಡೆಸಲಾದ ಸಭಾ ಕಾರ್ಯಕ್ರಮದಲ್ಲಿ ರಾಜ್ಯ ಧಾರ್ಮಿಕ ಪರಿಷತ್ ಸದಸ್ಯೆ ಮಲ್ಲಿಕ್ಕಾ ಪಕ್ಕಳ ದೀಪ ಬೆಳಗಿಸಿ ಚಾಲನೆಯನ್ನಿತ್ತರು. ದಾಮೋದರ ಶರ್ಮಾ ಬಾರ್ಕೂರು ಧಾರ್ಮಿಕ ಉಪನ್ಯಾಸ ನೀಡಿದರು. ಈ ಸಂದರ್ಭ ಮಂಗಳೂರು ನಗರ ಉತ್ತರ ಶಾಸಕ ಡಾ| ವೈ. ಭರತ್ ಶೆಟ್ಟಿ, ಅಡ್ಯಾರ್ ಗಾರ್ಡನ್ ಕಿಶನ್ ಜೆ. ಶೆಟ್ಟಿ, ಕೋಟಿ ಚೆನ್ನಯ ಜನ್ಮಸ್ಥಾನ ಸಂಘಟನಾ ಸಮಿತಿ ಪಡುಮಲೆ ಇದರ ಅಧ್ಯಕ್ಷ ಹರಿಕೃಷ್ಣ ಬಂಟ್ವಾಳ, ಎಕ್ಸ್‌ಪರ್ಟ್ ಶಿಕ್ಷಣ ಸಂಸ್ಥೆ ಮಂಗಳೂರು ಅಧ್ಯಕ್ಷ ಪ್ರೊ| ನರೇಂದ್ರ ಎಲ್.ನಾಯಕ್, ಸ್ಕೌಟ್ಸ್ ಆ್ಯಂಡ್ ಗೈಡ್ಸ್ ಉಡುಪಿ ಜಿಲ್ಲಾ ಆಯುಕ್ತ ಜಯಕರ ಶೆಟ್ಟಿ ಇಂದಾಳಿ, ಕಾವೇಶ್ವರ ದೇವಸ್ಥಾನ ಬೆಳ್ಳೂರು ಆಡಳಿತ ಮೋಕ್ತೇಸರ ರಘು ಎಲ್.ಶೆಟ್ಟಿ (ಪ್ಯಾಪಿಲಾನ್), ನಮ್ಮ ಕುಡ್ಲ ವಾಹಿನಿಯ ನಿರ್ದೇಶಕ ಲೀಲಾಕ್ಷ ಕರ್ಕೇರ, ಉದ್ಯಮಿ ಬಿಪಿನ್ ರೈ ವೈದ್ಯಾವು ಗುತ್ತು ಅತಿಥಿ ಅಭ್ಯಾಗತರುಗಳಾಗಿದ್ದರು. ಅತಿಥಿಗಳು ತಂತ್ರಿ ವೇ| ಮೂ| ಶ್ರೀ ಸೀತಾರಾಮ ಅಚಾರ್ಯ ಅವರಿಗೆ ಅರ್ಘ ಪವನು ಚಿನ್ನವನ್ನಿತ್ತು ಹಾಗೂ ಶಶಿಧರ ಬಿ.ಶೆಟ್ಟಿ ಅವರನ್ನು ಗೌರವಿಸಿ ಅಭಿನಂದಿಸಿದರು.

ಕೌಶಿಕ್ ಕುಲಾಲ್ ಪ್ರಾರ್ಥನೆಯನ್ನಾಡಿದರು. ಚಂದ್ರಹಾಸ ಶೆಟ್ಟಿ ಸ್ವಾಗತಿಸಿ ಪ್ರಸ್ತಾವಿಕ ನುಡಿಗಳನ್ನಾಡಿದರು. ಆರ್.ಜೆ ಅಭಿಷೇಕ್ ಕಾರ್ಯಕ್ರಮ ನಿರೂಪಿಸಿದರು. ಆನಂದ್ ಶೆಟ್ಟಿ ದಡ್ಡುಳಿಕೆ ವಂದನಾರ್ಪಣೆಗೈದರು. ಉತ್ಸವದ ಮುನ್ನ ಶ್ರೀ ಕ್ಷೇತ್ರ ಒಡಿಯೂರು ಇದರ ಶ್ರೀ ಶ್ರೀ ಗುರುದೇವಾನಂದ ಸ್ವಾಮೀಜಿ, ಗುರುಪುರ ವಜ್ರದೇಹಿ ಮಠದ ಶ್ರೀ ಶ್ರೀ ರಾಜಶೇಖರಾನಂದ ಸ್ವಾಮೀಜಿ ಚಿತ್ತೈಸಿ ಆಶೀರ್ವಚನಗೈದರು. ಮಂಗಳೂರು ಸಂಸದ ಕ್ಯಾ| ಬ್ರಿಜೇಶ್ ಚೌಟ ಶುಭಶಂಸನೆಗೈದರು.

ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ರಮೇಶ್ ತುಂಬೆ, ದಿವಾಕರ ಶೆಟ್ಟಿ ನಡಿಗುತ್ತು, ಮೋಹನ್ ಕೆಳಗಿನಕೆರೆ ಪ್ರಾಯೋಜಕತ್ವ ಹಾಗೂ ಶ್ವೇತಾ ಅರೆಹೊಳೆ ನಿರ್ದೇಶನದಲ್ಲಿ ನಂದಗೋಕುಲ ಅರೆಹೊಳೆ ಪ್ರತಿಷ್ಠಾನ ಮಂಗಳೂರು ತಂಡವು ನೃತ್ಯ ವೈಭವವನ್ನು ಹಾಗೂ ಕೊಟ್ಟಾರಿ ಸಮಾಜ ಸುಧಾರಕ ಸಂಘ ದಕ್ಷಿಣ ಕನ್ನಡ ಪ್ರಾಯೋಜಕತ್ವದಲ್ಲಿ ಪುತ್ತೂರು ಜಗದೀಶ್ ಅಚಾರ್ಯ ಮತ್ತು ಬಳಗವು ಮುಖ್ಯಪ್ರಾಣ ಗಾನಾಮೃತ ಭಕ್ತಿ ಗಾನ ಸುಧೆ ಪ್ರಸ್ತುತ ಪಡಿಸಿದರು.

# ವಿರಾರ್ ಪೂರ್ವದ ಮನ್ವೇಲ್‌ಪಾಡನ ಡಾನ್‌ಬಾಸ್ಕೋ ಸಭಾಗೃಹದಲ್ಲಿ ರಕ್ತದಾನ ಶಿಬಿರ

**ಮುಂಬಯಿ,ಏ.13:** ವಿರಾರ್ ಪೂರ್ವದ ಮನ್ವೇಲ್‌ಪಾಡ ಇಲ್ಲಿನ ಡಾನ್ ಬಾಸ್ಕೋ ನಾಮಾಂಕಿತ ರಿಸರೆಕ್ಷನ್ ಚರ್ಚ್ ಸಭಾಗೃಹದಲ್ಲಿ ಇಂದಿಲ್ಲಿ ಭಾನುವಾರ ಬೆಳಿಗ್ಗೆಯಿಂದ ಮಧ್ಯಾಹ್ನ ತನಕ ರಕ್ತದಾನ ಶಿಬಿರ ಆಯೋಜಿಸಿತ್ತು.



ರಿಸರೆಕ್ಷನ್ ಚರ್ಚ್, ಸೇಲ್ಸಿಯನ್ ಕೋ. ಆಪರೇಟರ್ಸ್ ಸಂಸ್ಥೆಯ ಸಹಯೋಗದೊಂದಿಗೆ ದಯಾನಂದ ಆಸ್ಪತ್ರೆ ತಲಾಸರಿ, ಕ್ಯಾನೋಸಿಯನ್ ಸಿಸ್ಟರ್ಸ್ ಮತ್ತು ಡಾ| ಆರ್.ಎನ್ ಕೂಪರ್ ಆಸ್ಪತ್ರೆ ಇದರ ಬ್ಲಡ್ ಸೆಂಟರ್ ಇವುಗಳ ಸಹಕಾರ ಮತ್ತು ಸೋಜಾ ಎಸ್ಟೇಟ್ ಏಜೆನ್ಸಿ ಹಾಗೂ ಡಯನ್ ಡಿಸೋಜಾ ಕಾಂಟ್ರಾಕ್ಟರ್ ಆ್ಯಂಡ್ ಇಂಟೀರಿಯರ್ ಡಿಸೈನರ್ ಸಂಸ್ಥೆಗಳ ಸಹಪ್ರಾಯೋಜ ಕತ್ವದಲ್ಲಿ ಆಯೋಜಿಸಲಾಗಿತ್ತು. ರಿಸರೆಕ್ಷನ್ ಚರ್ಚ್‌ನ ಪ್ರಧಾನ ಧರ್ಮಗುರು ರೆ| ಫಾ| ಥೋಮಸ್ ಡಿಕೋಸ್ಟಾ ಅನುಗ್ರಹಿಸಿ ಶಿಬಿರಕ್ಕೆ ಚಾಲನೆಯನ್ನಿತ್ತು ಶುಭ ಕೋರಿದರು. ಈ ಸಂದರ್ಭದಲ್ಲಿ ಶಿಬಿರದ ಪ್ರಾಯೋಜಕರೂ ಸೇಲ್ಸಿಯನ್ ಸಂಸ್ಥೆಯ ರೂವಾರಿ, ರಿಸರೆಕ್ಷನ್ ಚರ್ಚ್‌ನ ಕೊಂಕಣಿ ಸಮುದಾಯದ ಮುಖ್ಯಸ್ಥ ಡಯನ್ ಡಿಸೋಜಾ (ಶಿರ್ವಾ ಉಡುಪಿ) ರಕ್ತದಾನಿಗಳಿಗೆ ಸರ್ಟಿಫಿಕೇಟುಗಳನ್ನಿತ್ತು ಅಭಿವಂದಿಸಿದರು. ಭಗಿನಿ ಸಿ| ನಯನಾ ಪವಾರ, ಸಿ| ರಝಾ ಡಿಮೆಲ್ಲೋ, ಫೆಲ್ಸಿ ಡಿ. ಡಿಸೋಜಾ ಕೊಪ್ಪ, ಡೇವಿಡ್ ಕ್ಯಾಸ್ಟೆಲಿನೋ, ರೋಹನ್ ಕ್ರಾಸ್ಟೊ, ಜೂಲಿ ಚೆಟ್ಟಿಯಾರ್, ಜಿತೇಂದ್ರ ಕುಜೂರು, ಸೀತಲ್ ಕುಜೂರು ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಡಾ| ಆಶಿತೋಷ್ ಮಿಶ್ರಾ, ಲ್ಯಾಬ್ ತಂತ್ರಜ್ಞೆ ಸಹೇದ ಧನಾನಿ ಶಿಬಿರರವನ್ನು ನಡೆಸಿದ್ದು ನೂರಾರು ಜನರು ಆಗಮಿಸಿ ರಕ್ತದಾನಗೈದರು.

# ಮುಂಬಯಿ: ಕ್ರೈಸ್ತರಿಂದ ಪಾಮ್ ಸಂಡೇ ಆಚರಣೆ

**ಮುಂಬಯಿ, ಏ.17:** ಯೇಸು ಕ್ರೈಸ್ತನು ಶಿಲುಬೆಯಲ್ಲಿ ಪ್ರಾಣತ್ಯಾಗಗೈಯುವ ಮುನ್ನ ಜೆರುಸಲೇಮ್ ನಗರಕ್ಕೆ ಆಗಮಿಸುತ್ತಿರುವಂತೆ ಅಲ್ಲಿ ನೆರೆದ ಜನತೆ ಆಲಿವ್ ತಾಳೆಗರಿಗಳಿಂದ ಅವರನ್ನು ಆತ್ಮೀಯವಾಗಿ ಬರಮಾಡಿ ಕೊಂಡ ಸನ್ನಿವೇಶವನ್ನು ಪಾಮ್‌ಸಂಡೇ ಆಗಿ ಕ್ರೈಸ್ತರು ಆಚರಿಸುತ್ತಿರುವುದು ವಾಡಿಕೆ. ಅಂತೆಯೇ ವಿಶ್ವದಾದ್ಯಂತದ ಕ್ರೈಸ್ತರು ರೂಢಿಯಾಗಿಸಿ ಆಚರಿಸುತ್ತಿರುವ ಗರಿಗಳ ಭಾನುವಾರ ಅರ್ಥಾತ್ ಉತ್ಸಾಹ ಆದಿತ್ಯವಾರ (ಪಾಮ್– ಪ್ಯಾಶನ್ ಸಂಡೇ) ಇಂದಿಲ್ಲಿ ಆದಿತ್ಯವಾರ ಮುಂಬಯಿಯಲ್ಲಿನ ಕ್ರೈಸ್ತ ಜನತೆಯೂ ಆಚರಿಸಿತು.



ಆ ಪ್ರಯುಕ್ತ ಅಂಧೇರಿ ಪೂರ್ವದ ಚಕಲಾ ಇಲ್ಲಿನ ಹೋಲಿ ಫ್ಯಾಮಿಲಿ ಚರ್ಚ್‌ನಲ್ಲಿ ನೇರವೇರಿದ ಪಾಮ್ ಸಂಡೇ ಧಾರ್ಮಿಕ ಕಾರ್ಯಕ್ರಮದಲ್ಲಿ ಚರ್ಚ್‌ನ ಧರ್ಮಗುರು ರೆ| ಫಾ| ಆಂಡ್ರ್ಯೂ ರೋಡ್ರಿಗಸ್ ಪ್ರಾರ್ಥನಾ ವಿಧಿಗಳೊಂದಿಗೆ ತಾಳೆಗಳ ಆಶೀರ್ವಚನ ನೆರವೇರಿಸಿ ನೆರೆದ ಸದ್ಭಕ್ತರಿಗೆ ಹಂಚಿದರು. ಧರ್ಮಗುರು ರೆ| ಫಾ| ಅರುಣ್ ಲೋಬೋ (ಬಾಳೆಹೊನ್ನೂರು) ಕೊಂಕಣಿ ಭಾಷೆಯಲ್ಲಿ ಪೂಜೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಚರ್ಚ್‌ನ ಪ್ರಧಾನ ಧರ್ಮಗುರು ರೆ| ಫಾ| ಜೆರಾಲ್ಡ್ ರೋಡ್ರಿಕ್ಸ್ ಎಸ್‌ಜೆ, ಧರ್ಮಗುರುಗಳಾದ ರೆ| ಫಾ| ಸ್ಟೀಸರ್ ಫಿರೋಜ್, ರೆ| ಫಾ| ಜೋಕಿಮ್ ಟೆಲ್ಲಿಸ್, ಫಾ| ಸುಮಿತ್ ಡಿಸೋಜಾ ಪ್ರಾರ್ಥನಾ ವಿಧಿಗಳಲ್ಲಿ ಸಹಭಾಗಿಗಳಾಗಿದ್ದರು.

ಈ ಭಾನುವಾರದಿಂದ ಬರುವ ಆದಿತ್ಯವಾರದ ವರೆಗೆ ಕ್ರೈಸ್ತ ಬಾಂಧವರು ಪವಿತ್ರವಾರ (ಹೋಲಿ ವೀಕ್) ಆಚರಿಸಲಿದ್ದು, ಬರುವ ಗುರುವಾರವನ್ನು ಶುಭ ಗುರುವಾರ (ಮೌಂಡಿ ಥರ್ಸ್‌ಡೇ) ಮತ್ತು ಶುಕ್ರವಾರವನ್ನು ಗುಡ್‌ಫ್ರೈಡೇ ವನ್ನಾಗಿ ಆಚರಿಸಿ ಈಸ್ಟರ್ ಸಂಡೇ ಸಂಭ್ರಮಕ್ಕೆ ಪೂರ್ವ ಸಿದ್ಧತೆ ನಡೆಸಲಿದ್ದಾರೆ.

# ಪಕ್ಷದಲ್ಲಿ ಎಲ್ಲರಿಗಿಂತ ಕೊನೆ ಎಂಬ ಭಾವನೆ ಬೇಡ: ಸೇವಾದಳದವರಿಗೆ ಅಧಿಕಾರ ನೀಡಲು ಚಿಂತನೆ– ಡಿ.ಕೆ.ಶಿವಕುಮಾರ್

**ಬೆಂಗಳೂರು, ಏ.13–** ಸೇವಾದಳ ಕಾಂಗ್ರೆಸ್ ಪಕ್ಷದ ಆಧಾರಸ್ತಂಭ. ಪಕ್ಷದಲ್ಲಿ ನೀವು ಎಲ್ಲರಿಗಿಂತ ಕೊನೆ ಎಂಬ ಭಾವನೆ ಬೇಡ. ತಾಲೂಕು, ಜಿಲ್ಲಾ ಮಟ್ಟದಲ್ಲಿ ಸೇವಾದಳದವರಿಗೂ ಅಧಿಕಾರ ನೀಡುವ ಚಿಂತನೆ ನಡೆಸಲಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸಮಾಜಸೇವೆ ಮಾಡುವವರನ್ನು ಹೆಚ್ಚು ಗುರುತಿಸುತ್ತದೆ. ಹೀಗಾಗಿ ನಮ್ಮ ಸಮಾಜದಲ್ಲಿ ರಾಮನ ತಂದೆ ದಶರಥ ಮಹಾರಾಜನಿಂಗಿಂತ, ರಾಮನ ಭಂಟ ಹನುಮಂತನ ದೇವಾಲಯಗಳು ಹೆಚ್ಚಾಗಿವೆ. ಅದೇ ರೀತಿ ನೀವು ಕಾಂಗ್ರೆಸ್ ಪಕ್ಷಕ್ಕೆ ಆಧಾರಸ್ತಂಭ. ಇದನ್ನು ಸೇವಾದಳದ ಎಲ್ಲಾ ಕಾರ್ಯಕರ್ತರು ತಲೆಯಲ್ಲಿಟ್ಟುಕೊಳ್ಳಬೇಕು.

ಸೇವಾದಳ ಕಾಂಗ್ರೆಸ್ ಪಕ್ಷದ ಕಡೆಯ ಅಂಗ, ನಮ್ಮನ್ನು ಗುರುತಿಸುವುದಿಲ್ಲ ಎಂಬ ಆಲೋಚನೆಯನ್ನು ನಿಮ್ಮ ತಲೆಯಿಂದ ಕಿತ್ತೊಗೆಯಬೇಕು. ನಿಮ್ಮಲ್ಲಿ ನಾಯಕತ್ವದ ಗುಣ ಇದೆ ಎಂದು ನೆಹರೂ ಹಾಗೂ ಇಂದಿರಾ ಗಾಂಧಿ ಅವರೇ ಸೇವಾದಳದ ಅಧ್ಯಕ್ಷ ಸ್ಥಾನ ವಹಿಸಿದ್ದರು ಎಂದರು.

ಸೇವಾದಳದವರು ಹಾಕುವ ಗಾಂಧಿ ಟೋಪಿಯನ್ನು ಎಲ್ಲಾ ನಾಯಕರು ಹಾಕುತ್ತಾರೆ. ಬೆಳಗಾವಿ ಅಧಿವೇಶನ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಎಲ್ಲಾ ನಾಯಕರೂ ಇದನ್ನು ಧರಿಸಿದ್ದರು. ಬೇರೆ ನಾಯಕರ ಜತೆಗೆ ನೀವು ಸರಿಸಮಾನರು. ಬಿ.ಕೆ. ಹರಿಪ್ರಸಾದ್ ಅವರು ರಾಷ್ಟ್ರೀಯ ಸೇವಾದಳದ ಅಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ. ಸಂಸತ್ ಸದಸ್ಯರಾಗಿದ್ದಾರೆ. ಇನ್ನು ಅನೇಕರು ಸೇವಾದಳದಲ್ಲಿ ಕೆಲಸ ಮಾಡಿದ್ದಾರೆ. ಅವರು ಶಾಸಕರು, ಮಂತ್ರಿಗಳಾಗಿ ದೊಡ್ಡ ನಾಯಕರಾಗಿ ಬೆಳೆದಿದ್ದಾರೆ". "ನಾವು ಹುಟ್ಟಿದ ಮೇಲೆ ಸಮಾಜಕ್ಕೆ ಏನಾದರೂ ಸೇವೆ ಮಾಡಬೇಕು. ನನ್ನಿಂದ ಏನೂ ಸಾಧ್ಯವಿಲ್ಲ ಎಂಬ ಆಲೋಚನೆ ಮಾಡಬಾರದು. ನೀವು ಶಾಸಕರು, ಮಂತ್ರಿ, ಮುಖ್ಯಮಂತ್ರಿ ಆಗಬಹುದು. ನೀವು ನಿಮ್ಮ ಆತ್ಮವಿಶ್ವಾಸ ಕಳೆದುಕೊಳ್ಳಬೇಡಿ. ಒಳ್ಳೆಯ ಕಾಲ ಬರುತ್ತಿದೆ. ಬ್ಲಾಕ್ ಅಧ್ಯಕ್ಷರಾಗಿದ್ದ ಮಲ್ಲಿಕಾರ್ಜುನ ಖರ್ಗೆ ಅವರು ಇಂದು ರಾಷ್ಟ್ರೀಯ ಅಧ್ಯಕ್ಷರಾಗಿದ್ದಾರೆ. ಅವರು ಹಾಗೂ ರಾಹುಲ್ ಗಾಂಧಿ ಅವರು ಜಿಲ್ಲಾ ಕಾಂಗ್ರೆಸ್‌ಗೆ ಹೊಸ ಸ್ವರೂಪ ನೀಡಲು ಪ್ರಯತ್ನಿಸುತ್ತಿದ್ದಾರೆ"

"ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಆಯ್ಕೆ ಸಮಿತಿಯು ಸೇವಾದಳ ಸೇರಿದಂತೆ ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್ ಅಭಿಪ್ರಾಯ ಸ್ವೀಕರಿಸುವ ಕೆಲಸ ಮಾಡಲಿದೆ. ನಿಮ್ಮ ಸೇವೆಯನ್ನು ನಾವು ಗಮನದಲ್ಲಿಟ್ಟುಕೊಂಡಿದ್ದೇವೆ. ಸೇವಾದಲದಲ್ಲಿ ಹೊಸಬರಿಗೆ ಅವಕಾಶ ಕಲ್ಪಿಸಬೇಕು. ಭಾರತ ಜೋಡೋ ಸಂದರ್ಭದಲ್ಲಿ ನಾವು ಅನೇಕ ಜಾಗಗಳನ್ನು ಗುರುತಿಸಿದ್ದು, ಶಾಶ್ವತ ಕಾಂಗ್ರೆಸ್ ತರಬೇತಿ ಕೇಂದ್ರ ಸ್ಥಾಪಿಸಲಾಗುವುದು. ಮಂಗಳೂರಿನಲ್ಲೂ ಜಾಗ ನೋಡಿದ್ದೇವೆ. ಇದರ ಜವಾಬ್ದಾರಿಯನ್ನು ಸೇವಾದಳದವರಿಗೂ ವಹಿಸಲಾಗುವುದು" ಎಂದರು.



"ಸೇವಾದಳದವರು ಒಂದು ತಂಡ ರಚನೆ ಮಾಡಿ ಪ್ರತಿ ಜಿಲ್ಲೆಗೆ ಹೋಗಿ ಅಲ್ಲಿ ಸೇವಾದಳ ಹೊರತಾದ ಕಾಂಗ್ರೆಸ್ ಕಾರ್ಯಕರ್ತರಿಗೆ ಪಕ್ಷದ ಧ್ವಜಾರೋಹಣ, ರಾಷ್ಟ್ರಗೀತೆ, ವಂದೇ ಮಾತರಂ ಗೀತೆ ಗಾಯನ ಸೇರಿದಂತೆ ಇತರೆ ಅಂಶಗಳ ತರಬೇತಿ ನೀಡಬೇಕು ಎಂದು ಸೇವಾದಳದ ಅಧ್ಯಕ್ಷರಾದ ರಾಮಚಂದ್ರಪ್ಪ ಅವರಿಗೆ ಸೂಚಿಸುತ್ತೇನೆ. ಈ ರೀತಿ ಮಾಡಿದಾಗ ಬೇರೆ ಕಾರ್ಯಕರ್ತರು ಸೇವಾದಳದ ಜತೆ ಬೆರೆಯುತ್ತಾರೆ" ಎಂದು ಸಲಹೆ ನೀಡಿದರು.



ಬೆಂಗಳೂರಿನ ವಿಧಾನಸೌಧದಲ್ಲಿ ಸೋಮವಾರದ ಅಂಬೇಡ್ಕರ್ ಜಯಂತಿ ಆಚರಣೆಗೆ ಸಿದ್ಧತೆ.

## ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕನ್ನಡದಲ್ಲಿ ಮಾತ್ರವೇ ವಿಮಾನ ಆಗಮನ, ನಿರ್ಗಮನ ಸಾಮಾಜಿಕ ಮಾಧ್ಯಮಗಳಲ್ಲಿ ಬಿಸಿ ಚರ್ಚೆ

**ಬೆಂಗಳೂರು, ಏ.13–** ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿನ ಪ್ರದರ್ಶನ ಬೋರ್ಡ್‌ನಲ್ಲಿ ಹಿಂದಿಯನ್ನು ತೆಗೆದು ಹಾಕಲಾಗಿದೆ. ಕೇವಲ ಇಂಗ್ಲೀಷ್ ಹಾಗೂ ಕನ್ನಡದಲ್ಲಿ ಮಾತ್ರವೇ ವಿಮಾನ ಆಗಮನ, ನಿರ್ಗಮನ ಸೇರಿದಂತೆ ಇತರೆ ಮಾಹಿತಿ ಡಿಸ್ ಪ್ಲೇ ಮಾಡಲಾಗುತ್ತಿದೆ.

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಡಿಸ್‌ಪ್ಲೇ ಬೋರ್ಡ್‌ಗಳಿಂದ ಹಿಂದಿಯನ್ನು ತೆಗೆದುಹಾಕಲಾಗಿದೆ. ಈಗ, ವಿಮಾನ ನಿಲ್ದಾಣದ ಎಲ್ಲಾ ಬೋರ್ಡ್‌ಗಳು ಕನ್ನಡ ಮತ್ತು ಇಂಗ್ಲಿಷ್ ಅನ್ನು ಮಾತ್ರ ಪ್ರದರ್ಶಿಸುತ್ತವೆ. ಈ ನಿರ್ಧಾರವು ಸಾಮಾಜಿಕ ಮಾಧ್ಯಮಗಳಲ್ಲಿ ಬಿಸಿ ಚರ್ಚೆಯನ್ನು ಹುಟ್ಟುಹಾಕಿದೆ.

ಜನರು ವಿಭಿನ್ನ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ಎಕ್ಸ್‌ನಲ್ಲಿ ಹಂಚಿಕೊಳ್ಳಲಾದ ವೀಡಿಯೊದಲ್ಲಿ ವಿಮಾನ ನಿಲ್ದಾಣದ ಪ್ರದರ್ಶನ ಫಲಕವು ಕನ್ನಡ, ಇಂಗ್ಲಿಷ್ ಮತ್ತು ಉರ್ದುವಿನಲ್ಲಿ ಮಾಹಿತಿಯನ್ನು ಘೋಷಿಸುತ್ತದೆ. ಆದರೆ ಹಿಂದಿಯಲ್ಲಿಲ್ಲ. ಈ ವೀಡಿಯೊ 2 ದಶಲಕ್ಷಕ್ಕೂ ಹೆಚ್ಚು ವೀಕ್ಷಣೆಗಳನ್ನು ಮತ್ತು ಹಲವಾರು ಶೇರ್ ಆಗಿದೆ. ಇದು ಭಾಷಾ ಸಮಸ್ಯೆಯ ಬಗ್ಗೆ ನೆಟ್ಟಿಗರಲ್ಲಿ ಚರ್ಚೆಯನ್ನು ಹುಟ್ಟುಹಾಕಿದೆ. ಕೆಲವರು ಈ ನಿರ್ಧಾರವನ್ನು "ಮೂರ್ಖತನ" ಎಂದು ಟೀಕಿಸಿದರೆ, ಇತರರು ಇಂಗ್ಲಿಷ್ ಅನ್ನು ಉಳಿಸಿಕೊಂಡು ಹಿಂದಿಯನ್ನು ತೆಗೆದುಹಾಕುವ ದ್ವಂದ್ವ ಮಾನದಂಡಗಳನ್ನು ಎತ್ತಿತೋರಿಸಿದ್ದಾರೆ ಎಂದಿದ್ದಾರೆ. ಕನ್ನಡ ಅಥವಾ ಇಂಗ್ಲಿಷ್ ಗೊತ್ತಿಲ್ಲದ ಜನರು ಮತ್ತು ಅವರು ವಿಮಾನ ನಿಲ್ದಾಣವನ್ನು ಹೇಗೆ ನ್ಯಾವಿಗೇಟ್ ಮಾಡುತ್ತಾರೆ ಎಂಬ ಬಗ್ಗೆಯೂ ಕಳವಳ ವ್ಯಕ್ತಪಡಿಸಲಾಯಿತು.



ಇಂಗ್ಲಿಷ್ ಮತ್ತು ಕನ್ನಡ ತಿಳಿದಿರುವವರು ಮಾತ್ರ ಬೆಂಗಳೂರಿಗೆ ಬರುತ್ತಾರೆ ಎಂದು ನೀವು ಭಾವಿಸುತ್ತೀರಾ. ಮೆಟ್ರೋ ನಿಲ್ದಾಣಗಳಲ್ಲಿ ಹಿಂದಿ ಇರಬಾರದು ಎಂಬುದು ಅರ್ಥವಾಗಬಹುದಾದರೂ, ಖಂಡಿತವಾಗಿಯೂ ವಿಮಾನ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣಗಳಲ್ಲಿ ಇರಬೇಕು ಎಂದು ಅವರು ಹೇಳಿದರು.

# ಜಾತಿಗಣತಿ ವರದಿ ಸಿದ್ದರಾಮಯ್ಯಗೆ ಮರಣ ಶಾಸನ; ತಿರಸ್ಕರಿಸಲು ವಿ.ಸೋಮಣ್ಣ ಆಗ್ರಹ

**ಬೆಂಗಳೂರು, ಏ.13–** ಜಾತಿ ಜನಗಣತಿ ವರದಿ ಸಿದ್ದರಾಮಯ್ಯಗೆ ಮರಣ ಶಾಸನವಾಗಬಹುದು. ಹಾಗಾಗಿ, ವರದಿ ತಿರಸ್ಕರಿಸಲಿ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಆಗ್ರಹಿಸಿದರು.

ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಸಿದ್ದರಾಮಯ್ಯರಿಗೆ ಪೂರ್ಣ ಸತ್ಯ ಗೊತ್ತಿದೆ. ಆದ್ರೆ ಅವರು ಕುರ್ಚಿ ಉಳಿಸಿಕೊಳ್ಳಲು ವರದಿ ಜಾರಿಗೆ ಮುಂದಾಗಿದ್ದಾರೆ. ಮೊನ್ನೆ ಮೊನ್ನೆ ಅವರ ಹೈಕಮಾಂಡ್ ನಾಯಕರೇ ಕರೆದು ಹೇಳಿದ್ದಾರೆ. ಸಿದ್ದರಾಮಯ್ಯರ ಇವತ್ತಿನ ಪರಿಸ್ಥಿತಿ ನೋಡಿದರೆ, ಈ ಮಟ್ಟಕ್ಕೂ ಅವರು ಬಂದಿದ್ದಾರಾ? ಅನ್ನೋ ನೋವು ನನ್ನನ್ನು ಕಾಡುತ್ತಿದೆ. ಜಾತಿ ಜನಗಣತಿ ವರದಿ ಕಾಗಕ್ಕ ಗೂಬಕ್ಕ ಕತೆಯಂತಿದೆ. ಅವರ ಪಕ್ಷದವರೇ ಅವರನ್ನು ರಾಜಕೀಯವಾಗಿ ಕಾಲೆಳೆಯಲು ಈ ಪಿತೂರಿ ಮಾಡ್ತಿದ್ದಾರೆ. ಜಾತಿ ವರದಿ ಜಾರಿಯಾದರೆ ಸಿದ್ದರಾಮಯ್ಯ ರಾಜ್ಯ ರಾಜಕೀಯ ಇತಿಹಾಸದಲ್ಲೊಬ್ಬ ಖಳನಾಯಕ ಆಗ್ತಾರೆ ಎಂದರು.

ಮತ್ತೊಂದು ಸಮೀಕ್ಷೆ ಮಾಡಿ. ಇನ್ನೂ ಮೂರು ವರ್ಷ ಸಮಯ ಇದೆ ಸಿದ್ದರಾಮಯ್ಯಗೆ. ಈ ಸಮೀಕ್ಷೆ ವೈಜ್ಞಾನಿಕವಾಗಿ ನಡೆದಿಲ್ಲ. ಪಾರದರ್ಶಕವಾಗಿಯೂ ಇಲ್ಲ. ವರದಿ ಜಾರಿಯಾದರೆ ಸಾಮಾನ್ಯ ಜನರೂ ಸಿದ್ದ ರಾಮಯ್ಯಗೆ ಶಾಪ ಹಾಕ್ತಾರೆ. ಅವರು ಒಂಟಿಯಾಗಿ ಹೋಗ್ತಾರೆ ಎಂದು ತಿಳಿಸಿದರು. ಯತ್ನಾಳ್ ಘರ್ ವಾಪಸಿ ಬಗ್ಗೆ ಕೆಲವರ ಒಲವು ವಿಚಾರವಾಗಿ ಮಾತನಾಡಿ, ಸಮಯ ಎಲ್ಲಕ್ಕೂ ಕೂಡಿ ಬರುತ್ತೆ. ಒಳ್ಳೆಯವರಿಗೆ ಒಳ್ಳೆ ಕಾಲ ಬರುತ್ತೆ. ಬಹಿರಂಗವಾಗಿ ಮಾತಾಡೋದನ್ನು ನಿಲ್ಲಿಸಿದ್ದರೆ ಅವರಿಗೂ ಕ್ಷೇಮ, ನಮಗೂ ಕ್ಷೇಮ ಎಂದು ಸೂಚ್ಯವಾಗಿ ತಿಳಿಸಿದರು.

ಜನಾಕ್ರೋಶ ಯಾತ್ರೆಯಲ್ಲಿ ಸೋಮಣ್ಣ ಭಾಗವಹಿಸದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಅದೆಲ್ಲ ದಿನಬೆಳಗಾದರೆ ನಡೆಯುತ್ತಿರುತ್ತದೆ. ನಾವು ಮಾಡ್ತಿರೋದೂ ಜನಾಕ್ರೋಶವೇ. ಪಕ್ಷದಿಂದ ಹೋರಾಟ ಮಾಡ್ತಿದ್ದಾರೆ. ನಮಗೆ ವ್ಯವಸ್ಥಿತವಾಗಿ ಇಲಾಖೆಯ ಕೆಲಸ ಹಂಚಿದ್ದಾರೆ, ಮಾಡುತ್ತಿದ್ದೇವೆ. ಅವಶ್ಯಕತೆ ಇದ್ದರೆ ನಾವೆಲ್ಲ ಒಟ್ಟಿಗೆ ಕೆಲಸ ಮಾಡ್ತೇವೆ. ಪಕ್ಷವೇ ನಮಗೆ ದೊಡ್ಡದು. ತಾಯಿಯಂತೆ. ಪಕ್ಷಕ್ಕೆ ಯಾವತ್ತೂ ಸೋಮಣ್ಣರಿಂದ ಅಪಚಾರ ಆಗಲ್ಲ ಎಂದರು.



ತುಮಕೂರು ರೈಲ್ವೆ ನಿಲ್ದಾಣಕ್ಕೆ ಡಾ.ಶಿವ ಕುಮಾರ ಸ್ವಾಮೀಜಿ ಹೆಸರು ನಾಮಕರಣದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ತುಮಕೂರು ರೈಲ್ವೆ ನಿಲ್ದಾಣಕ್ಕೆ ಸ್ವಾಮೀಜಿಗಳ ಹೆಸರಿಡಬೇಕೆಂದು ಕೇಂದ್ರಕ್ಕೆ ಪತ್ರ ಬರೆದಿದ್ದೆವು. ಕೇಂದ್ರದಿಂದ ರಾಜ್ಯಕ್ಕೆ ಮಾಹಿತಿ ಕೋರಿ ಪತ್ರ ಬರೆಯಲಾಗಿತ್ತು. ಎಂಟು ತಿಂಗಳಾದ ಮೇಲೆ ಈಗ ರಾಜ್ಯ ಸರ್ಕಾರ ಶಿಫಾರಸು ಕಳಿಸಿದೆ. ರಾಜ್ಯ ಸರ್ಕಾರ ಬಹಳ ವಿಳಂಬ ಮಾಡಿ ಈಗಲಾದರೂ ಪ್ರಸ್ತಾವನೆ ಕಳಿಸಲಾಗಿದೆ. ಸಂತೋಷ. ಶೀಘ್ರದಲ್ಲೇ ಕೇಂದ್ರದಿಂದ ಒಪ್ಪಿಗೆ ಸಿಗಲಿದೆ ಎಂದು ಹೇಳಿದರು.

## ಡೀಸೆಲ್ ದರ, ಟೋಲ್ ಶುಲ್ಕ ಹೆಚ್ಚಳ ವಿರೋಧಿಸಿ, ಪರಿಷ್ಕರಣೆ ಮಾಡಲು ಆಗ್ರಹಿಸಿ

# ಇಂದು ಮಧ್ಯರಾತ್ರಿಯಿಂದಲೇ ಮುಷ್ಕರಕ್ಕೆ ರಾಜ್ಯ ಲಾರಿ ಮಾಲೀಕರ ಸಂಘ ಸಜ್ಜು

**ಬೆಂಗಳೂರು, ಏ.13–** ಡೀಸೆಲ್ ದರ ಹಾಗೂ ಟೋಲ್ ಶುಲ್ಕ ಹೆಚ್ಚಳ ವಿರೋಧಿಸಿ, ಪರಿಷ್ಕರಣೆ ಮಾಡುವಂತೆ ಆಗ್ರಹಿಸಿ ಏ.14 ಅಂದರೆ ನಾಳೆ ಮಧ್ಯರಾತ್ರಿಯಿಂದಲೇ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ರಾಜ್ಯ ಲಾರಿ ಮಾಲೀಕರ ಸಂಘ ಸಜ್ಜಾಗಿದೆ.

ಈ ಕುರಿತು ಜಿ.ಆರ್. ಷಣ್ಮುಖಪ್ಪ ಮಾತನಾಡಿ, ಏ.14 ರಿಂದ ಅನಿರ್ದಿಷ್ಟಾವಧಿ ಲಾರಿ ಮುಷ್ಕರಕ್ಕೆ ಈಗಾಗಲೇ ಕರೆ ನೀಡಲಾಗಿದೆ. ಹೊರ ರಾಜ್ಯಗಳ ಲಾರಿ ಮಾಲೀಕರು ಸೇರಿದಂತೆ ರಾಜ್ಯವ್ಯಾಪಿ ಬೆಂಬಲಿಸಿದ್ದಾರೆ. ಯಾವುದೇ ಕಾರಣಕ್ಕೂ ಮುಷ್ಕರ ಹಿಂಪಡೆಯುವುದಿಲ್ಲ. ಕೆಲ ಬಣದ ನಾಯಕರು ಸರ್ಕಾರ ದೊಟ್ಟಿಗೆ ಕೈಜೋಡಿಸಿದ್ದು ವಿರೋಧ ಮಾಡುತ್ತಿದ್ದಾರೆ.



ಈಗಾಗಲೇ ಹಲವು ಪೆಟ್ರೋಲ್ ಬಂಕ್ ಸಂಘಟನೆಗಳು ಸೇರಿದಂತೆ ರಾಜ್ಯವ್ಯಾಪಿ ಮುಷ್ಕರಕ್ಕೆ ಬೆಂಬಲ ಸೂಚಿಸಿವೆ. ಹಾಗಾಗಿ ಮುಷ್ಕರ ನಡೆಸುವುದು ನಿಶ್ಚಿತ ಎಂದು ಹೇಳಿದರು.ಅಲ್ಲದೇ ನಾಳೆಯಿಂದ ರಾಜ್ಯದಲ್ಲಿ 6 ಲಕ್ಷಕ್ಕೂ ಹೆಚ್ಚು ಲಾರಿಗಳಿದ್ದು ಮುಷ್ಕರಕ್ಕೆ ಬೆಂಬಲಿಸುವ ಮೂಲಕ ಸಂಚಾರವನ್ನು ಸ್ಥಗಿತಗೊಳಿಸಲಿವೆ. ಹೊರರಾಜ್ಯಗಳಿಂದಲೂ ಲಾರಿಗಳು ಬರಲು ಬಿಡುವುದಿಲ್ಲ ಅಂದು ವಾಣಿಜ್ಯ ಸೇರಿದಂತೆ ಎಲ್ಲ ಮಾದರಿಯ ಸರಕು ಸೇವೆಗಳು ಸ್ತಬ್ಧಗೊಳ್ಳಲಿವೆ ಎಂದರು.

## ಜಾತಿಗಣತಿ ವರದಿ ಬಿಡುಗಡೆ ರಾಜ್ಯ ಸರ್ಕಾರದ ತೀರ್ಮಾನ

# ಹಳೆಯ ಜಾತಿಗಣತಿ ವರದಿ ಜಾರಿಗೆ ರವಿಕುಮಾರ್ ವಿರೋಧ

**ಬೆಂಗಳೂರು, ಏ.13–** ಹತ್ತು ವರ್ಷಗಳಷ್ಟು ಹಳೆಯದಾದ ಕರ್ನಾಟಕ ಜಾತಿ ಗಣತಿ ವರದಿ ಜಾರಿಗೆ ವಿರೋಧ ಕೇಳಿ ಬರುತ್ತಿದೆ. ಶತಾಯಗತಾಯ ಒತ್ತಡ, ಚರ್ಚೆ ಬಳಿಕ ಸಿಎಂ ಸಿದ್ದರಾಮಯ್ಯ ನೇತತ್ವದ ರಾಜ್ಯ ಸರ್ಕಾರ ಜಾತಿ ಗಣತಿ ವರದಿ ಬಿಡುಗಡೆ ತೀರ್ಮಾನಿಸಿದೆ.

ಈ ಸಂಬಂಧ ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿದ್ದು, ಏಪ್ರಿಲ್ 17ರಂದು ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದೆ. ಈ ಮಧ್ಯೆ ವರದಿಯನ್ನು ನಾವು ಒಪ್ಪಲ್ಲ ಎಲ್ಲಾ ಪಕ್ಷಗಳ ನಾಯಕರ ಜೊತೆಗೆ ಚರ್ಚೆ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಒತ್ತಾಯಿಸಿದ್ದಾರೆ. ಭಾನುವಾರ ನಗರದಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಜಾತಿ ಗಣತಿಯನ್ನು ಕರ್ನಾಟಕ ವೀರಶೈವ ಮಹಾಸಭಾ ವಿರೋಧಿಸಿದೆ. ವರದಿ ಸತ್ಯಾಸತ್ಯತೆಗೆ ನಿವೃತ್ತ ಐಎಎಸ್ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆಗೆ ಚಿಂತಿಸಿದೆ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಇದೊಂದು ಹಳೆ ಜಾತಿ ಗಣತಿ ವರದಿ. ದಶಕದ ಬಳಿಕ ಇದನ್ನು ಈಗ ಜಾರಿ ಮಾಡುವುದು ಸರಿಯಾಗಿ ಕ್ರಮವಲ್ಲ.ಯಾವುದೇ ರೀತಿಯ ಸರಿಯಾಗಿ ಜಾತಿ ಗಣತಿ ಮಾಡಿಲ್ಲ. ಒಂದು ಕಡೆ ಲಿಂಗಾಯತರು, ಇನ್ನೊಂದು ಕಡೆ ಒಕ್ಕಲಿಗರು ಇದಕ್ಕೆ ವಿರೋಧ ಮಾಡಿದ್ದಾರೆ ಎಂದು ತಿಳಿಸಿದರು. ವ್ಯಾಪಕ ವಿರೋಧದ ನಡುವೆಯು ಜಾತಿ ಗಣಿತಿ ಜಾರಿಗೊಳಿಸುವ ಮೊದಲು ಎಲ್ಲ ಪಕ್ಷಗಳ ಸಭೆ ಮಾಡಬೇಕು. ಎಲ್ಲ ಸಲಹೆಗಳನ್ನು ಪಡೆಯಬೇಕು. ಅದರ ಹೊರತಾಗಿ ಜಾರಿಗೆ ಮುಂದಾಗುವುದನ್ನು ಬಿಡಬೇಕು. ಇದಕ್ಕೆ ಬಿಜೆಪಿಗೆ ಸಹ ಮತ ಇಲ್ಲ ಎಂದು ತಿಳಿಸಿದರು. ಈ ಸಂಬಂಧ ನಿವೃತ್ತ ಐಎಎಸ್ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಚಿಂತನೆ ಇದೆ ಎಂದು ಅವರು ಹೇಳಿದರು.



ಕೇಂದ್ರ ಸರ್ಕಾರವು ಕಚ್ಚಾತೈಲ, ಸಿಲಿಂಡರ್, ಪೆಟ್ರೋಲ್ ಬೆಲೆ ಏರಿಕೆ ಮಾಡಿದೆ ಎಂದು ಕಾಂಗ್ರೆಸ್ ನವರ ಆರೋಪವಾಗಿದೆ. ಹಾಗಾದರೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಏನು ಮಾಡಿದೆ? ಅದು ಎಲ್ಲರಿಗೂ ಗೊತ್ತಿದೆ. ಬೆಲೆ ಏರಿಕೆಯಿಂದ ಜನಸಾಮಾನ್ಯರ ತತ್ತವರಿಸುವಂತೆ ಮಾಡಿದೆ. ರಾಜ್ಯದಲ್ಲಿ ಒಟ್ಟು 48 ವಸ್ತುಗಳ ಹಾಗೂ ಯೋಜನೆ ಮೇಲೆ ದರ ಹೆಚ್ಚಳ ಮಾಡಲಾಗಿದೆ. ನೀರು, ಹಾಲು, ವಿದ್ಯುತ್, ರೈತರ ಟಿಸಿ ಕಸದ ಮೇಲೋ ಸಹ ಏರಿಕೆ ಮಾಡಲಾಗಿದೆ. ಪಹಣಿ, ಜನನ ಮರಣ ಪತ್ರಗಳ ಮೇಲೆ ಸಹ ದರ ಏರಿಕೆ ಮಾಡಲಾಗಿದೆ ಎಂದು ಅವರು ಆಕ್ರೋಶ ಹೊರ ಹಾಕಿದರು.ಬಿಜೆಪಿಯ ಜನಾಕ್ರೋಶ ಯಾತ್ರೆಗೆ ವಿರೋಧಿರುವ ಕಾಂಗ್ರೆಸ್ ಸಹ ಕೇಂದ್ರ ಹೆಚ್ಚಿಸಿದ ಬೆಲೆ ಏರಿಕೆ ವಿರುದ್ಧ, ರಾಜ್ಯಕ್ಕೆ ಆದ ಅನ್ಯಾಯದ ವಿರುದ್ಧ ತಾವು ಜನಾಕ್ರೋಶ ಯಾತ್ರೆ ಮಾಡುವುದಾಗಿ ತಿಳಿಸಿದ್ದಾರೆ. ಈ ಪ್ರಶ್ನೆಗೆ ಉತ್ತರಿಸಿದ ಅವರು, ಕಾಂಗ್ರೆಸ್ ನವರು ಜನಾಕ್ರೋಶ ಯಾತ್ರೆ ಮಾಡಲಿ? ನಾವು ಸಹ ಜನರ ಮುಂದೆ ಹೋಗುತ್ತವೆ ಕಾಂಗ್ರೆಸ್‌ನವರು ಬರಲಿ. ಯಾರ ಕಾಲದಲ್ಲಿ ಎಷ್ಟು ಬೆಲೆ ಏರಿಕೆ ಆಗಿದೆ ಎಂದು ಜನರ ಮುಂದೆ ತೆರೆದಿಡೋಣ. ಯಾರ ಆಡಳಿತದಲ್ಲಿ ದುರಾಡಳಿತ ಆಗಿದೆ ಇದು ಚರ್ಚೆ ಆಗಲಿಲ್ಲ. ಜನರ ಮುಂದೆ ಬರಲಿ ಜನರಿಗೆ ನಾವು ಹೇಳುತ್ತೇವೆ ಎಂದು ಸವಾಲೆಸೆದರು.

# ಬಾಕಿ ಹಣ ಬಿಡುಗಡೆಗೆ ಮಲ್ಲಿಕಾರ್ಜುನ ಒತ್ತಾಯ

**ಬೆಂಗಳೂರು, ಏ.13–** ನೀರಾವರಿ ಇಲಾಖೆಯಲ್ಲಿ ಶೇ. 10 ರಿಂದ 12 ರಷ್ಟು ಕಮೀಷನ್ ಕೇಳುತ್ತಾರೆ. ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ 8 ರಿಂದ 10ರಷ್ಟು ಕಮೀಷನ್ ನಿಗದಿ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಹಾವೇರಿ ಜಿಲ್ಲೆಯಲ್ಲಿ ಬಾಕಿ ಹಣ ಬಿಡುಗಡೆಗೆ ಈಗಾಗಲೇ ಕಮೀಷನ್ ಪಾವತಿ ಮಾಡಲಾಗಿದೆ. ಸರ್ಕಾರ ಕೂಡಲೇ ಗುತ್ತಿಗೆದಾರರಿಗೆ ಬಾಕಿ ಹಣವನ್ನು ಬಿಡುಗಡೆ ಮಾಡಬೇಕು ಎಂದು ಹಾವೇರಿ ಜಿಲ್ಲಾ ಗುತ್ತಿಗೆದಾರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಒತ್ತಾಯಿಸಿದರು.

ಈ ಕುರಿತು ಸರ್ಕಾರದ ವಿರುದ್ಧ ಹಾವೇರಿ ಜಿಲ್ಲಾ ಗುತ್ತಿಗೆದಾರರ ಸಂಘ ಆರೋಪ ಮಾಡುತ್ತಿದ್ದು, ಮುಂಗಡವಾಗಿ ಕಮಿಷನ್ ನೀಡಿದರು ಬಾಕಿ ಹಣ ಪಾವತಿ ಮಾಡಿಲ್ಲ ಬಾಕಿ ಬಿಲ್ ನೀಡುವ ಬಗ್ಗೆ ಸಿವಿಲ್ ಗುತ್ತಿಗೆದಾರರಿಗೆ ಅನ್ಯಾಯವಾಗಿದೆ. ಮಾರ್ಚ್ ಅಂತ್ಯದಲ್ಲಿ ಪಿಡಬ್ಲ್ಯೂಡಿ ಇಂದ ಅನುದಾನ ಬಿಡುಗಡೆ ಆಗಿದೆ. ಆದರೆ ಉಳಿದ ಇಲಾಖೆಗಳಲ್ಲಿ ಗುತ್ತಿಗೆದಾರರಿಗೆ ಬಹಳ ಸಮಸ್ಯೆಯಾಗಿದೆ. ಮಾರ್ಚ್ ತಿಂಗಳಲ್ಲಿ ಸಣ್ಣ ಗುತ್ತಿಗೆದಾರರಿಗೆ ಬಾಕಿ ಹಣ ಬಂದಿದೆ. ಇನ್ನು ಎರಡು ಕೋಟಿಯಿಂದ 5 ಕೋಟಿ ರೂಪಾಯಿ ಬಾಕಿ ಬಿಲ್ ಬರಬೇಕಿದೆ ಎಂದು ಹಾವೇರಿ ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಹೇಳಿಕೆ ನೀಡಿದರು. ಆರ್‌ಡಿಪಿಆರ್‌ನಲ್ಲಿ 4 ವರ್ಷದ ಬಾಕಿ ಬಿಲ್ ಪೆಂಡಿಂಗ್ ಇದೆ ಗುತ್ತಿಗೆದಾರರು ಸಾಲಕ್ಕೆ ಬಡ್ಡಿ ಕಟ್ಟುವುದರಲ್ಲಿ ಸತ್ತು ಹೋಗಿದ್ದಾರೆ.



ಸಿಎಸ್‌ಪಿ/ ಟಿಎಸ್‌ಪಿ ಗುತ್ತಿಗೆದಾರರ ಬಗ್ಗೆ ಪಾವತಿಗೆ ಮನವಿ ಮಾಡಿದ್ದಾರೆ. ಬಿಲ್ ಕ್ಲಿಯರ್ ಮಾಡುವಂತೆ ಪಿಡಬ್ಲ್ಯೂಡಿ ಸಚಿವರಿಗೆ ಮನವಿ ಮಾಡುತ್ತೇವೆ ಎಂದು ಹಾವೇರಿ ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಹೇಳಿಕೆ ನೀಡಿದರು.

## ನಗರಾಭಿವೃದ್ಧಿ ಇಲಾಖೆಯಲ್ಲಿ ರೂ.2000 ಕೋಟಿ ಭ್ರಷ್ಟಾಚಾರ: ಮುನಿರತ್ನ ಗಂಭೀರ ಆರೋಪ, ರಾಜ್ಯಪಾಲರಿಗೆ ದಾಖಲೆಗಳ ಸಲ್ಲಿಕೆ



**ಬೆಂಗಳೂರು, ಏ.13–** ಬೆಂಗಳೂರು ನಗರಾಭಿವೃದ್ಧಿ ಇಲಾಖೆಯಲ್ಲಿ ರೂ.2000 ಕೋಟಿ ಭ್ರಷ್ಟಾಚಾರವಾಗಿದೆ ಎಂದು ಆರ್.ಆರ್.ನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಗಂಭೀರ ಆರೋಪ ಮಾಡಿದ್ದಾರೆ. ಬೆಂಗಳೂರು ಅಭಿವೃದ್ಧಿ ಸಚಿವರು ಆಗಿರುವ ಡಿಸಿಎಂ ಡಿ. ಕೆ.ಶಿವಕುಮಾರ್ ಅವರ ವಿರುದ್ಧ ಲೋಕಾಯುಕ್ತ, ಸಿಬಿಐ, ಇಡಿಗೆ ಈ ಸಂಬಂಧ ಕಳೆದ ಫೆಬ್ರವರಿಯಲ್ಲಿ ದೂರು ನೀಡಿದ್ದರು.ಇದೀಗ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರಿಗೆ ಭೇಟಿ ಮಾಡಿ, ಡಿಕೆಶಿ ವಿರುದ್ಧ ದೂರು ನೀಡಿದ್ದಾರೆಂದು ತಿಳಿದು ಬಂದಿದೆ. ರಾಜಕಾಲುವೆ ಕಾಮಗಾರಿಗೆ ಎರಡು ಸಾವಿರ ಕೋಟಿ ರೂಪಾಯಿ ಸಾಲದ ವಿಚಾರದಲ್ಲಿ ಅಕ್ರಮವಾಗಿದೆ ಎಂದು ಆರೋಪಿಸಿ ಕೆಲ ದಾಖಲೆಗಳೊಂದಿಗೆ ಮುನಿರತ್ನ ರಾಜ್ಯಪಾಲರಿಗೆ ಭೇಟಿ ಮಾಡಿದ್ದಾರೆ. ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಡಿಕೆಶಿ ಬೇಡ, ಅವರನ್ನು ಬದಲಿಸುವಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಈ ಮೊದಲು ಪತ್ರ ಬರೆದಿದ್ದ ಮುನಿರತ್ನ, ಡಿಕೆಶಿ ಹೆಸರು ಉಲ್ಲೇಖಿಸದೇ ಪತ್ರ ಬರೆದು ಬೆಂಗಳೂರು ಕ್ಷೇತ್ರಗಳ ಅನುದಾನ ಕಬಳಿಸಲು ಆಂಧ್ರದ ಗುತ್ತಿಗೆದಾರರ ಜೊತೆ ಡಿಕೆಶಿ ಒಪ್ಪಂದ ಮಾಡಿಕೊಂಡಿದ್ದಾರೆ. 38% ಕಮಿಷನ್ ಪಡೆದು ಕಾಮಗಾರಿಗಳನ್ನು ಕೊಡುವ ಬಗ್ಗೆ ಖಾಸಗಿ ಹೋಟೆಲುಗಳಲ್ಲಿ ಆಂಧ್ರ ಸಿಎಂ ಸಹಚರರಾಗಿರುವ ಗುತ್ತಿಗೆದಾರರ ಜೊತೆ ರಹಸ್ಯ ಒಪ್ಪಂದವಾಗಿದೆ ಎಂದು ಆಪಾದಿಸಿದ್ದರು.

# 75 ಕೋಟಿ ಮೊತ್ತ ವೈಬ್ರೆಂಟ್ ಬೆಂಗಳೂರು ಯೋಜನೆಗೆ ಮೀಸಲು

**ಬೆಂಗಳೂರು, ಏ.13–** ರಾಜಧಾನಿ ಬೆಂಗಳೂರನ್ನು ವಿಶ್ವದರ್ಜೆಯ ನಗರವನ್ನಾಗಿಸಲು ಬಿಬಿಎಂಪಿ ವೈಬ್ರೆಂಟ್ ಬೆಂಗಳೂರು ಯೋಜನೆಯಡಿ ಹೊಸ ಕ್ರಮಕ್ಕೆ ಮುಂದಾಗಿದೆ.

ಎಲ್ಲಾ ಮೆಟ್ರೋ ಪಿಲ್ಲರ್‌ಗಳಿಗೂ ಎಲ್‌ಇಡಿ ದೀಪಾಲಂಕಾರ, ಅಲ್ಲಲ್ಲಿ ಕಾರಂಜಿಗಳು ಹಾಗೂ ಗೋಡೆಗಳನ್ನು ಚಿತ್ರಗಳಿಂದ ಶೃಂಗರಿಸಲು ಕೋಟಿ ಕೋಟಿ ರೂ.ವೆಚ್ಚ ಮಾಡಲು ಮುಂದಾಗಿದೆ. ಆದರೆ ಇದಕ್ಕೂ ಮುನ್ನ ಬೆಂಗಳೂರಿನ ರಸ್ತೆಗುಂಡಿಗಳನ್ನು ಸರಿಪಡಿಸಿ ಜನರ ಜೀವ ಉಳಿಸಿ ಎಂದು ಸಾರ್ವಜನಿಕರು ಕಿಡಿಕಾರಿದ್ದಾರೆ.



ಬಿಬಿಎಂಪಿ ತನ್ನ ಬಜೆಟ್‌ನಲ್ಲಿ 75 ಕೋಟಿ ರೂ. ಹಣವನ್ನು ವೈಬ್ರೆಂಟ್ ಬೆಂಗಳೂರು ಯೋಜನೆಗೆ ಮೀಸಲಾಗಿರಿಸಿದೆ. ಇದರಲ್ಲಿ ಮೆಟ್ರೋ ಪಿಲ್ಲರ್ ಗಳಿಗೆ ವಿದ್ಯುತ್ ದೀಪಾಲಂಕಾರಕ್ಕಾಗಿ 50 ಕೋಟಿ ರೂ. ಹಾಗೂ ಟ್ರಾಫಿಕ್ ಸರ್ಕಲ್ ಗಳಲ್ಲಿ ಕಾರಂಜಿ, ಹೂವಿನ ಗಿಡ ಮುಂತಾದವುಗಳಿಗಾಗಿ 25 ಕೋಟಿ ರೂ. ಮೀಸಲಾಗಿರಿಸಲಾಗಿದೆ. ಆದರೆ ಬೆಂಗಳೂರಿಗರ ಮೂಲ ಭೂತ ಸಮಸ್ಯೆಗಳಾದ ಟ್ರಾಫಿಕ್ ಸಮಸ್ಯೆ, ಕಸದ ಸಮಸ್ಯೆ, ಮಾಲಿನ್ಯದ ಸಮಸ್ಯೆ, ರಾಜಕಾಲುವೆ ಒತ್ತುವರಿ, ರಸ್ತೆಗುಂಡಿ ಸಮಸ್ಯೆಗಳ ಬಗ್ಗೆ ಇದುವರೆಗೂ ಶಾಶ್ವತ ಪರಿಹಾರ ಕಂಡುಕೊಳ್ಳಲು ಬಿಬಿಎಂಪಿಗೆ ಸಾಧ್ಯವಾಗಿಲ್ಲ.

# ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆ

**ಬೆಂಗಳೂರು, ಏ.13–** ಬೆಂಗಳೂರು, ಶಿವಮೊಗ್ಗ, ಕರಾವಳಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನ ಹಲವೆಡೆ ನಿನ್ನೆ ಮಳೆಯಾಗಿದೆ. ಬೆಂಗಳೂರಿನಲ್ಲಿ ಇಂದು ಕೂಡ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು,



ವಿಜಯಪುರ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು, ವಿಜಯಪುರದಲ್ಲಿ ಗುಡುಗು ಸಹಿತ ಮಳೆಯಾಗಲಿದೆ

# ಮಾದಕವಸ್ತು ಮಾರಾಟಕ್ಕೆ ಕೊರಿಯರ್ ಏಜೆನ್ಸಿಗಳೊಂದಿಗೆ ಶಾಮೀಲು

**ಬೆಂಗಳೂರು, ಏ.13–**ದಿನ ಕಳೆದಂತೆ ಮಾದಕ ವಸ್ತು ಮಾರಾಟ ಕಠಿಣವಾಗುತ್ತಿದ್ದಂತೆ, ಕಳ್ಳಸಾಗಣೆದಾರರು ಈಗ ಕೊರಿಯರ್ ಏಜೆನ್ಸಿಗಳೊಂದಿಗೆ ಶಾಮೀಲಾಗುತ್ತಿದ್ದಾರೆ. ವಿಶೇಷವಾಗಿ ಬೆಂಗಳೂರು ಮತ್ತು ಮಂಗಳೂರಿನಲ್ಲಿ ವಿಮಾನ ನಿಲ್ದಾಣಗಳಲ್ಲಿ ಎಲ್ಲಾ ಭದ್ರತಾ ತಪಾಸಣೆಗಳನ್ನು ತಪ್ಪಿಸಿ, ಮಾದಕ ವಸ್ತು ಸಾಗಣೆಗೆ ಕನಿಷ್ಠ 1 ಲಕ್ಷ ರೂ. ಪಾವತಿಸುತ್ತಿದ್ದಾರೆ. ತಮ್ಮ ಜಾಡುಗಳನ್ನು ಮರೆಮಾಡಲು, ಕಿಂಗ್‌ಪಿನ್‌ಗಳು ಮಾದಕ ವಸ್ತುಗಳೊಂದಿಗೆ ವಿಭಿನ್ನ "ಮಾನವ ಕೊರಿಯರ್‌ಗಳನ್ನು" ಕಳುಹಿಸುತ್ತಾರೆ, ಯಾರೂ ಅವರನ್ನು ಅನುಮಾನಿಸದಂತೆ ನೋಡಿಕೊಳ್ಳುತ್ತಾರೆ. ವಿಮಾನ ನಿಲ್ದಾಣದ ಭದ್ರತಾ ತಪಾಸಣೆಗಳು ಗುಪ್ತಚರವನ್ನು ಆಧರಿಸಿರುವುದರಿಂದ ಮತ್ತು ಕೊರಿಯರ್ ಸೇವೆಗಳು ಪತ್ತೆ ಹಚ್ಚುವಿಕೆಯನ್ನು ತಪ್ಪಿಸುವ ರೀತಿಯಲ್ಲಿ ಮಾದಕ ವಸ್ತುಗಳ ಪ್ಯಾಕೇಜಿಂಗ್‌ನ್ನು ಮಾಡಲಾಗುತ್ತಿರುವುದರಿಂದ ಈ ಯೋಜನೆ ಪರಿಣಾಮಕಾರಿಯಾಗಿದೆ ಎಂದು ಕೇಂದ್ರ ಅಪರಾಧ ಶಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೆಹಲಿಯಲ್ಲಿ ಹೆಚ್ಚಾಗಿ ಉತ್ಪಾದಿಸಲಾಗುವ ಮಾದಕ ವಸ್ತುವನ್ನು ವಿಮಾನ ನಿಲ್ದಾಣಗಳಲ್ಲಿ ಸುಗಮ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ಈ ಕೊರಿಯರ್ ಮಾರ್ಗಗಳ ಮೂಲಕ ಇತರ ನಗರಗಳಿಗೆ ಕಳ್ಳಸಾಗಣೆ ಮಾಡಲಾಗುತ್ತದೆ. ಹಿರಿಯ ಸಿಸಿಬಿ ಅಧಿಕಾರಿಯೊಬ್ಬರು, "ದಟ್ಟವಾದ ಜನನಿಬಿಡ ಮತ್ತು ಸ್ಥಳೀಯ ತನಿಖಾಧಿಕಾರಿಗಳಿಗೆ ಭೌಗೋಳಿಕವಾಗಿ ಪರಿಚಯವಿಲ್ಲದ ನಗರಗಳಿಂದ ಮಾದಕವಸ್ತುಗಳನ್ನು ಪಡೆಯಲಾಗುತ್ತದೆ, ಇದರಿಂದಾಗಿ ಅವುಗಳ ಮೂಲವನ್ನು ಪತ್ತೆಹಚ್ಚುವುದು ಕಷ್ಟವಾಗುತ್ತದೆ. ಅಂತಹ ನಗರಗಳು ದೂರದಲ್ಲಿವೆ ಮತ್ತು ಅಂತಿಮ ಬಿಂದುಗಳನ್ನು ತನಿಖೆ ಮಾಡುವ ತಂಡಗಳಿಗೆ ತಿಳಿದಿಲ್ಲ, ಇದು ಪೂರೈಕೆ ಸರಪಳಿಯನ್ನು ಪತ್ತೆಹಚ್ಚುವುದನ್ನು ಸವಾಲಿನ ಕೆಲಸವನ್ನಾಗಿ

# ರೈತರ ಜಮೀನಿನ ದಾರಿ ಸಮಸ್ಯೆಗೆ ಶಾಶ್ವತ ಪರಿಹಾರ: ಕಂದಾಯ ಸಚಿವರಿಗೆ ಮನವಿ



**ವಿಜಯಪುರ. ಏ.13–**ರೈತರ ಜಮೀನಿನ ಬಂಡಿದಾರಿ, ಕಾಲದಾರಿಯ ಕುರಿತು ಉತಾರೆಯ ನಕಾಶೆಯಲ್ಲಿ ಕಡ್ಡಾಯವಾಗಿ ಇನ್ನು ಮುಂದೆ ದಾರಿ ತೋರಿಸುವುದು ಹಾಗೂ ಯಾವುದೇ ರೈತರು ವಹಿವಾಟು ದಾರಿಯಲ್ಲಿ ಅಡತಡೆ ಉಂಟುಮಾಡಿದರೆ ಜಿಲ್ಲಾಧಿಕಾರಿ ಮತ್ತು ತಹಶಿಲ್ದಾರರಿಗೆ ಸಂಪೂರ್ಣ ಅಧಿಕಾರ ನೀಡಿ ಶಾಶ್ವತ ದಾರಿ ಮಾಡಿಕೊಡುವಂತೆ ಆದೇಶ ಹೊರಡಿಸಬೇಕೆಂದು ಕಂದಾಯ ಸಚಿವರಾದ ಕೃಷ್ಣಭೈರೆಗೌಡ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯ ವತಿಯಿಂದ ಮನವಿ ಸಲ್ಲಿಸಲಾಯಿತು.

ಹಸಿರುಸೇನೆಯ ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಮನವಿ ಸಲ್ಲಿಸಿ ಮಾತನಾಡುತ್ತಾ, ಜಿಲ್ಲೆಯ ರೈತರ ಜಮೀನುಗಳ ದಾರಿಯ ಸಮಸ್ಯೆ ಕುರಿತು ಪ್ರತಿನಿತ್ಯ ಹಲವಾರು ವ್ಯಾಜ್ಯಗಳು ಬರುತ್ತಿದ್ದು, ಇದರಿಂದ ರೈತರು ಕೃಷಿ ಚಟುವಟಿಕೆಗೆ ದಾರಿ ಇಲ್ಲದೇ ಕೋರ್ಟ್ ಕಚೇರಿ ಅಂತಅಲೆದಾಡುವಂತಾಗಿದೆ. ಪ್ರತಿನಿತ್ಯ ಜಗಳಗಳಾಗಿ ಕೊಲೆಯಲ್ಲಿ ಅಂತ್ಯಗೊಳ್ಳುತ್ತಿವೆ. ಇದಕ್ಕೊಂದು ಶಾಶ್ವತ ಪರಿಹಾರವನ್ನು ತಾವುಗಳು ಎಲ್ಲಾ ರೈತರಿಗೆ ನಕಾಶೆಯಲ್ಲಿ ದಾರಿ ನಮೂದಿಸುವಂತೆ ಆದೇಶ ಹೊರಡಿಸಬೇಕು ತಹಶೀಲ್ದಾರ ಮತ್ತು ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿಯೇ ಪರಿಹರಿಸುವಂತೆ ಕಠಿಣ ಆದೇಶ ಹೊರಡಿಸಬೇಕು ಜಿಲ್ಲೆಯ 13 ತಾಲೂಕುಗಳಲ್ಲಿ ತಹಶೀಲ್ದಾರರು ಇದು ಸಿವಿಲ್ ವಿಷಯ ತಮ್ಮ ಜವಾಬ್ದಾರಿಯಿಂದ ಜಾರಿಕೊಳ್ಳಲು ನ್ಯಾಯಾಲಯಕ್ಕೆ ಹೋಗುವಂತೆ ಆದೇಶ ನೀಡುತ್ತಿದ್ದಾರೆ, ತಾವೂ ಹಿಂದೆ ಹೊರಡಿಸಿರುವ ಆದೇಶದಂತೆ ಅಧಿಕಾರಿಗಳು ಸಂಪೂರ್ಣ ಅಧಿಕಾರ ನಮಗಿಲ್ಲ ಎಂದು ರೈತರ ಜೀವನವನ್ನು ಕತ್ತಲೆಗೆ ದುಡುತ್ತಿದ್ದಾರೆ. ಇದಕ್ಕೊಂದು ಶಾಶ್ವತ ಪರಿಹಾರ ನೀಡಬೇಕೆಂದು ವಿನಂತಿಸಿಕೊಳ್ಳುತ್ತೇವೆ ಎಂದರು.

# ಹೈಕಮಾಂಡ್ ಮಾರ್ಗದರ್ಶನದಲ್ಲಿ ಸರ್ಕಾರ ನಿರ್ವಹಣೆ: ಪ್ರಹ್ಲಾದ್ ಜೋಶಿ ಕಿಡಿ

**ಹುಬ್ಬಳ್ಳಿ, ಏ.13–** ರಾಜ್ಯ ಸರ್ಕಾರವು ಕಾಂಗ್ರೆಸ್‌ನ ಕೇಂದ್ರ ಹೈಕಮಾಂಡ್ ಅಣತಿಯಂತೆ ನಡೆದುಕೊಳ್ಳುತ್ತಿದ್ದು, ಹೀಗಾಗಿ ಅಂಬೇಡ್ಕರರು ನಿಪ್ಪಾಣಿಗೆ ಭೇಟಿ ನೀಡಿದ ಶತಮಾನೋತ್ಸವ ಆಚರಿಸುತ್ತಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹರಿಹಾಯ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಹಿಂದಿನಿಂದಲೂ ಅಂಬೇಡ್ಕರರನ್ನು ದ್ವೇಷಿಸುತ್ತಲೇ ಬಂದಿದೆ. ಅವರು ಸಂಸತ್‌ಗೆ ಆಗಮಿಸದಂತೆ ಸೋಲಿಸಿತ್ತು. ನೆಹರು ಅವರ ವಿರುದ್ಧ ಪ್ರಚಾರ ಮಾಡಿ ಸೋಲಿಸಿದರು. ಹೀಗಾಗಿ ಅಂಬೇಡ್ಕರ ಶತಮಾನೋತ್ಸವ ಆಚರಿಸಿದರೆ ತಮ್ಮ ಕುತಂತ್ರ ಎಲ್ಲಿ ಯಲಾಗುತ್ತದೆಂದು ಕೈಬಿಟ್ಟಿದೆ ಎಂದು ವಾಗ್ದಾಳಿ ನಡೆಸಿದರು.


ಮಹಾತ್ಮಾ ಗಾಂಧಿಯವರು ಬೆಳಗಾವಿಗೆ ಭೇಟಿ ನೀಡಿದರೆಂದು ಈಗಿನ ನಕಲಿ ಗಾಂಧಿಗಳು ಸರ್ಕಾರದ ಖರ್ಚಿನಲ್ಲಿ ಸಮ್ಮೇಳನ ನಡೆಸಿದ್ದರು ಎಂದು ಕುಟುಕಿದರು.

ಪ್ರಿಯಾಂಕ್ ಖರ್ಗೆಗೆ ಇತಿಹಾಸ ಗೊತ್ತಿಲ್ಲ. ಹಾಗಾದರೆ ಅಂಬೇಡ್ಕರ್ ಬಗ್ಗೆ ರಮೇಶ ಕುಮಾರ ಸದನದಲ್ಲಿ ಹೇಳಿದ್ದಕ್ಕೆ ಅವರ ವಿರುದ್ಧ ಕ್ರಮ ಕೈಗೊಳ್ಳುತ್ತಾರೆಯೇ ಎಂದು ಪ್ರಶ್ನಿಸಿದರು. ಜಾತಿಗಣತಿ ವರದಿ ಬಗ್ಗೆ ಅವರಲ್ಲಿಯೇ ಗೊಂದಲವಿದೆ. ಸಮೀಕ್ಷೆ ಅವೈಜ್ಞಾನಿಕವಾಗಿದೆ. ತಮ್ಮ ಕುರ್ಚಿ ಉಳಿಸಿಕೊಳ್ಳಲು ಜಾತಿ ಗಣತಿ ದಾಳ ಬೀಸಿದ್ದಾರೆ ಎಂದು ಹರಿಹಾಯ್ದರು.

'ಭೀಮ ಹೆಜ್ಜೆ–100' ರ ಸಂಭ್ರಮ ಕಾರ್ಯಕ್ರಮದ ಉದ್ಘಾಟನೆಯ ವೇಳೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದು, ಕಾಂಗ್ರೆಸ್ ನವರು ಕೇವಲ ಹಿಂದೂ ವಿರೋಧಿಗಳಲ್ಲ ದಲಿತ ವಿರೋಧಿಗಳು (ಹೌದು ಎಂದು ಹೇಳಿದ್ದರು. ಈ ಹೇಳಿಕೆ ಈಗ ಕಾಂಗ್ರೆಸ್ ನಾಯಕರಿಗೆ ಅಸ್ತ್ರವಾಗಿ ಪರಿಣಮಿಸಿದೆ.ಈ ಕುರಿತು ಸಚಿವ ಪ್ರಿಯಾಂಕ ಖರ್ಗೆ ಎಕ್ಸ್ ನಲ್ಲಿ ಟ್ವೀಟ್ ಮಾಡಿದ್ದು, ಪ್ರಹ್ಲಾದ್ ಜೋಶಿ, ಆರ್‌ಎಸ್‌ಎಸ್ ಮತ್ತು ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈ ಬಗ್ಗೆ ಪೋಸ್ಟ್ ಮಾಡಿರುವ ಅವರು ಹೀಗೆ ಬರೆದಿಕೊಂಡಿದ್ದಾರೆ. ದಲಿತರು ಹಿಂದೂಗಳಲ್ಲ, ಆರ್‌ಎಸ್‌ಎಸ್ ಹಾಗೂ ಬಿಜೆಪಿಯ ಒಳಮನಸಿನ ಸತ್ಯವನ್ನು ಪ್ರಹ್ಲಾದ್ ಜೋಶಿಯವರು ಸ್ಪಷ್ಟಪಡಿಸಿದ್ದಾರೆ. ಈ ಸ್ಪಷ್ಟನೆ ನೀಡಿದ್ದಕ್ಕೆ ಧನ್ಯವಾದಗಳು ಜೋಶಿಯವರೇ ಎಂದಿದ್ದಾರೆ. ಹಿಂದೂಗಳೇ ಬೇರೆ, ದಲಿತರೇ ಬೇರೆ ಮತ್ತು ಸನಾತನದವರೇ ಬೇರೆ ಎನ್ನುವ ಆರ್‌ಎಸ್‌ಎಸ್ ಹಾಗೂ ಬಿಜೆಪಿಯ ವಿಭಜನಾತ್ಮಕ ಧೋರಣೆಯನ್ನು ಜೋಶಿಯವರು ಪ್ರಾಮಾಣಿಕವಾಗಿ ಸ್ಪಷ್ಟಪಡಿಸಿದ್ದಾರೆ.

ಸನಾತನದಲ್ಲಿ ಹಿಂದೂಗಳಿಲ್ಲ, ಹಿಂದೂಗಳಲ್ಲಿ ದಲಿತರಿಲ್ಲ ಎನ್ನುವುದು ಸಂಘ ಪರಿವಾರದೊಳಗಿನ ಸತ್ಯ. ಈ ಸತ್ಯವನ್ನು ಸಮಾಜ ಅರ್ಥ ಮಾಡಿಕೊಳ್ಳುವಂತೆ ತಿಳಿಸಿದ್ದಕ್ಕೆ ಅಭಿನಂದನೆಗಳು! ಜೋಶಿಯವರೇ, ನಿಮ್ಮ ಈ ಪ್ರತ್ಯೇಕತಾ ಧೋರಣೆಗಾಗಿಯೇ, ಈ ತಾರತಮ್ಯಕ್ಕಾಗಿಯೇ ಬಾಬಾ ಸಾಹೇಬರು "ಹಿಂದೂವಾಗಿ ಹುಟ್ಟಿದ್ದೇನೆ, ಆದರೆ ಹಿಂದುವಾಗಿ ಸಾಯಲಾರೆ" ಎಂದು ಬೌದ್ಧ ಧರ್ಮ ದೀಕ್ಷೆ ಪಡೆದಿದ್ದು. ಬಿಜೆಪಿ ನಾಯಕರಿಗೆ ಬಾಬಾ ಸಾಹೇಬರ ಸಿದ್ಧಾಂತದ ಮೇಲೆ ನೈಜ ಗೌರವ ಇರುವುದೇ ಆದರೆ ಅಂಬೇಡ್ಕರ್ ಅವರು ಬೌದ್ಧ ಧರ್ಮ ಸ್ವೀಕರಿಸಿದ ದಮ್ಮಚಕ್ರ ಪ್ರವರ್ತನ ದಿನವನ್ನು ಆಚರಿಸಿ, ತಾರತಮ್ಯದ ಬಗೆಗಿನ ಅಂಬೇಡ್ಕರ್ ಅವರ ಹೇಳಿಕೆಗಳನ್ನು ಓದಲಿ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

# ಬುದ್ಧ, ಬಸವನನ್ನು ತಿರಸ್ಕರಿಸಿದವರಿಂದಲೇ ಸಂವಿಧಾನದ ಮೇಲೆ ದಾಳಿ: ಕೃಷ್ಣ ಬೈರೇಗೌಡ



**ವಿಜಯಪುರ, ಏ.13–** ಸಮಾನತೆಯನ್ನು ಪ್ರತಿಪದಿಸಿದ ಬುದ್ಧ, ಬಸವಣ್ಣನವರನ್ನು ತ್ಯಜಿಸಿದವರಿಂದಲೇ ಇಂದು ಅಂಬೇಡ್ಕರ್ ಅವರ ಸಂವಿಧಾನದ ವಿರುದ್ಧ ದಾಳಿ ನಡೆಯುತ್ತಿದೆ. ಇದು ನಾವು ಎಚ್ಚರಿಕೆಯಿಂದಿರಬೇಕಾದ ಕಾಲ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಕರೆ ನೀಡಿದರು.

ದಲಿತ ವಿದ್ಯಾರ್ಥಿ ಪರಿಷತ್, ಜಾಗೃತ ಕರ್ನಾಟಕ ಹಾಗೂ ಅನೌಪಚಾರಿಕ ಶಿಕ್ಷಣ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ನಗರದಲ್ಲಿ ಆಯೋಜಿಸಿದ ಅಂಬೇಡ್ಕರ್ ಹಬ್ಬ ವಿಚಾರ ಸಂಕಿರಣ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಚಿವರು, ಹುಟ್ಟಿನಿಂದ ಇವ್ರು ಮೇಲೆ ಕೆಳಗೆ, ಈತ ಅಸ್ಪೃಶ್ಯ, ಇವರನ್ನು ಮುಟ್ಟಬಾರದು ಊರಿಂದ ಹೊರಗಿಡಬೇಕು ಎಂಬ ಮನುವಾದ ಬಹಳ ಹಿಂದಿನಿಂದಲೂ ಇದೆ. ಈ ಮನುವಾದದ ವಿರುದ್ಧ ಮೊದಲು ಧ್ವನಿ ಎತ್ತಿದವರು ಬುದ್ಧ ಅದನ್ನು ಮುಂದುವರೆಸಿದವರು ಬಸವಣ್ಣ ಅದನ್ನು ಸಂವಿಧಾನದ ಆಶಯವನ್ನಾಗಿಸಿದವರು ಅಂಬೇಡ್ಕರ್. ಅದನ್ನೇ ಪ್ರತಿಪಾದಿಸಿದವರು ಕುವೆಂಪು. ಈ ತದ್ವಿರುದ್ಧ ವಾದಗಳ ನಡುವೆ ಅಂದಿನಿಂದಲೂ ಪ್ರತಿಸ್ಪರ್ಧೆ ಇದೆ. ಮಾನವತಾವಾದವನ್ನು ಪ್ರತಿಪಾದಿಸಿದ ಈ ಎಲ್ಲಾ ಮಹನೀಯರನ್ನು ತ್ಯಜಿಸಿದವರಿಂದಲೇ ಇಂದು ಸಂವಿಧಾನದ ಮೇಲೂ ದಾಳಿ ನಡೆಯುತ್ತಿದೆ. ಹೀಗಾಗಿ ನಾವೆಲ್ಲರೂ ಎಲ್ಲಾ ಕಾಲದಲ್ಲೂ ಜಾಗೃತರಾಗಿರಬೇಕು" ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯ ಪಟ್ಟರು.

ಬುದ್ಧ–ಬಸವ–ಅಂಬೇಡ್ಕರ್–ಫುಲೆ ಇವರ ಎಲ್ಲರ ಆಶಯವೂ ಒಂದೇ ಆಗಿತ್ತು. ಸಂಪ್ರದಾಯವಾದಿಗಳ ವಿರುದ್ಧ ಬುದ್ಧ ಧ್ವನಿ ಎತ್ತಿದ್ದ. ಎಲ್ಲರೂ ಒಂದೇ ಎಂಬ ಸಮಾನತೆಯನ್ನು ಸಾರಿದ್ದ, ಬುದ್ಧನ ಆದಿಯಾಗಿ ಬಸವಣ್ಣ, ಫುಲೆ, ಅಂಬೇಡ್ಕರ್ ರಿಂದ ವಿಶ್ವಮಾನವ ಕುವೆಂಪುವರೆಗೆ ಎಲ್ಲರೂ ಪಾಲಿಸಿದ್ದು, ಪ್ರತಿಪಾದಿಸಿದ್ದು ಈ ಮಾನವತಾ ವಾದವನ್ನೇ. ಬುದ್ದನ ಈ ವೈಚಾರಿಕತೆಯನ್ನು ಬಸವಣ್ಣ–ಕನಕದಾಸರು ಜನ ಸಾಮಾನ್ಯರಿಗೆ ತತ್ವದ ಭಾಷೆಯಲ್ಲಿ ಹೇಳಿದರೆ, ಅದಕ್ಕೆ ಆಧುನಿಕ ಭಾಷೆಯನ್ನು ಸೇರಿಸಿ ಸಂವಿಧಾನವನ್ನಾಗಿಸಿದವರು ಅಂಬೇಡ್ಕರ್" ಎಂದರು.

ಇರುವುದು ಒಂದೇ ಕುಲ, ಮಾನವ ಕುಲ. ಇಲ್ಲಿ ಹುಟ್ಟಿನಿಂದ ಯಾರೂ ಮೇಲಲ್ಲ, ಕೀಳೂ ಅಲ್ಲ ಎಂಬ ಸಮಾನತೆಯ ಆಶಯವೇ ನಮ್ಮ ಸಂವಿಧಾನದ ಮೂಲ ತತ್ವ. ಇದಕ್ಕೆ ಸ್ಫೂರ್ತಿ ಬಸವಣ್ಣನೂ ಹೌದು ಬುದ್ಧನೂ ಹೌದು. ಭಾಷೆ 20ನೇ ಶತಮಾನದ್ದಿರಬಹುದು. ಆದರೆ, ಅದರ ಸ್ಫೂರ್ತಿ ಈ ಮಣ್ಣಿನಲ್ಲಿ ಅಡಗಿದೆ. ಅವರು ಬಿತ್ತಿದ ಕಾಳು ಇಂದು ಮರವಾಗಿ ಬೆಳೆದು ಸಂವಿಧಾನದ ರೂಪದಲ್ಲಿ ನಮಗೆ ಸಿಕ್ಕಿದೆ. ಬಸವ ಸಾಹಿತ್ಯ, ದಾಸ ಸಾಹಿತ್ಯದಿಂದ ಕುವೆಂಪು ವರೆಗೆ ಎಲ್ಲರೂ ಇದನ್ನೇ ಪ್ರತಿಪಾದಿಸಿದ್ದು. ಇವರೆಲ್ಲರೂ ಮಾನವತಾವಾದಿಗಳು. ನಾವು ಅನುಸರಿಸಬೇಕಾದ ನಿಜವಾದ ನಾಯಕರು ಎಂದು ತಿಳಿಸಿದರು.

ಬಸವಣ್ಣನವರ ತತ್ವವೇ ನಮ್ಮ ನಾಡಿನ ಗುಣ. ಜಾತಿ– ಕುಲ ಬಿಟ್ಟು ಮನುಷ್ಯರಾಗಿ ಬದುಕಿ ಎಂಬುದೇ ಅವರ ಸಿದ್ದಾಂತ. ಒಡೆದು ಆಳುವ ನೀತಿಯನ್ನು ತಿರಸ್ಕಾರ ಮಾಡಿ ಎಲ್ಲರೂ ನಮ್ಮವರು ಎಂಬುದೇ ನಮ್ಮ ಸಂಸ್ಕೃತಿ ಸಂಪ್ರದಾಯ. ಇದೇ ಕಾರಣಕ್ಕೆ ನಮ್ಮ ಸರ್ಕಾರ ಬಸವಣ್ಣನವರನ್ನು ನಮ್ಮ ನಾಡಿನ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ. ಏಕೆಂದರೆ ಬಸವಣ್ಣನಿಗಿಂತ ನಮ್ಮ ನಾಡಿನ ಗುಣವನ್ನು ಯಾರೂ ಪ್ರತಿಬಿಂಬಿಸಲು ಸಾಧ್ಯವಿಲ್ಲ ಎಂದರು.

ಆದರೆ, ವಚನಗಳಿಗೆ ಶರಣು ಎಂದವರಿಂದಲೇ ಇಂದು ವಚನ ಸಾಹಿತ್ಯದ ಮೇಲೆ ದಾಳಿ ಶುರುವಾಗಿದೆ. ಬುದ್ಧನನ್ನು ಅವಹೇಳನ ಮಾಡಿದವರು, ಬಸವನನ್ನು ತಿರಸ್ಕರಿಸಿದವರು, ಅಂಬೇಡ್ಕರ್ ಅವರ ಸಂವಿಧಾನವನ್ನು ಬದಲಿಸಬೇಕು ಎಂದು ಮಾತನಾಡುತ್ತಿರುವವರು ಇಂದು ವಚನ ಸಾಹಿತ್ಯದ ಮೇಲೂ ದಾಳಿ ನಡೆಸುತ್ತಿದ್ದಾರೆ ಈ ಬಗ್ಗೆಯೂ ನಾವು ಎಚ್ಚರಾಗಿರಬೇಕು" ಎಂದು ಸಚಿವರು ಕರೆ ನೀಡಿದರು.

ವಚನ ದರ್ಶನ ಎಂಬ ಪುಸ್ತಕ ಬಿಡುಗಡೆ ಮಾಡುವ ಮೂಲಕ ಕೆಲವರು ವಚನ ಸಾಹಿತ್ಯದ ಸಾರಾಂಶವನ್ನು ತಿರುಚಿ ಜನ ಸಾಮಾನ್ಯರು ತಿರಸ್ಕಾರ ಮಾಡುವಂತೆ ಮಾಡಿ, ಶ್ರೇಣೀಕೃತ ವ್ಯವಸ್ಥೆ ಉಳಿಸಲು ಮುಂದಾಗಿದ್ದಾರೆ. ಹೀಗಾಗಿ ನಾವು ಎಚ್ಚರಿಕೆ ವಹಿಸಬೇಕು. ಸತ್ಯ ಕಣ್ಣ ಮುಂದೆ ಇದ್ದರೂ ನೂರು ಬಾರಿ ಸುಳ್ಳನ್ನೇ ಹೇಳಿದರೆ ಅದೇ ಸತ್ಯವಾಗುವ ಕಾಲವಿದು. ಹೀಗಾಗಿ ನಾವು ಸದಾ ಕಾಲ ಎಚ್ಚರಿಕೆ ವಹಿಸಬೇಕಿದೆ ಎಂದರು.

# ಚಾಕೊಲೆಟ್ ಆಸೆ ತೋರಿಸಿ 5 ವರ್ಷದ ಬಾಲಕಿ ಅತ್ಯಾಚಾರ



**ಹುಬ್ಬಳ್ಳಿ, ಏ.13–** ಮನೆ ಮುಂದೆ ಆಟವಾಡುತ್ತಿದ್ದ 5 ವರ್ಷದ ಬಾಲಕಿಯನ್ನು ಚಾಕೋಲೆಟ್ ಆಸೆ ತೋರಿಸಿ ಕರೆದು ಹೊತ್ತೊಯ್ದ ಕಾಮುಕ, ಬಾಲಕಿ ಮೇಲೆ ಅತ್ಯಾಚಾರ ವೆಸಗಿ ಹತ್ಯೆಗೈದಿರುವ ಘಟನೆ ಹುಬ್ಬಳ್ಳಿಯ ಅಶೋಕನಗರ ವ್ಯಾಪ್ತಿಯಲ್ಲಿ ನಡೆದಿದೆ. ಕಾಮುಕ ಮನೆ ಬಳಿ ಬರುತ್ತಿರುವ ಹಾಗೂ ಬಾಲಕಿಯನ್ನು ಹೊತ್ತೊಯ್ದ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಘಟನೆ ಬೆನ್ನಲ್ಲೇ ಹುಬ್ಬಳ್ಳಿ ನಗರ ಬೆಚ್ಚಿಬಿದ್ದಿದ್ದು, ಸಾರ್ವಜನಿಕರು ಅಶೋಕನಗರ ಪೊಲೀಸ್ ಠಾಣೆ ಬಳಿ ಧಾವಿಸಿ ಪ್ರತಿಭಟನೆ ನಡೆಸಿದ್ದಾರೆ. ಕಾಮುಕನನ್ನು ಬಂಧಿಸಿ ತಮಗೊಪ್ಪಿಸಿ. ಇಲ್ಲವೇ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಿ ಎಂದು ಪಟ್ಟು ಹಿಡಿದಿದ್ದಾರೆ. ಅಶೋಕನಗರ ಪೊಲೀಸ್ ಠಾಣೆ ಎದುರು ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಹುಬ್ಬಳ್ಳಿ–ಧಾರವಾಡ ಕಮಿಷನರ್ ಶಶಿಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಸಾರ್ವಜನಿಕರನ್ನು ಸಮಾಧಾನ ಪಡಿಸುವ ಯತ್ನ ನಡೆಸಿದ್ದಾರೆ. ಶೀಘ್ರದಲ್ಲಿ ಆರೋಪಿ ಬಂಧಿಸಿ ಕಠಿಣ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ.

# ಮೂಢನಂಬಿಕೆ ತ್ಯಜಿಸಿ ಬದುಕಲು ಮಹಿಳೆಯರಿಗೆ ಡಾ.ಜಯದೇವಿ ಕರೆ



**ಕಲಬುರಗಿ, ಏ.13–** ಯಾವುದೇ ಸಮಾಜ ಪ್ರಗತಿ ಸಾಧಿಸಬೇಕಾದರೆ ಮಹಿಳೆಯರ ಪಾಲ್ಗೊಳ್ಳುವಿಕೆ ಮುಖ್ಯ. ಅದಕ್ಕಾಗಿ ಅಂಧಶ್ರದ್ಧೆ ಮತ್ತು ಮೂಢನಂಬಿಕೆಗಳನ್ನು ತ್ಯಜಿಸಿ ಹೊಸ ಬದುಕು ಕಟ್ಟಿಕೊಳ್ಳಬೇಕು ಎಂದು ಕೇಂದ್ರ ಕನ್ನಡ ಸಾಹಿತ್ಯ ಅಕ್ಯಾಡೆಮಿಯ ಸಲಹಾ ಸಮಿತಿ ಸದಸ್ಯೆ–ಸಾಹಿತಿ ಡಾ. ಜಯದೇವಿ ಗಾಯಕವಾಡ ಅವರು ಕರೆ ನೀಡಿದರು.

ವಿಚಾರ ಸಂಕಿರಣದಲ್ಲಿ, ಸಮ ಸಮಾಜ ನಿರ್ಮಾಣಕ್ಕೆ ಮಹಿಳೆಯರ ಸಾಕ್ಷರತೆ ಅವಶ್ಯ. ಶಿಕ್ಷಣ ಕೊಡಿಸುವ ಮೂಲಕ ಮಹಿಳಾ ಸಬಲೀಕರಣ ಮಾಡಬೇಕಾಗಿದೆ. ಶೋಷಣೆ ಮತ್ತು ಅತ್ಯಾಚಾರ ಮುಕ್ತ ಸಮಾಜ ನಿರ್ಮಿಸಲು ಮೂಢನಂಬಿಕೆಗಳನ್ನು ಮೆಟ್ಟಿ ನಿಲ್ಲಬೇಕಾಗಿದೆ. ನಮ್ಮ ಸಂವಿಧಾನ ಕೊಟ್ಟಿರುವ ಹಕ್ಕುಗಳನ್ನು ಸದುಪಯೋಗ ಪಡಿಸಿಕೊಂಡು ಬುದ್ಧ, ಬಸವ ಮತ್ತು ಡಾ. ಅಂಬೇಡ್ಕರ್‌ರ ತತ್ವಾದರ್ಶಗಳಲ್ಲಿ ನಡೆಯಬೇಕು. ಆಗಲೇ ಬಾಬಾ ಸಾಹೇಬರ ಪ್ರಬುದ್ಧ ಭಾರತದ ಕನಸು ನನಸಾಗಿಸಲು ಸಾಧ್ಯ. ಸಾಮಾಜಿಕ ಸಮಾನತೆ, ಅಂಬೇಡ್ಕರ್ ಚಿಂತನೆ ಕುರಿತು ಲೇಖಕ ಡಾ. ಜಗನ್ನಾಥ ಎಲ್ ತರನಳ್ಳಿ ಅವರು ಮಾತನಾಡಿ, ನಾವು ಕೇವಲ ರಾಜಕೀಯ ಸ್ವಾತಂತ್ರ್ಯ ಪಡೆದರೆ ಸಾಲದು. ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯ ಪ್ರತಿಪಾದಿಸಿದ ಅಂಬೇಡ್ಕರ್ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ. ಮತ್ತು ಮಹಿಳಾ ಸಬಲೀಕರಣಕ್ಕಾಗಿ ಸಂವಿಧಾನದಲ್ಲಿ ಕಲ್ಪಸಿದ ಹಕ್ಕುಗಳು ಸದುಪಯೋಗ ವಾಗಬೇಕು. ಮಹಿಳೆಯರಿಗೆ ಶಿಕ್ಷಣ ಕೊಡಿಸಬೇಕು.

ಸಂವಿಧಾನ ತತ್ವ–'ರಣ ತತ್ವ ಕುರಿತು ಮಾತನಾಡಿದ ಶರಣ ಚಿಂತಕ ಪ್ರೊ. ಸಂಜಯ್ ಮಾಕಲ್ ಅವರು ಮಾತನಾಡಿ, ಸಂವಿಧಾನ ಓದಿದರೆ ಅಂಬೇಡ್ಕರ್ ಅರ್ಥ ವಾಗುತ್ತಾರೆ. ಜಾತಿ, ಧರ್ಮಗಳಾಚೆ ಮಾನವ ಧರ್ಮ ನಿರ್ಮಿಸಬೇಕಾಗಿದೆ. ಶರಣರು, ಸಂತರು ಮತ್ತು ಧಾರ್ಶನಿಕರ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿ ಕೊಂಡು ಹೋಗಬೇಕು. ಆ ಮೂಲಕ ವರ್ಗರಹಿತ, ಜಾತಿ ರಹಿತ ಸಮಾಜ ಕಟ್ಟಲು ಸಾಧ್ಯ ಎಂದರು.

ಪರಿಷತ್ ಜಿಲ್ಲಾ ಅಧ್ಯಕ್ಷ ವಿಜಯ ಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ಆಶಯ ನುಡಿಗಳನ್ನಾಡಿ, ಸಮಾಜದಲ್ಲಿ ಬೇರೂರಿದ್ದ ಜಾತಿ ಪದ್ಧತಿ ವಿರುದ್ಧ ಮತ್ತು ಸಮಾಜದಲ್ಲಿ ಇರುವ ಅಸಮಾನತೆಯನ್ನು ಹೋಗಲಾಡಿಸುವ ಸಲುವಾಗಿ ಹೋರಾಟ ಮಾಡಿದ ಡಾ. ಅಂಬೇಡ್ಕರ್ ಅವರ ಆದರ್ಶ, ತತ್ವವನ್ನು ನಾವೆಲ್ಲರೂ ಮೈಗೂ ಕೊಳ್ಳಬೇಕು. ಬಾಬಾಸಾಹೇಬ್ ಡಾ. ಅಂಬೇಡ್ಕರ್ ರವರು ಈ ದೇಶದ ಒಂದು ಮಹಾನ್ ಶಕ್ತಿ ಮತ್ತು ಸಮ ಸಮಾಜದ ನಿರ್ಮಾತೃ. ಕನ್ನಡ ಸಾಹಿತ್ಯ ಪರಿಷತ್ತು ಸಾಹಿತ್ಯಕ ಚಟುವಟಿಕೆಗಳ ಆಯೋಜನೆ ಜತೆಗೆ ಕನ್ನಡಿಗರ ಬದುಕು ಹಸನು ಮಾಡಲು ಇಂಥ ಜನಮುಖಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

# ಜಾತಿಗಣತಿ ವರದಿ ಬಗ್ಗೆ ಯಾವುದೇ ತೀರ್ಮಾನ ಇಲ್ಲ: ಡಾ.ಶರಣಪ್ರಕಾಶ ಪಾಟೀಲ್



ರಾಯಚೂರು ಒಳಾಂಗಣ ಕ್ರೀಡಾಂಗಣದಲ್ಲಿ ಟೇಬಲ್ ಟೆನ್ನಿಸ್ ಕೋರ್ಟ್ ಉದ್ಘಾಟನೆ ಸಮಾರಂಭದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಶ ಪಾಟೀಲ್ ಮಾತನಾಡಿದರು. ಸಚಿವ ಎನ್.ಎಸ್.ಬೋಸರಾಜು ಮತ್ತಿತರರಿದ್ದರು.

**ರಾಯಚೂರು, ಏ.13–** ಜಾತಿಗಣತಿ ವರದಿಯನ್ನು ಓಪನ್ ಮಾಡಲಾಗಿದೆ. ಮೊದಲ ಬಾರಿಗೆಲಕೋಟೆಯನ್ನು ಸಚಿವ ಸಂಪುಟದಲ್ಲಿ ತೆರೆಯಲಾಗಿದೆ. ಎಲ್ಲರಿಗೂ ಪ್ರತಿಗಳನ್ನು ನೀಡಿ ಏ. 17ರಂದು ಕ್ಯಾಬಿನೆಟ್‌ನಲ್ಲಿ ಚರ್ಚೆ ಮಾಡೋಣ. ಎಲ್ಲರೂ ಓದಿಕೊಂಡು ಬನ್ನಿ ಎಂದು ಸಿಎಂ ಹೇಳಿದ್ದಾರೆ.

ಈ ಕುರಿತು ಯಾವುದೇ ಗೊಂದಲ ಇಲ್ಲ. ಅನಗತ್ಯ ಈ ಕುರಿತು ವಿವಾದ ಸೃಷ್ಟಿಸುವುದು ಬೇಡ. ಈ ವರದಿಯಲ್ಲಿ ಅಂಥದ್ದೇನೂ ಇಲ್ಲ. ಉದ್ದೇಶವನ್ನು ಮೊದಲೇ ತಿಳಿಸಲಾಗಿತ್ತು. ಅದಕ್ಕಾಗಿ ಜಾತಿ ಗಣತಿ ನಡೆಸಲಾಗಿತ್ತು ಅಷ್ಟೇ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.

ರಾಯಚೂರಿನ ಒಳಾಂಗಣ ಕ್ರೀಡಾಂಗಣದಲ್ಲಿ ಟೇಬಲ್ ಟೆನ್ನಿಸ್ ಕೋರ್ಟ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಾತಿ ಗಣತಿಯ ವರದಿ ಕುರಿತು ಏ. 17ರಂದು ಸಚಿವ ಸಂಪುಟದ ಸಭೆಯಲ್ಲಿ ಚರ್ಚೆ ಮಾಡುತ್ತೇವೆ. ಚರ್ಚೆ ಮಾಡಿದ ನಂತರ ಸಆಧಕ ಬಾಧಕಗಳನ್ನು ಗಮನಿಸದೇ ಜಾರಿಗೆ ತರುವದಿಲ್ಲ. ಇದರಲ್ಲಿ ಎಲ್ಲರ ಒಪ್ಪಿಗೆಯೂ ಬೇಕಾಗುತ್ತದೆ.

ಕಾಂಗ್ರೆಸ್ ಸರ್ಕಾರದ ವಿರುದ್ದ ಜೆಡಿಎಸ್ ಹೋರಾಟ ನಡೆಸುತ್ತಿರುವ ವಿಚಾರವಾಗಿ ಮಾತನಾಡಿದ ಅವರು, ಹಿಂದೆ ಜೆಡಿಎಸ್ ಸರ್ಕಾರವೇ ಆಧಿಕಾರದಲ್ಲಿ ಇತ್ತು. ನಾವು ಕೂಡ ಅವರಿಗೆ ಬೆಂಬಲ ನೀಡಿದ್ದೆವು. ಎರಡು ಸಲ ಕಾಂಗ್ರೆಸ್ ಬೆಂಬಲದಿಂದಲೇ ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾರೆ. ನಮ್ಮ ಕಾಂಗ್ರೆಸ್ ಸಪೋರ್ಟ್‌ನಿಂದಲೇ ದೇವೇಗೌಡರು ಪ್ರಧಾನಮಂತ್ರಿಯೂ ಆಗಿದ್ದಾರೆ. ಅಧಿಕಾರ ಅನುಭವಿಸುವಾಗ ಮಾತ್ರ ಕಾಂಗ್ರೆಸ್ ಬೇಕು.

ಅಧಿಕಾರ ಕಳೆದುಕೊಂಡ ಮೇಲೆ ಅಪ್ಪ–ಮಗ ಇಬ್ಬರೂ ಸಾಕಪ್ಪ ಸಾಕು ಈ ಕಾಂಗ್ರೆಸ್ ಸಹವಾಸ ಅಂತಾ ಹೇಳುವವರನ್ನು ತುಂಬಾ ಜನರನ್ನು ನೋಡಿದ್ದೇವೆ ಎಂದು ವ್ಯಂಗ್ಯವಾಡಿದರು.

## ನಾಳೆಯಿಂದ ಎಸ್.ಎಸ್.ಎಲ್.ಸಿ ಪರೀಕ್ಷೆ ಮೌಲ್ಯಮಾಪನ ಆರಂಭ

# ಮೌಲ್ಯಮಾಪನ ಕಾರ್ಯಕ್ಕೆ ಕಡ್ಡಾಯ ಹಾಜರಾಗುವಂತೆ ಉಪನಿರ್ದೇಶಕರ ಸೂಚನೆ

**ವಿಜಯಪುರ ಏ. 13–** ಕಳೆದ ಮಾರ್ಚ್–ಏಪ್ರಿಲ್ 2025ರಲ್ಲಿ ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಮೌಲ್ಯಮಾಪನ ಕಾರ್ಯ ಇದೇ ಏಪ್ರಿಲ್ 15ರಿಂದ ನಡೆಯಲಿದ್ದು, ಮೌಲ್ಯಮಾಪನ ಕಾರ್ಯಕ್ಕೆ ನಿಯೋಜಿತ ಶಿಕ್ಷಕರು ಕಡ್ಡಾಯವಾಗಿ ಹಾಜರಾಗುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಸೂಚನೆ ನೀಡಿದ್ದಾರೆ.

ಮೌಲ್ಯಮಾಪನ ಕಾರ್ಯಕ್ಕಾಗಿ ವಿಜಯಪುರ ನಗರ ವಲಯದಲ್ಲಿ 11 ಮೌಲ್ಯಮಾಪನ ಕೇಂದ್ರಗಳನ್ನು ತೆರಯಲಾಗಿದೆ. ಈಗಾಗಲೇ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಬೆಂಗಳೂರು ಇವರಿಂದ ಮೌಲ್ಯಮಾಪನ ಆದೇಶ ಪ್ರತಿಗಳನ್ನು ಆಯಾ ಶಾಲಾ ಲಾಗಿನ್‌ಗಳಲ್ಲಿ ಫ್ರೀಜ್ ಮಾಡಲಾಗಿದೆ. ಸಂಬಂಧಿಸಿದ ಸರ್ಕಾರಿ/ಅನುದಾನಿತ/ಅನುದಾನ ರಹಿತ ಪ್ರೌಢ ಶಾಲೆಗಳ ಮುಖ್ಯಶಿಕ್ಷಕರು ಮಂಡಳಿಯಿಂದ ನೀಡಲಾದ ಮೌಲ್ಯಮಾಪನ ಆದೇಶ ಪ್ರತಿಗಳನ್ನು ಸಂಬಂಧಿಸಿದ ಶಿಕ್ಷಕರಿಗೆ ಜಾರಿಗೊಳಿಸಿ ಬಿಡುಗಡೆ ಗೊಳಿಸಲಾಗುವುದು.

ಮೌಲ್ಯಮಾಪನ ಕಾರ್ಯದಲ್ಲಿ ಯಾವುದೇ ತರಹದ ನಿರ್ಲಕ್ಷ್ಯ ಕಂಡುಬಂದಲ್ಲಿ ಮುಖ್ಯ ಶಿಕ್ಷಕರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಮೌಲ್ಯಮಾಪನ ಆದೇಶದಲ್ಲಿ ಸೂಚಿಸಿರುವಂತೆ, ಉಪಮುಖ್ಯ ಮೌಲ್ಯಮಾಪಕರು ಮತ್ತು ಸಹಾಯಕ ಮೌಲ್ಯಮಾಪಕರು ತಮಗೆ ಸೂಚಿಸಿ ರುವ ದಿನಾಂಕಗಳಂದು ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಹಾಜರಾಗಬೇಕು. ಮೌಲ್ಯಮಾಪನ ಕಾರ್ಯವು ಕರ್ನಾಟಕ ಶಿಕ್ಷಣ ಕಾಯ್ದೆ 1983 ನಿಯಮ 28 ಮತ್ತು 122 ರನ್ವಯ ಹಾಗೂ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ನಿಯಮಗಳು–2012 ರಂತೆ ಕಡ್ಡಾಯವಾಗಿದ್ದು, ಗೈರು ಹಾಜರಾದಲ್ಲಿ ಸೂಕ್ತ ಶಿಸ್ತುಕ್ರಮ ತೆಗೆದುಕೊಳ್ಳಲಾ ಗುವುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಖ್ಯಮಂತ್ರಿ ಪದಕ ಪುರಸ್ಕೃತರಿಗೆ ಗೌರವ

# ಶಿಸ್ತಿಗೆ ಇನ್ನೊಂದು ಹೆಸರು ಪೊಲೀಸ್ ಇಲಾಖೆ: ವರಜ್ಯೋತಿ ಬಂತೇಜಿ



**ಕಲಬುರಗಿ, ಏ. 13–** ಇಂದಿನ ಹಲವಾರು ಇಲಾಖೆಗಳಲ್ಲಿ ಅತ್ಯಂತ ಶಿಸ್ತು ಬದ್ಧತೆಯಿಂದ ಕೂಡಿದ ಇಲಾಖೆ ಪೊಲಿಸ್ ಇಲಾಖೆಯಾಗಿದೆ. ಜಿಲ್ಲೆಯ ಐದು ಜನರಿಗೆ ನಮ್ಮವರಿಗೆ ಮುಖ್ಯಮಂತ್ರಿ ಚಿನ್ನದ ಪದಕ ಲಭಿಸಿದ್ದು ನನಗೆ ಸಂತೋಷ. ಶಿಸ್ತಿಗೆ ಇನ್ನೊಂದು ಹೆಸರೇ ಪೋಲಿಸ್ ಇಲಾಖೆ ಎಂದು ಅಣದೂರಿನ ವರಜ್ಯೋತಿ ಬಂತೇಜಿ ಅವರು ಹೇಳಿದರು.

ಮುಖ್ಯಮಂತ್ರಿ ಚಿನ್ನದ ಪದಕ ವಿಜೇತ ಪುರಸ್ಕೃತರಿಗೆ ಹಮ್ಮಿಕೊಂಡ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಇವತ್ತು ಒಳ್ಳೆಯವರಿಗೆ ಒಳ್ಳೆಯವರಾಗಿ; ಕೆಟ್ಟದ್ದು ಕಂಡರೆ ಶಿಕ್ಷಿಸಿ ತಮ್ಮ ಎಡೆ ಬಿಡದ ಶಿಸ್ತು ಪರಿಪಾಲಕರು ಅಲ್ಲದೇ ನನ್ನ ಜೀವನದಲ್ಲಿ ಅವರ ಪಾತ್ರ ನಾನು ಅವರು ಮಾಡಿದ ಸಹಾಯ ಮರೆಯುವಂತಿಲ್ಲ ಎಂದರು.

# ಕಟ್ಟಡ ನಿರ್ಮಾಣದಲ್ಲಿ ಕಾರ್ಮಿಕರ ಸುರಕ್ಷೆಗೆ ಒತ್ತು ನೀಡಿ: ಸಾಗರ ಖಂಡ್ರೆ



ಬೀದರ ನಗರದ ಲಾವಣ್ಯ ಕನ್ವೆನ್‌ಶನ್ ಹಾಲ್‌ನಲ್ಲಿ ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್(ಇಂಡಿಯಾ) ವತಿಯಿಂದ ಆಯೋಜಿಸಿರುವ ಮೂರು ದಿವಸಗಳ ಸ್ಟೈಕಾನ್ –4 ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ವಸ್ತು ಪ್ರದರ್ಶನವನ್ನು ಸಂಸದ ಸಾಗರ ಖಂಡ್ರೆ ಅವರು ಉದ್ಘಾಟಿಸಿದರು. ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಮತ್ತಿತರ ಪ್ರಮುಖರಿದ್ದರು.

ಬೀದರ್, ಏ. 13: ಕಟ್ಟಡಗಳು ನಗರದಲ್ಲಿ ಗಟ್ಟಿಯಾಗಿ ನೆಲೆನಿಲ್ಲುವಂತೆ ನಿರ್ಮಿಸುವ ಬಹುದೊಡ್ಡ ಜವಾಬ್ದಾರಿ ಸಿವಿಲ್ ಇಂಜಿನಿಯರ್ ಅವರ ಮೇಲಿದೆ. ಜೊತೆಗೆ ಕಟ್ಟಡ ನಿರ್ಮಾಣದ ಸಂದರ್ಭದಲ್ಲಿ ಕಾರ್ಮಿಕರಿಗೆ ಗ್ಲೌಜ್, ಶೂಸ್, ಹೆಲ್ಮೆಟ್ ಹಾಗೂ ಇನ್ನಿತರ ಸುರಕ್ಷಿತ ವಸ್ತುಗಳನ್ನು ನೀಡುವ ಮೂಲಕ ಅವರ ಸಉರಕ್ಷೆಯನ್ನು ಕಾಪಡುವುದೂ ಅಷ್ಟೇ ಅವಶ್ಯಕತೆ ಇದೆ ಎಂದು ಲೋಕಸಭಾ ಸದಸ್ಯ ಸಾಗರ್ ಖಂಡ್ರೆ ಅವರು ತಿಳಿಸಿದರು.

ನಗರದ ಲಾವಣ್ಯ ಕನ್ವೆನ್ಶನ್ ಹಾಲ್‌ನಲ್ಲಿ ನಡೆಯುತ್ತಿರುವ ಮೂರು ದಿವಸಗಳ ಸ್ಟೈಕಾನ್ –4 ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಕಾಲದಲ್ಲಿ ಪ್ರತಿಯೊಬ್ಬರೂ ಕೆರೆ ಹಾಗೂ ನದಿಯಲ್ಲಿ ಸಿಗುವ ರೇತಿ ಕಡೆಗೆ ಹೆಚ್ಚು ಗಮನ ಹರಿಸುತ್ತಾರೆ. ಇದರಿಂದ ಪ್ರಕೃತಿ ನಾಶವಾಗುತ್ತಿದೆ. ಅದಕ್ಕೂ ಮೀರಿ ರೋಬೊ ರೇತಿ ಹಾಗೂ ಇನ್ನಿತರ ಕಟ್ಟಿಗೆಯ ಕಟ್ಟಡದ ಕಡೆಗೆ ಒಲವು ತೋರುತ್ತಿಲ್ಲ ಎಂದರು.

ನದಿಯ ರೇತಿಯಿಂದ ನೀರಿನೊಳಗಿನ ಜಲಚರ ಪ್ರಾಣಿಗಳು ಹಾಗೂ ಭೂಮಿಯ ಒಡಲು ನಾಶ ವಾಗುತ್ತಿದೆ. ಆದ್ದರಿಂದ ಆಸ್ಟ್ರೇಲಿಯಾ ದೇಶದಂತೆ ಹಗುರವಾದ ವಸ್ತುಗಳಿಂದಲೂ ಕಟ್ಟಡ ನಿರ್ಮಾಣದ ಕಡೆಗೆ ಗಮನ ಹರಿಸಬೇಕು. ಸುರಕ್ಷಿತ ಕಟ್ಟಡಗಳ ನಿರ್ಮಾಣ, ಬಳಸುವ ವಸ್ತುಗಳ ಕುರಿತು ಬಹಳ ಮಾರ್ಮಿಕ ವಾಗಿ ಮೂರು ದಿವಸಗಳ ವಿಚಾರ ಸಂಕಿರಣ ಆಯೋಜನೆ ಮಾಡಿದ್ದು ಖುಷಿ ತಂದಿದೆ. ಸಿವಿಲ್ ಇಂಜಿನಿಯರ್ ಹಾಗೂ ಸರ್ಕಾರ ಒಟ್ಟಾಗಿ ಸೇರಿಕೊಂಡು ರಸ್ತೆ, ಸಮುದಾಯ ಭವನ, ಶೌಚಾಲಯ, ಶಾಲೆಗಳ ಕಟ್ಟಡ ಹಾಗೂ ಇನ್ನಿತರ ಸರ್ಕಾರಿ ಕಟ್ಟಡಗಳ ಕೆಲಸ ಗುಣ ಮಟ್ಟದಿಂದ ಮಾಡಿದರೆ ಗಟ್ಟಿಮುಟ್ಟಾದ ಕಾಮಗಾರಿಗಳನ್ನು ಮಾಡಬಹುದು. ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಮಾತನಾಡಿ, ಕಟ್ಟಡಗಳ ಜೊತೆಗೆ ವ್ಯಕ್ತಿ ಭಾವನಾತ್ಮಕವಾಗಿ ಬೆಸೆದು ಕೊಂಡಿರುತ್ತಾನೆ. ಹೀಗಾಗಿ ಒಮ್ಮೆ ನಿರ್ಮಿಸಿದ ಮನೆಯಲ್ಲಿ ನಾಲ್ಕು ತಲೆಮಾರಿನವರು ಜೀವಿಸುವಷ್ಟು ಬಾಳಿಕೆಗೆ ಬರಬೇ ಕೆಂದು ಜನರು ಆಸೆ ಪಡುತ್ತಾರೆ. ಹೀಗಾಗಿ ಪ್ರಕೃತಿ ಸ್ನೇಹಿ ವಸ್ತುಗಳನ್ನು ಬಳಸಿ ಕಟ್ಟಡಗಳನ್ನು ನಿರ್ಮಿಸಬೇಕೆಂದು ಸಲಹೆ ನೀಡಿದರು.

ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ (ಇಂಡಿಯಾ)ದ ಅಧ್ಯಕ್ಷ ವೀರಶೆಟ್ಟಿ ಮಣಗೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮದ ಯಶಸ್ವಿಗೆ ಸಾಕಷ್ಟು ಜನ ಉದ್ಯಮಿಗಳು ಹಾಗೂ ವಿವಿಧ ಕಟ್ಟಡ ನಿರ್ಮಾಣ ಸಾಮಗ್ರಿ ಮಾರಾಟದ ಅಂಗಡಿಗಳ ಮಾಲಿಕರು ಸಹಕಾರ ನೀಡಿದ್ದಾರೆ. ಒಂದು ಯಶಸ್ವಿ ಕಟ್ಟಡ ನಿರ್ಮಿಸುವಲ್ಲಿ ಸಿವಿಲ್ ಇಂಜಿನಿಯರ್ ಹಿಡಿದು ಕಾರ್ಮಿಕರವರೆಗೆ ಸಾಕಷ್ಟು ಜನರ ಪರಿಶ್ರಮ ಇರುತ್ತದೆ. ಹೀಗಾಗಿ ಜಿಲ್ಲೆಯಲ್ಲಿ ವಿನೂತನ ಕಟ್ಟಡಗಳ ನಿರ್ಮಾಣಕ್ಕೆ ಎಲ್ಲರೂ ಕೂಡಿ ಶ್ರಮಿಸೋಣ ಎಂದರು.

# ಭಾರತೀಯ ಔಷಧ ಕಂಪನಿ ಮೇಲೆ ರಷ್ಯಾ ಕ್ಷಿಪಣಿ ದಾಳಿ: ಭಾರತದ ಕಂಪನಿಗಳೇ ಉಕ್ರೇನ್ ಗುರಿ

ಕೈವ್/ಮಾಸ್ಕೋ: ಉಕ್ರೇನ್ನ ರಾಜಧಾನಿ ಕೈವ್ನಲ್ಲಿರುವ ಭಾರತೀಯ ಔಷಧ ಕಂಪನಿಯ ಗೋಡೌನ್ ಮೇಲೆ ರಷ್ಯಾ ಕ್ಷಿಪಣಿ ದಾಳಿ ಮಾಡಿದೆ. ದಾಳಿಯ ಬಗ್ಗೆ ಪ್ರತಿಕ್ರಿಯಿಸಿರುವ ಭಾರತದಲ್ಲಿರುವ ಉಕ್ರೇನ್ ರಾಯಭಾರ ಕಚೇರಿ, ನಮ್ಮ ದೇಶದಲ್ಲಿರುವ ಭಾರತೀಯ ಕಂಪನಿಗಳನ್ನು ರಷ್ಯಾ ಟಾರ್ಗೆಟ್ ಮಾಡಿದೆ ಎಂದು ಆರೋಪಿಸಿದೆ.

ಈ ಬಗ್ಗೆ ಎಕ್ಸ್ನಲ್ಲಿ ಪೋಸ್ಟ್ ಮಾಡಿರುವ ಉಕ್ರೇನ್ನ ರಾಯಭಾರ ಕಚೇರಿ, ಭಾರತೀಯ ಔಷಧ ಕಂಪನಿ ಕುಸುಮ್ನ ಗೋದಾಮಿನ ಮೇಲೆ ರಷ್ಯಾ ದಾಳಿ ಮಾಡಿದೆ. ಭಾರತದೊಂದಿಗೆ ರಷ್ಯಾ ವಿಶೇಷ ಸ್ನೇಹವಿದೆ ಎಂದು ಹೇಳಿಕೊಳ್ಳುತ್ತಲೇ, ಭಾರತೀಯ ಕಂಪನಿಗಳನ್ನು ಗುರಿಯಾಗಿಸಿಕೊಂಡಿದೆ. ಮಕ್ಕಳು ಮತ್ತು ವೃದ್ಧರಿಗೆ ಮೀಸಲಾದ ಔಷಧಿಗಳನ್ನು ನಾಶಪಡಿಸಿದೆ ಎಂದು ಆಕ್ರೋಶ ಹೊರಹಾಕಿದೆ.

ಭಾರತೀಯ ಉದ್ಯಮಿ ರಾಜೀವ್ ಗುಪ್ತಾ ಒಡೆತನದ ಕುಸುಮ್, ಉಕ್ರೇನ್ನ ಅತಿದೊಡ್ಡ ಔಷಧ ಸಂಸ್ಥೆಗಳಲ್ಲಿ ಒಂದಾಗಿದೆ. ಅಗತ್ಯ ಔಷಧಗಳಿಗಾಗಿ ಕಂಪನಿಯ ಉತ್ಪನ್ನಗಳು ಉಕ್ರೇನ್ನಾದ್ಯಂತ ನಿರ್ಣಾಯಕವಾಗಿವೆ. ಇನ್ನೂ ಗೋಡೌನ್ ಮೇಲೆ ಕ್ಷಿಪಣಿ ದಾಳಿ ನಡೆದಿಲ್ಲ, ಡ್ರೋಣ್ ದಾಳಿ ನಡೆದಿದೆ ಎನ್ನಲಾಗಿದೆ. ಮೇ 9ರಂದು ವಿಶ್ವಸಮರದ ವಿಜಯ ದಿನಾಚರಣೆಗೆ ರಷ್ಯಾ ಪ್ರಧಾನಿಯವರನ್ನು ಆಹ್ವಾನಿಸಿದೆ. ಅದಕ್ಕೂ ಮುನ್ನ ಈ ದಾಳಿ ನಡೆದಿದೆ.



ಉಕ್ರೇನಿಯನ್ ನಗರದ ಸುಮಿ ಮೇಲೆ ರಷ್ಯಾದ ಕ್ಷಿಪಣಿ ದಾಳಿಯಲ್ಲಿ 20 ಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ನಗರದ ಹಂಗಾಮಿ ಮೇಯರ್ ಭಾನುವಾರ ತಿಳಿಸಿದ್ದಾರೆ. ಪಾಮ್ ಸಂಡೆ ಆಚರಿಸಲು ಸ್ಥಳೀಯ ಜನರು ಸೇರಿದ್ದಾಗ ಎರಡು ಬ್ಯಾಲಿಸ್ಟಿಕ್ ಕ್ಷಿಪಣಿಗಳು ನಗರದ ಹೃದಯಭಾಗಕ್ಕೆ ಅಪ್ಪಳಿಸಿದವು. ಈ ಪಾಮ್ ಸಂಡೆಯಂದು, ನಮ್ಮ ಸಮುದಾಯವು ಭೀಕರ ದುರಂತವನ್ನು ಅನುಭವಿಸಿದೆ ಎಂದು ಆರ್ಟೆಮ್ ಕೊಬ್ಜಾರ್ ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆಯಲ್ಲಿ ತಿಳಿಸಿದ್ದಾರೆ. ದುರದೃಷ್ಟವಶಾತ್, ನಮಗೆ ಈಗಾಗಲೇ 20ಕ್ಕೂ ಹೆಚ್ಚು ಸಾವುಗಳುತಿಳಿದಿವೆ. ರಷ್ಯಾ ಮತ್ತು ಉಕ್ರೇನ್ನ ಉನ್ನತ ರಾಜತಾಂತ್ರಿಕರು ಇಂಧನ ಮೂಲಸೌಕರ್ಯಗಳ ಮೇಲಿನ ದಾಳಿಗಳನ್ನು ನಿಲ್ಲಿಸಲು ಅಮೆರಿಕ–ಮಧ್ಯಸ್ಥಿಕೆಯ ತಾತ್ಕಾಲಿಕ ಒಪ್ಪಂದವನ್ನು ಉಲ್ಲಂಘಿಸಿದ್ದಾರೆ ಎಂದು ಪರಸ್ಪರ ಆರೋಪಿಸಿಕೊಂಡ ಒಂದು ದಿನದೊಳಗೆ ಈ ದಾಳಿ ಸಂಭವಿಸಿದೆ, ಇದು ಮೂರು ವರ್ಷಗಳ ಕಾಲ ನಡೆದ ಯುದ್ಧವನ್ನು ಕೊನೆಗೊಳಿಸುವ ಮಾತುಕತೆಯಲ್ಲಿನ ತೊಂದರೆಗಳನ್ನು ಎತ್ತಿ ತೋರಿಸಿದೆ.

# ಪದಚ್ಯುತ ಪಿಎಂ ಹಸೀನಾ ಸೇರಿ 50 ಜನರ ಬಂಧನಕ್ಕೆ ಬಾಂಗ್ಲಾ ಕೋರ್ಟ್ ವಾರಂಟ್

**ಢಾಕಾ,ಏ.13:** ಪದಚ್ಯುತ ಪ್ರಧಾನಿ ಶೇಕ್ ಹಸೀನಾ, ಅವರ ಸಹೋದರಿ ಶೇಕ್ ರೆಹನಾ, ಬ್ರಿಟಿಷ್ ಸಂಸದ ತುಲಿಪ್ ರಿಜ್ವಾನಾ ಸಿದ್ದಿಕ್ ಹಾಗೂ ಇತರ 50 ಮಂದಿಯ ವಿರುದ್ಧ ಬಾಂಗ್ಲಾದೇಶ ನ್ಯಾಯಾಲಯ ಬಂಧನ ವಾರೆಂಟ್ ಹೊರಡಿಸಿದೆ.

ಅಧಿಕಾರ ದುರ್ಬಳಕೆ ಮಾಡಿಕೊಂಡು ಅಕ್ರಮವಾಗಿ ಭೂಮಿ ಸ್ವಾಧೀನಪಡಿಸಿಕೊಂಡ ಆರೋಪದಡಿಯಲ್ಲಿ ಭ್ರಷ್ಟಾಚಾರ ನಿಗ್ರಹ ಆಯೋಗ ಸಲ್ಲಿಸಿದ್ದ ಮೂರು ಪ್ರತ್ಯೇಕ ದೋಷಾರೋಪ ಪಟ್ಟಿಗಳನ್ನು ಪರಿಗಣಿಸಿ ಮೆಟ್ರೋಪಾಲಿಟನ್ ಹಿರಿಯ ವಿಶೇಷ ನ್ಯಾಯಾಧೀಶ ಝಾಕಿರ್ ಹುಸೇನ್ ಅವರು ಈ ಆದೇಶ ಹೊರಡಿಸಿದ್ದಾರೆ ಎಂದು 'ಢಾಕಾ ಟ್ರಿಬ್ಯೂನ್' ಪತ್ರಿಕೆ ವರದಿ ಮಾಡಿದೆ.

ಬಂಧನ ಆದೇಶಗಳ ಜಾರಿಗೆ ಸಂಬಂಧಿಸಿದ ವರದಿಗಳ ಪರಿಶೀಲನೆಯನ್ನು ಏಪ್ರಿಲ್ 27ಕ್ಕೆ ನಿಗದಿಪಡಿಸಲಾಗಿದೆ ಎಂದು ಎಸಿಸಿ ಸಹಾಯಕ ನಿರ್ದೇಶಕ ಅಮಿನುಲ್ ಇಸ್ಲಾಂ ಅವರು ತಿಳಿಸಿರುವುದಾಗಿಯೂ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಬಂಧನ ಆದೇಶಗಳ ಅನುಷ್ಠಾನದ ಕುರಿತ ವರದಿಗಳನ್ನು ಪರಿಶೀಲಿಸಲು ನ್ಯಾಯಾಧೀಶ ಹೊಸೇನ್ ಏಪ್ರಿಲ್ 27 ಅನ್ನು ನಿಗದಿಪಡಿಸಿದ್ದಾರೆ ಎಂದು ಎಸಿಸಿ ಸಹಾಯಕ ನಿರ್ದೇಶಕ (ಪ್ರಾಸಿಕ್ಯೂಷನ್) ಅಮಿನುಲ್ ಇಸ್ಲಾಂ ತಿಳಿಸಿರುವುದಾಗಿಯೂ ವರದಿಯಲ್ಲಿದೆ.



ನಿವೇಶನ ಹಂಚಿಕೆಯಲ್ಲಿ ಅಕ್ರಮಗಳು ನಡೆದಿರುವ ಆರೋಪಕ್ಕೆ ಸಂಬಂಧಿಸಿದಂತೆ 53 ಜನರ ವಿರುದ್ಧ ಮೂರು ಪ್ರತ್ಯೇಕ ದೋಷಾರೋಪಗಳನ್ನು ಎಸಿಸಿ ಇತ್ತೀಚೆಗೆ ನ್ಯಾಯಾಲಯಕ್ಕೆ ಸಲ್ಲಿಸಿತ್ತು.

ಬಂಧನ ಆದೇಶಗಳ ಅನುಷ್ಠಾನದ ಕುರಿತ ವರದಿಗಳನ್ನು ಪರಿಶೀಲಿಸಲು ನ್ಯಾಯಾಧೀಶ ಹೊಸೇನ್ ಏಪ್ರಿಲ್ 27 ಅನ್ನು ನಿಗದಿಪಡಿಸಿದ್ದಾರೆ ಎಂದು ಎಸಿಸಿ ಸಹಾಯಕ ನಿರ್ದೇಶಕ (ಪ್ರಾಸಿಕ್ಯೂಷನ್) ಅಮಿನುಲ್ ಇಸ್ಲಾಂ ತಿಳಿಸಿರುವುದಾಗಿಯೂ ವರದಿಯಲ್ಲಿದೆ.

ನಿವೇಶನ ಹಂಚಿಕೆಯಲ್ಲಿ ಅಕ್ರಮಗಳು ನಡೆದಿರುವ ಆರೋಪಕ್ಕೆ ಸಂಬಂಧಿಸಿದಂತೆ 53 ಜನರ ವಿರುದ್ಧ ಮೂರು ಪ್ರತ್ಯೇಕ ದೋಷಾರೋಪಗಳನ್ನು ಎಸಿಸಿ ಇತ್ತೀಚೆಗೆ ನ್ಯಾಯಾಲಯಕ್ಕೆ ಸಲ್ಲಿಸಿತ್ತು. ಹಸೀನಾ ಸೇರಿದಂತೆ 53 ಆರೋಪಿಗಳು ನಾಪತ್ತೆಯಾಗಿದ್ದಾರೆ ಎಂದು ಬೆಂಗಾಳಿ ಪತ್ರಿಕೆ 'ಕಡಿಂಣುಂಟ ಂಟಂ' ಎಂದು ವರದಿ ಮಾಡಿದೆ.

ರಾಜುಕ್ ನಿವೇಶನ ಹಂಚಿಕೆ ಅಕ್ರಮಕ್ಕೆ ಸಂಬಂಧಿಸಿದಂತೆ ಹಸೀನಾ, ಅವರ ಪುತ್ರಿ ಸೈಮಾ ವಾಜೆದ್ ಪುತುಲ್ ಹಾಗೂ ಇತರ 17 ಆರೋಪಿಗಳ ವಿರುದ್ಧ ಇದೇ ನ್ಯಾಯಾಲಯ ಏಪ್ರಿಲ್ 10ರಂದು ಬಂಧನ ವಾರೆಂಟ್ ಹೊರಡಿಸಿತ್ತು.

ಸೈಮಾ, ನವದೆಹಲಿಯಲ್ಲಿರುವ ವಿಶ್ವ ಆರೋಗ್ಯ ಸಂಘಟನೆಯ (ಡಬ್ಲ್ಯುಎಚ್‌ಒ) ಆಗ್ನೇಯ ಏಷ್ಯಾ ಪ್ರಾದೇಶಿಕ ಸಂಸ್ಥೆಯ ನಿರ್ದೇಶಕಿಯಾಗಿ 2023ರ ನವೆಂಬರ್ 1ರಿಂದ ಕಾರ್ಯನಿರ್ವಹಿಸುತ್ತಿದ್ದಾರೆ.

ಕಳೆದ ವರ್ಷ ಬಾಂಗ್ಲಾದೇಶದಾದ್ಯಂತ ವಿದ್ಯಾರ್ಥಿಗಳು ತೀವ್ರ ಪ್ರತಿಭಟನೆ ನಡೆಸಿದ್ದರು. ಹೀಗಾಗಿ, 16 ವರ್ಷಗಳಿಂದ ಪ್ರಧಾನಿಯಾಗಿದ್ದ ಹಸೀನಾ ಅವರ ಅವಾಮಿ ಲೀಗ್ ಸರ್ಕಾರ 2024ರ ಆಗಸ್ಟ್ 5ರಂದು ಪತನಗೊಂಡಿತ್ತು. ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಹಸೀನಾ, ದೇಶದಿಂದ ಪಲಾಯನ ಮಾಡಿದ್ದಾರೆ. ಅದಾದ ಬಳಿಕ, ಕೊಲೆ, ಇತರ ಅಪರಾಧ ಪ್ರಕರಣಗಳು, ಭ್ರಷ್ಟಾಚಾರ ಸೇರಿದಂತೆ ವಿವಿಧ ಆರೋಪಗಳ ಅಡಿಯಲ್ಲಿ ಅವರ ವಿರುದ್ಧ ಹಲವು ಪ್ರಕರಣಗಳು ದಾಖಲಾಗಿವೆ.

# ಕೂಡಲೇ ಹೊರಡಿ– ಸ್ವಯಂ ಗಡೀಪಾರು ಆಗುವಂತೆ ವಿದೇಶಿಗರಿಗೆ ಅಮೆರಿಕ ಎಚ್ಚರಿಕೆ

**ವಾಷಿಂಗ್ಟನ್,ಏ.13:** ಸದ್ಯ ಅಮೆರಿಕಾದಲ್ಲಿ ದಿನಕ್ಕೊಂದು ಕಾನೂನುಗಳು ಬರುತ್ತಿವೆ. ಇದೀಗ 30 ದಿನಗಳಿಗಿಂತ ಹೆಚ್ಚು ಕಾಲ ಇರುವ ವಿದೇಶಿ ಪ್ರಜೆಗಳನ್ನು ಈ ಕೂಡಲೇ ಹೊರಡಿ ಎಂದು ಎಚ್ಚರಿಕೆ ನೀಡಲಾಗಿದೆ. ಈ ಕುರಿತು 'ಅಕ್ರಮ ವಿದೇಶಿಯರಿಗೆ ಸಂದೇಶ' ಎಂಬ ಶೀರ್ಷಿಕೆಯ ಹೇಳಿಕೆಯನ್ನು ಗೃಹ ಭದ್ರತಾ ಇಲಾಖೆಯು ಹಂಚಿಕೊಂಡಿದೆ. ಅದರಲ್ಲಿ ಅಮೆರಿಕಾದಲ್ಲಿ 30 ದಿನಗಳಿಗಿಂತ ಹೆಚ್ಚು ಕಾಲ ಇರುವ ವಿದೇಶಿ ಪ್ರಜೆಗಳು ಸರ್ಕಾರದಲ್ಲಿ ನೋಂದಾಯಿಸಿಕೊಳ್ಳಬೇಕು. ನಿಯಮ ಪಾಲಿಸದಿದ್ದಲ್ಲಿ ದಂಡ ಮತ್ತು ಜೈಲು ಶಿಕ್ಷೆ ವಿಧಿಸಲಾಗುವುದು ಎಂದು ವಾರ್ನಿಂಗ್ ಕೊಡಲಾಗಿದೆ.

ಅಧಿಕಾರಿಗಳ ಅನುಮತಿಯಿಲ್ಲದೆ ದೇಶದಲ್ಲಿಯೇ ಇರುವ ವಿದೇಶಿ ಪ್ರಜೆಗಳು ಸ್ವಯಂ–ಗಡೀಪಾರು ಆಗಬೇಕು ಎಂದು ಸೂಚಿಸಿದೆ. ಸ್ವಯಂ– ಗಡೀಪಾರು ಸುರಕ್ಷಿತ. ನಿಮ್ಮ ನಿರ್ಗಮನ ವಿಮಾನವನ್ನು ಆಯ್ಕೆ ಮಾಡುವ ಮೂಲಕ ನಿಮ್ಮ ಸ್ವಂತ ಷರತ್ತುಗಳ ಮೇಲೆ ಹೊರಡಿ. ನೀವು ಅಪರಾಧಿಯಲ್ಲದ ಅಕ್ರಮ ವಿದೇಶಿಯರಾಗಿ ಸ್ವಯಂ–ಗಡೀಪಾರು ಆದರೆ ಅಮೆರಿಕಾದಲ್ಲಿ ಗಳಿಸಿದ ಹಣವನ್ನು ನಿಮ್ಮ ಬಳಿಯೇ ಇಟ್ಟುಕೊಳ್ಳಬಹುದು ಎಂದು ತಿಳಿಸಿದೆ.

ಹೋಮ್‌ಲ್ಯಾಂಡ್ ಸೆಕ್ಯುರಿಟಿ ಇಲಾಖೆಯು ಕಾನೂನುಬಾಹಿರವಾಗಿ ನೆಲೆಸಿರುವ ವಿದೇಶಿಗರನ್ನು ಗುರುತಿಸಿದ ನಂತರ ತಕ್ಷಣ ಗಡೀಪಾರು ಮಾಡಲಾಗುತ್ತದೆ. ನೀವು ಅಂತಿಮ ಗಡೀಪಾರು ಆದೇಶವನ್ನು ಸ್ವೀಕರಿಸಿಯೂ ಉಳಿದುಕೊಂಡರೆ ದಿನಕ್ಕೆ 998 ಡಾಲರ್ (85,924 ರೂ.) ದಂಡ ವಿಧಿಸಲಾಗುವುದು. ನೀವು ಸ್ವಯಂ ಗಡೀಪಾರು ಮಾಡುವುದಾಗಿ ಹೇಳಿಯೂ ಹೋಗದಿದ್ದರೆ 1,000–5,000 ಡಾಲರ್ (86,096 ರೂ. ನಿಂದ 4,30,482 ರೂ. ವರೆಗೆ) ದಂಡ ಹಾಕಲಾಗುವುದು. ಕೊನೆಗೆ ಜೈಲು ವಾಸವನ್ನೂ ಅನುಭವಿಸಬೇಕಾಗುತ್ತದೆ ಎಂದು ಇಲಾಖೆ ಎಚ್ಚರಿಸಿದೆ.

# ಉಕ್ರೇನ್‌ನ ಸುಮಿ ನಗರದ ಮೇಲೆ ರಷ್ಯಾದಿಂದ ಭೀಕರ ಕ್ಷಿಪಣಿ ದಾಳಿ: 32 ಜನ ಸಾವು

**ಸುಮಿ, ಉಕ್ರೇನ್,ಏ.13:** ಉಕ್ರೇನ್‌ನ ಈಶಾನ್ಯ ಭಾಗದ ಪ್ರಮುಖ ನಗರವಾದ 'ಸುಮಿ' ಮೇಲೆ ರಷ್ಯಾ ಪಡೆಗಳು ಭಾನುವಾರ ಖಂಡಾಂತರ ಕ್ಷಿಪಣಿ ದಾಳಿ ಮಾಡಿವೆ. ರಷ್ಯಾ ಗಡಿ ಸಮೀಪ ಇರುವ ಸುಮಿ ನಗರದ ಹೃದಯ ಭಾಗದಲ್ಲೇ ಈ ಭೀಕರ ದಾಳಿ ನಡೆದಿದ್ದು ಪರಿಣಾಮವಾಗಿ ಮಹಿಳೆಯರು, ಮಕ್ಕಳು ಸೇರಿ 32 ಜನ ಮೃತಪಟ್ಟಿದ್ದಾರೆ. ಇತ್ತೀಚಿನ ದಿನಗಳಲ್ಲಿ ರಷ್ಯಾ ಉಕ್ರೇನ್ ಮೇಲೆ ನಡೆಸಿದ ಅತಿದೊಡ್ಡ ದಾಳಿ ಇದಾಗಿದೆ. ಸಾವು ನೋವಿನ ಸಂಖ್ಯೆ ಹೆಚ್ಚಾಗಬಹುದು ಎಂದು ವರದಿಗಳು ಹೇಳಿವೆ. ಭಾನುವಾರ ಉಕ್ರೇನ್ನಲ್ಲಿ ಪಾಮ್ ಸಂಡೇಯ ಸಂಭ್ರಮಾಚರಣೆ ನಡೆಯುತ್ತಿದ್ದ ವೇಳೆಯೇ ಈ ಭೀಕರ ದಾಳಿಯಾಗಿದ್ದು ಉಕ್ರೇನಿಗರನ್ನು ಕರಳುವಂತೆ ಮಾಡಿದೆ. ದಾಳಿಯ ಬಗ್ಗೆ ಪ್ರತಿಕ್ರಿಯಿಸಿರುವ ಉಕ್ರೇನ್ ಅಧ್ಯಕ್ಷ ಝೆಲೆನ್ "Only bastards do this" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಷ್ಯಾದ ಈ ದಾಳಿಯನ್ನು ಯುರೋಪ್ ಸೇರಿದಂತೆ ಅನೇಕ ಜಾಗತಿಕ ನಾಯಕರು ಖಂಡಿಸಿದ್ದಾರೆ. ಮಹಿಳೆ, ಮಕ್ಕಳನ್ನು, ಅಮಾಯಕರನ್ನು ಕೊಲ್ಲುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ್ದಾರೆ. ಜಾಗತಿಕ ನಾಯಕರೆಲ್ಲ ಒಂದಾಗಿ ರಷ್ಯಾದ ಮೇಲೆ ಒತ್ತಡ ಹೇರಿ ಯುದ್ಧ ನಿಲ್ಲಿಸಿ ಎಂದು ಝೆಲೆನ್ಸ್ಕಿ ಮತ್ತೊಮ್ಮೆ ಆಗ್ರಹಿಸಿದ್ದಾರೆ.



# ಸುಡಾನ್‌ನ ನಿರಾಶ್ರಿತರ ಪ್ರದೇಶದ ಮೇಲೆ ಆರ್‌ಎಸ್‌ಎಫ್ ದಾಳಿ

ಸುಡಾನ್ನ ಡಾರ್ಫರ್ ಪ್ರದೇಶದ ನಿರಾಶ್ರಿತ ಶಿಬಿರಗಳ ಮೇಲೆ ಅರೆಸೈನಿಕ ಗುಂಪು (ಖಖಈ) ದಾಳಿ ನಡೆಸಿ 100 ಕ್ಕೂ ಹೆಚ್ಚು ಜನರನ್ನು ಕೊಂದಿದೆ. ಈ ಕುರಿತು ವಿಶ್ವಸಂಸ್ಥೆಯಲ್ಲಿ ಸುಡಾನ್ನ ಮಾನವೀಯ ಸಂಯೋಜಕರಾದ ಕ್ಲೆಮೆಂಟೈನ್ ನ್ಕ್ವೇಟಾ–ಸಲ್ಮಿ ಪ್ರತಿಕ್ರಿಯೆ ನೀಡಿ, ಈ ದಾಳಿಯನ್ನು ಆರ್‌ಎಸ್‌ಎಫ್ ಮತ್ತು ಅವರ ಮಿತ್ರ ಹೋರಾಟಗಾರರು ನಡೆಸಿದ್ದು, ಈ ದಾಳಿಯಲ್ಲಿ 20 ಮಕ್ಕಳು ಮತ್ತು 9 ಪರಿಹಾರ ಕಾರ್ಯಕರ್ತರು ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ. ಏತನ್ಮಧ್ಯೆ, ಆರ್‌ಎಸ್‌ಎಫ್ ತನ್ನ ವಿರುದ್ಧದ ದೌರ್ಜನ್ಯದ ಆರೋಪಗಳನ್ನು ತಿರಸ್ಕರಿಸಿದೆ. ಹಾಗೂ ಈ ಆರೋಪಗಳನ್ನು ಸುಳ್ಳು ಮತ್ತು ಕಟ್ಟುಕಥೆ ಎಂದು ಹೇಳಿದೆ. ಸುಡಾನ್ನಲ್ಲಿ ಎರಡು ವರ್ಷಗಳ ಹಿಂದೆ ಅಂತರ್ಯುದ್ಧ ಪ್ರಾರಂಭವಾದಾಗಿನಿಂದ ಸೇನೆ ಮತ್ತು ಆರ್‌ಎಸ್‌ಎಫ್ (ಕ್ಷಿಪ್ರ ಬೆಂಬಲ ಪಡೆಗಳು) ನಡುವಿನ ಹೋರಾಟ ನಡೆಯುತ್ತಿದೆ. ಈ ಸಂಘರ್ಷವು 24,000 ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದುಕೊಂಡಿದೆ.

**100ಕ್ಕೂ ಹೆಚ್ಚು ಜನರ ಮಾರಣಹೋಮ**

# ಮುಂಬೈ ಇಂಡಿಯನ್ಸ್‌ಗೆ ರೋಚಕ ಗೆಲುವು

**ದೆಹಲಿ,ಏ.13:** ದೆಹಲಿಯ ಅರುಣ್ ಜೈಟ್ಲಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ 2025ರ ರೋಚಕ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ಗೆಲುವು ಸಾಧಿಸಿದೆ. ಸತತ ಸೋಲಿನಿಂದ ಕಂಗೆಟ್ಟಿದ್ದ ಮುಂಬೈ ಇಂಡಿಯನ್ಸ್ ಕೊನೆಗೂ ಈ ಆವೃತ್ತಿಯಲ್ಲಿ ಎರಡನೇ ಬಾರಿ ಗೆಲುವು ಸಾಧಿಸಿ ನಿಟ್ಟುಸಿರು ಬಿಟ್ಟಿದೆ. ಸತತ 4 ಪಂದ್ಯಗಳನ್ನು ಗೆದ್ದಿದ್ದ ಡೆಲ್ಲಿ ಕ್ಯಾಪಿಟಲ್ಸ್ ಮೊದಲ ಸೋಲು ಕಂಡಿದೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ 20 ಓವರ್ ಗಳಲ್ಲಿ 5 ವಿಕೆಟ್ ಕಳೆದುಕೊಂಡು 205 ರನ್ ಗಳಿಸಿತು. ರಿಯಾನ್ ರಿಕಲ್‌ಟನ್ 25 ಎಸೆತಗಳಲ್ಲಿ 41 ರನ್ ಗಳಿಸಿದರೆ, ಸೂರ್ಯಕುಮಾರ್ ಯಾದವ್ 28 ಎಸೆತಗಳಲ್ಲಿ 40 ರನ್ ಗಳಿಸಿದರು.

ತಿಲಕ್ ವರ್ಮಾ 33 ಎಸೆತಗಳಲ್ಲಿ 59 ರನ್ ಗಳಿಸಿದರೆ, ನಮನ್ ಧಿರ್ 17 ಎಸೆತಗಳಲ್ಲಿ ಅಜೇಯ 38 ರನ್ ಗಳಿಸಿದರು. ವಿಪ್ರಜ್ ನಿಗಮ್ ಮತ್ತು ಕುಲದೀಪ್ ಯಾದವ್ ತಲಾ 2 ವಿಕೆಟ್ ಪಡೆದರು. ಮುಖೇಶ್ ಕುಮಾರ್ 1 ವಿಕೆಟ್ ಪಡೆದರು.

206 ರನ್‌ಗಳ ಸವಾಲಿನ ಮೊತ್ತವನ್ನು ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್ ಮೊದಲ ಎಸೆತದಲ್ಲೇ ಆರಂಭಿಕ ಬ್ಯಾಟರ್ ಜೇಕ್ ಫ್ರೇಸರ್ ಮೆಕ್‌ಗುರ್ಕ್ ಅವರ ವಿಕೆಟ್ ಕಳೆದುಕೊಂಡಿತು. ಆದರೆ ಕರುಣ್ ನಾಯರ್ ಮತ್ತು ಅಭಿಷೇಕ್ ಪೊರೆಲ್ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಆಸರೆಯಾದರು. ಅಭಿಷೇಕ್ ಪೊರೆಲ್ 25 ಎಸೆತಗಳಲ್ಲಿ 33 ರನ್ ಗಳಿಸಿದರೆ, ಕರುಣ್ ನಾಯರ್ ಅಬ್ಬರಿಸಿದರು. ಮೂರು ವರ್ಷಗಳ ಬಳಿಕ ಮೊದಲ ಬಾರಿ ಐಪಿಎಲ್‌ನಲ್ಲಿ ಆಡುವ ಅವಕಾಶ ಪಡೆದ ಕರುಣ್ ನಾಯರ್, ಎರಡೂ ಕೈಗಳಿಂದ ಸಿಕ್ಕ ಅವಕಾಶ ಬಾಚಿಕೊಂಡರು. ಜಸ್ಪ್ರೀತ್ ಬುಮ್ರಾರಿಗೂ ಬೌಂಡರಿ ಸಿಕ್ಸರ್ ಬಾರಿಸಿ ಮುಂಬೈ ಇಂಡಿಯನ್ಸ್‌ಗೆ ದಂಗಾಗುವಂತೆ ಮಾಡಿದರು. 40 ಎಸೆತಗಳಲ್ಲೇ 12 ಬೌಂಡರಿ 5 ಭರ್ಜರಿ ಸಿಕ್ಸರ್ ಸಹಿತ 89 ರನ್ ಗಳಿಸಿದರು. 9ನೇ ಓವರ್ ನಲ್ಲಿ ಕೊನೆಯ ಮೂರು ಎಸೆತಗಳಲ್ಲಿ ಸತತ ಮೂರು ಆಟಗಾರರು ರನೌಟ್ ಆಗುವ ಮೂಲಕ ಡೆಲ್ಲಿ ಕ್ಯಾಪಿಟಲ್ಸ್ ಸೋಲು ಕಂಡಿತು. ಮೂರು ಮಿಂಚಿನ ರನೌಟ್ ಮಾಡಿದ ಮುಂಬೈ ಇಂಡಿಯನ್ಸ್ 12 ರನ್‌ಗಳ ರೋಚಕ ಗೆಲುವು ಸಾಧಿಸಿತು.

# ರಾಜಸ್ಥಾನ ವಿರುದ್ಧ ಆರ್‌ಸಿಬಿಗೆ 9 ವಿಕೆಟ್‌ಗಳಿಂದ ಜಯ

**ಜೈಪುರ, ಏ.13:** ಭಾನುವಾರ ಇಲ್ಲಿನ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಇಂಡಿಯನ್ ಪ್ರೀಮಿಯರ್‌ಲೀಗ್‌ನ 28ನೇ ಪಂದ್ಯದಲ್ಲಿ ಫಿಲ್ ಸಾಲ್ಟ್, ವಿರಾಟ್ ಕೊಹ್ಲಿ ಮತ್ತು ದೇವದತ್ ಪಡಿಕ್ಕಲ್ ಅವರ ವೈಟ್–ಬಾಲ್ ಬ್ಯಾಟಿಂಗ್ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್ಸಿಬಿ) ತಂಡವು ರಾಜಸ್ಥಾನ ರಾಯಲ್ಸ್ (ಆರ್‌ಆರ್) ವಿರುದ್ಧ ಒಂಬತ್ತು ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು. 174 ರನ್ ಬೆನ್ನಟ್ಟಿದ ಆರ್‌ಸಿಬಿ, ಸಾಲ್ಟ್ ಅವರ 33 ಎಸೆತಗಳಲ್ಲಿ 65 ರನ್, ಕೊಹ್ಲಿ ಅವರ 45 ಎಸೆತಗಳಲ್ಲಿ 62* ರನ್ ಮತ್ತು ಪಡಿಕ್ಕಲ್ ಅವರ 28 ಎಸೆತಗಳಲ್ಲಿ 40 ರನ್‌ಗಳ ಭರ್ಜರಿ ಶತಕದ ನೆರವಿನಿಂದ ಕೇವಲ 17.3 ಓವರ್‌ಗಳಲ್ಲಿ 1 ವಿಕೆಟ್‌ಗೆ 175 ರನ್ ಗಳಿಸಿ ಗುರಿಯನ್ನು ಅಣಕಿಸಿತು.

ಆರ್‌ಆರ್‌ನ ಬೌಲಿಂಗ್ ಮತ್ತು ಫೀಲ್ಡಿಂಗ್‌ನಲ್ಲಿ ಸಾಲ್ಟ್ ಕೇವಲ 28 ಎಸೆತಗಳಲ್ಲಿ ತಮ್ಮ ಅರ್ಧಶತಕವನ್ನು ಗಳಿಸಿದರು, ಇದು ಋತುವಿನ ಮೂರನೇ ಗೆಲುವು. ಜೈಸ್ವಾಲ್ ಮತ್ತು ಸಂದೀಪ್ ಶರ್ಮಾ ಅವರಿಂದ ಕೈಬಿಟ್ಟ ಅವಕಾಶಗಳಿಂದ ಅವರು ಬದುಕುಳಿದರು, ಮತ್ತು ಕವರ್ನಲ್ಲಿ ಮಿಸ್ಫೀಲ್ಡ್ ಮಾಡಿದ ನಂತರ ರನೌಟ್ ಆಗುವ ಹಂತಕ್ಕೆ ತಲುಪಿದರು, ಆದರೆ ಸಾಲ್ಟ್ ಅವರ ಅದೃಷ್ಟವನ್ನು ಗಳಿಸಿದರು. ಒಂಬತ್ತನೇ ಓವರ್ನಲ್ಲಿ ಡೀಪ್ ಮಿಡ್ವಿಕೆಟ್ನಲ್ಲಿ ಜೈಸ್ವಾಲ್‌ಗೆ ನೇರವಾಗಿ ಪುಲ್ ಮಾಡಿದ ನಂತರ ಅವರು ಅಂತಿಮವಾಗಿ 65 ರನ್ಗಳಿಗೆ ಔಟಾದರು, ಆದರೆ ಆ ಹೊತ್ತಿಗೆ ಆರ್ಸಿಬಿ 1 ವಿಕೆಟ್‌ಗೆ 92 ರನ್ ಗಳಿಸಿತ್ತು.



ಕೊಹ್ಲಿ ಋತುವಿನ ಮೂರನೇ ಅರ್ಧಶತಕವನ್ನು ಗಳಿಸಿದರು. ಆರ್‌ಆರ್‌ನ ದಾಳಿ ಕ್ಷೀಣಿಸಿದಾಗ ಅವರು ಪಡಿಕ್ಕಲ್ ಅವರೊಂದಿಗೆ 50 ರನ್‌ಗಳ ಸುಗಮ ಪಾಲುದಾರಿಕೆಯನ್ನು ಸಹ ಸ್ಥಾಪಿಸಿದರು. ಆರ್ಸಿಬಿಯ ಕ್ಲಿನಿಕಲ್ ಚೇಸ್ ಅವರಿಗೆ ನಿರ್ಣಾಯಕ ಗೆಲುವು ತಂದುಕೊಟ್ಟಿತು ಮಾತ್ರವಲ್ಲದೆ ಅವರ ನಿವ್ವಳ ರನ್ ದರವನ್ನು ಗಮನಾರ್ಹವಾಗಿ ಹೆಚ್ಚಿಸಿತು, ಮಿಡ್–ಟೇಬಲ್ ರೇಸ್ ಅನ್ನು ಬಿಗಿಗೊಳಿಸಿತು.

**ಸಂಕ್ಷಿಪ್ತ ಅಂಕಗಳು:** 20 ಓವರ್‌ಗಳಲ್ಲಿ ಆರ್‌ಆರ್ 173/4 (ಯಶಸ್ವಿ ಜೈಸ್ವಾಲ್ 75, ಧ್ರುವ್ ಜುರೆಲ್ 35*; ಹ್ಯಾಜಲ್ವುಡ್ 1/26, ಕೃನಾಲ್ 1/29)

**ಆರ್‌ಸಿಬಿ:** 17.3 ಓವರ್‌ಗಳಲ್ಲಿ 175/1 (ಫಿಲ್ ಸಾಲ್ಟ್ 65, ವಿರಾಟ್ ಕೊಹ್ಲಿ 62*, ದೇವದತ್ ಪಡಿಕ್ಕಲ್ 40*)

